ಸಂಪುಟ: 04 ಸಂಚಿಕೆ: 184 ಪುಟಗಳು: 08 ಸೋಮವಾರ 16 ಸೆಪ್ಟೆಂಬರ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

ಮುಂಜಾನೆ ಮಾತು

ಕಾಲ ಕೆಟ್ಟಿತೆಂದು ಜನರು ಹೇಳುತ್ತಾರೆ. ಆದರೆ, ಕಾಲ ಕೆಡುವುದಿಲ್ಲ. ಕೆಡುವುದು ಜನರ ನಡತೆ ಮತ್ತು ಆಚಾರ- ವಿಚಾರ ಮಾತ್ರ.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಕ್ರಾಂತಿ ಪರ್ವ ದೇಶದ ಗರ್ವ

ದೇಶಾದ್ಯಂತ ಪ್ರಯಾಣಿಕರಿಗೆ ಮತ್ತಷ್ಟು ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ನರೇಂದ್ರ ಮೋದಿ ಅವರು ಇಂದು ಏಕಕಾಲಕ್ಕೆ ಆರು ವಂದೇ ಭಾರತ್ ಎಕ್ಸ್ ಪ್ರೆಸ್ ರೈಲುಗಳಿಗೆ ಚಾಲನೆ ನೀಡಿದರು. ಈ ರೈಲುಗಳು ಟಾಟಾನಗರ-ಪಾಟ್ನಾ, ಭಾಗಲ್ಪುರ್-ದುಮ್ಕಾ-ಹೌರಾ, ಬ್ರಹಪುರ-ಟಾಟಾನಗರ, ಗಯಾ-ಹೌರಾ, ದಿಯೋಘರ್-ವಾರಾಣಸಿ ಮತ್ತು ರೂರ್ಕೆಲಾ-ಹೌರಾ ಮಾರ್ಗದಲ್ಲಿ ಸಂಚರಿಸಲಿವೆ.

ಅಭಿವೃದ್ಧಿಯ ಹೊಸ ಪರ್ವ ಆರಂಭ

ಜಾರ್ಖಂಡ್‌ನಲ್ಲಿ ಕರಮ್ ಹಬ್ಬದ ಶುಭ ದಿನ ಹೊಸ ವಂದೇ ಭಾರತ್ ರೈಲುಗಳು

ಹೊಸ ರೈಲುಗಳು ಎಲ್ಲೆಲ್ಲಿ ಸಂಚಾರ..

- ಟಾಟಾನಗರ - ಪಾಟ್ನಾ
- ಭಾಗಲ್ಪುರ್ - ದುಮ್ಕಾ - ಹೌರಾ
- ಬ್ರಹ್ಮಪುರ - ಟಾಟಾನಗರ
- ಗಯಾ - ಹೌರಾ
- ದಿಯೋಘರ್ - ವಾರಾಣಸಿ
- ರೂರ್ಕೆಲಾ – ಹೌರಾ

1 ಜಾರ್ಖಂಡ್‌ನ ಟಾಟಾನಗರದಲ್ಲಿ ಭಾನುವಾರ ಪ್ರಧಾನಿ ಮೋದಿ 6 ವಂದೇ ಭಾರತ್ ರೈಲುಗಳಿಗೆ ಚಾಲನೆ.

2 660 ಕೋಟಿ ರೂ.ಗಿಂತ ಹೆಚ್ಚಿನ ಮೌಲ್ಯದ ವಿವಿಧ ರೈಲ್ವೆ ಯೋಜನೆಗಳಿಗೆ ಶಂಕುಸ್ಥಾಪನೆ.

3 20 ಸಾವಿರ ಫಲಾನುಭವಿಗಳಿಗೆ ಮಂಜೂರಾತಿ ಪತ್ರ.

650 ಕೋಟಿ ರೂ.ಗೂ ಹೆಚ್ಚು ಮೌಲ್ಯದ ರೈಲ್ವೆಯೋಜನೆಗಳು ಏಕಕಾಲಕ್ಕೆ ಆರು ವಂದೇ ಭಾರತ್ ರೈಲುಗಳಿಗೆ ಪ್ರಧಾನಿ ಚಾಲನೆ

- ಉದಯವಾಹಿನಿ, ನವದೆಹಲಿ

ಹೊಸ ಮಾರ್ಗದಲ್ಲಿ ಪರಿಚಯಿಸಲಾಗಿರುವ ವಂದೇ ಭಾರತ್ ಎಕ್ಸ್ಪ್ರೆಸ್ ರೈಲುಗಳು ಸಾಮಾನ್ಯ ಪ್ರಯಾಣಿಕರು, ವೃತ್ತಿಪರರು, ವ್ಯಾಪಾರ ಮತ್ತು ವಿದ್ಯಾರ್ಥಿ ಸಮುದಾಯಕ್ಕೆ ಅನುಕೂಲ ಒದಗಿಸಲಿವೆ.

ಈ ರೈಲುಗಳು ದಿಯೋಘರ್ (ಜಾರ್ಖಂಡ್‌ನ ಬೈದ್ಯನಾಥ ಧಾಮ), ವಾರಾಣಸಿಯ ಕಾಶಿ ವಿಶ್ವನಾಥ ದೇವಸ್ಥಾನ (ಉತ್ತರ ಪ್ರದೇಶ), ಕಾಳಿಘಾಟ್, ಕೋಲ್ಕತ್ತಾದ ಬೇಲೂರು ಮಠ (ಪಶ್ಚಿಮ ಬಂಗಾಳ) ಮತ್ತಿತರ ಯಾತ್ರಾ ಸ್ಥಳಗಳಿಗೆ ಪ್ರಯಾಣ ಮಾಡುವ ಭಕ್ತರಿಗೆ ಅನುಕೂಲವಾಗಿದೆ ಎಂದು ರೈಲ್ವೆ ಇಲಾಖೆ ಹೇಳಿದೆ. ಈ ಪ್ರದೇಶಗಳ ಧಾರ್ಮಿಕ ಪ್ರವಾಸೋದ್ಯಮಕ್ಕೆ ಹೆಚ್ಚು ಸಹಾಯಕವಾಗಲಿದೆ. ಧನ್ಬಾದ್ನ ಕಲ್ಲಿದ್ದಲು ಗಣಿ ಉದ್ಯಮಗಳು, ಕೋಲ್ಕತ್ತಾದ ಸೆಣಬು ಕೈಗಾರಿಕೆಗಳು, ದುರ್ಗಾಪುರದಲ್ಲಿ ಕಬ್ಬಿಣ ಮತ್ತು ಉಕ್ಕಿನ ಸಂಬಂಧಿತ ಕೈಗಾರಿಕೆಗಳಿಗೆ ಸಹ ವಂದೇ ಭಾರತ್ ರೈಲು ಸಂಪರ್ಕದಿಂದ ಅನುಕೂಲವಾಗುವ ನಿರೀಕ್ಷೆ ಇದೆ.

ಹುಬ್ಬಳ್ಳಿ-ಪುಣೆ ರೈಲಿಗೆ ಚಾಲನೆ: ಸುಮಾರು 8,000 ಕೋಟಿ ರೂ.ಗಿಂತ ಹೆಚ್ಚಿನ ಮೊತ್ತದ ಬಹು ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಾಗಿದ್ದು, 30 ಮೆಗಾವ್ಯಾಟ್ ಸೋಲಾರ್ ಸಿಸ್ಟಮ್ ಉದ್ಘಾಟಿಸಿದ್ದಾರೆ. ಮೋದಿ ಭುಜ್-ಅಹಮದಾಬಾದ್ ಮಾರ್ಗದ ಭಾರತದ ಮೊದಲ ವಂದೇ ಮೆಟ್ರೋ ಸೇರಿದಂತೆ ಹಲವಾರು ವಂದೇ ಭಾರತ್ ರೈಲುಗಳ ಸಂಚಾರಕ್ಕೆ ಹಸಿರುನಿಶಾನೆ ತೋರಲಿದ್ದಾರೆ. ಇವುಗಳಲ್ಲಿ ನಾಗ್ಪುರ-ಸಿಕಂದರಾಬಾದ್, ಕೊಲ್ಹಾಪುರ-ಪುಣೆ, ಆಗ್ರಾ ಕ್ಯಾಂಟ್-ಬನಾರಸ್, ದುರ್ಗ-ವಿಶಾಖಪಟ್ಟಣಂ ಮತ್ತು ಪುಣೆ-ಹುಬ್ಬಳ್ಳಿ ಮತ್ತು ವಾರಣಾಸಿ-ದೆಹಲಿಗೆ 20 ಕೋಚ್‌ಗಳಿರುವ ವಂದೇ ಭಾರತ್ ರೈಲು ಸಂಚಾರಕ್ಕೆ ಹಸಿರು ನಿಶಾನೆ ತೋರಲಿದ್ದಾರೆ. ಉತ್ತರ ಕರ್ನಾಟಕದ ಹೆಬ್ಬಾಗಿಲು ಹುಬ್ಬಳ್ಳಿ ಮತ್ತು ಮಹರಾಷ್ಟ್ರದ ಪುಣೆ ನಡುವೆ ವಂದೇ ಭಾರತ್ ರೈಲುಗಳ ಸಂಚಾರ ಆರಂಭವಾಗಲಿದೆ. ಈ ಮೂಲಕ ಹುಬ್ಬಳ್ಳಿ ನಗರಕ್ಕೆ 2ನೇ ವಂದೇ ಭಾರತ್ ರೈಲು ಸಿಕ್ಕಿದೆ.

ಇದು ಲಕ್ಷಾಂತರ ಪ್ರಯಾಣಿಕರಿಗೆ ಐಷಾರಾಮಿ ಮತ್ತು ದಕ್ಷತೆಯನ್ನು ತಲುಪಿಸುವ ಅತ್ಯಾಧುನಿಕ ವೈಶಿಷ್ಟ್ಯಗಳನ್ನು ನೀಡುತ್ತದೆ ಎಂದು ಅದು ಸೇರಿಸಿದೆ. ವಂದೇ ಭಾರತ್ ಭಾರತದ ಮೊದಲ ಸ್ವದೇಶಿ ವಿನ್ಯಾಸ ಮತ್ತು ತಯಾರಿಸಿದ ಅರೆ-ಹೈ-ವೇಗದ ರೈಲು. ಮೊದಲ ವಂದೇ ಭಾರತ್ ರೈಲನ್ನು ಫೆಬ್ರವರಿ 15, 2019ರಂದು ಉದ್ಘಾಟಿಸಲಾಗಿತ್ತು. ರೈಲ್ವೇಯ ಪ್ರಕಾರ, ಇದುವರೆಗೆ ದೇಶಾದ್ಯಂತ 54 ವಂದೇ ಭಾರತ್ ರೈಲುಗಳು ಓಡುತ್ತಿವೆ. ಅವರು ಒಟ್ಟು ಸುಮಾರು 36,000 ಟ್ರಿಪ್‌ಗಳನ್ನು ಪೂರ್ಣಗೊಳಿಸಿದ್ದಾರೆ ಮತ್ತು 3.17 ಕೋಟಿ ಪ್ರಯಾಣಿಕರನ್ನು ಪ್ರಯಾಣಿಸಿದ್ದಾರೆ. ಮೂಲ ವಂದೇ ಭಾರತ್ ರೈಲು ಸೆಟ್ ಈಗ ವಂದೇ ಭಾರತ್ 2.0 ಆಗಿ ವಿಸ್ತರಿಸಿದೆ, ವೇಗದ ವೇಗವರ್ಧನೆ, ಕವಚ್, ಆಂಟಿ-ವೈರಸ್ ಸಿಸ್ಟಮ್ ಮತ್ತು ವೈಫೈ ಮುಂತಾದ ಇನ್ನಷ್ಟು ಸುಧಾರಿತ ವೈಶಿಷ್ಟ್ಯಗಳನ್ನು ಹೊಂದಿದೆ. ಭಾರತದ ರೈಲು ಜಾಲವು ವಿಸ್ತರಿಸುತ್ತಲೇ ಇರುವುದರಿಂದ, ಪ್ರಯಾಣಿಕರು ರಾಷ್ಟ್ರದ ವೈವಿಧ್ಯಮಯ ಅಗತ್ಯಗಳನ್ನು ಪೂರೈಸುವ ತಡೆರಹಿತ, ಆರಾಮದಾಯಕ ಮತ್ತು ಪರಿಣಾಮಕಾರಿ ಪ್ರಯಾಣದ ಭವಿಷ್ಯವನ್ನು ಎದುರು ನೋಡಬಹುದು.

ಯಾರಿಗೆಲ್ಲಾ ಅನುಕೂಲ.. :

6 ಮಾರ್ಗಗಳಲ್ಲಿ ಪರಿಚಯಿಸಲಾಗಿರುವ ವಂದೇ ಭಾರತ್ ಎಕ್ಸ್ಪ್ರೆಸ್ ರೈಲುಗಳು ಸಾಮಾನ್ಯ ಪ್ರಯಾಣಿಕರು, ವೃತ್ತಿಪರರು, ವ್ಯಾಪಾರ ಮತ್ತು ವಿದ್ಯಾರ್ಥಿ ಸಮುದಾಯಕ್ಕೆ ಅನುಕೂಲ ನೀಡುತ್ತವೆ. ಈ ರೈಲುಗಳು ದಿಯೋಘರ್(ಜಾರ್ಖಂಡ್‌ನ ಬೈದ್ಯನಾಥ ಧಾಮ), ವಾರಾಣಸಿಯ ಕಾಶಿ ವಿಶ್ವನಾಥ ದೇವಸ್ಥಾನ(ಉತ್ತರ ಪ್ರದೇಶ), ಕಾಳಿಘಾಟ್, ಕೋಲ್ಕತ್ತಾದ ಬೇಲೂರು ಮಠ(ಪಶ್ಚಿಮ ಬಂಗಾಳ) ಮತ್ತಿತ ಯಾತ್ರಾ ಸ್ಥಳಗಳಿಗೆ ತ್ವರಿತ ಪ್ರಯಾಣ ಒದಗಿಸಿ, ಈ ಪ್ರದೇಶದಲ್ಲಿ ಧಾರ್ಮಿಕ ಪ್ರವಾಸೋದ್ಯಮ ಉತ್ತೇಜಿಸುತ್ತದೆ. ಇದಲ್ಲದೆ, ಧನ್‌ಬಾದ್‌ನ ಕಲ್ಲಿದ್ದಲು ಗಣಿ ಉದ್ಯಮಗಳು, ಕೋಲ್ಕತ್ತಾದ ಸೆಣಬು ಕೈಗಾರಿಕೆಗಳು, ದುರ್ಗಾಪುರದಲ್ಲಿ ಕಬ್ಬಿಣ ಮತ್ತು ಉಕ್ಕಿನ ಸಂಬಂಧಿತ ಕೈಗಾರಿಕೆಗಳು ಸಹ ಪ್ರಮುಖ ಉತ್ತೇಜನ ಪಡೆಯುತ್ತವೆ ಎನ್ನುತ್ತಾರೆ ರೈಲ್ವೆ ಅಧಿಕಾರಿಗಳು.

ರೈಲ್ವೆ ಇಲಾಖೆ ಮಾಹಿತಿ

ದಿಯೋಘರ್ ಜಿಲ್ಲೆಯ ಮಧುಪುರ್ ಬೈಪಾಸ್ ಲೈನ್ ಮತ್ತು ಜಾರ್ಖಂಡ್‌ನ ಹಜಾರಿಬಾಗ್ ಜಿಲ್ಲೆಯ ಹಜಾರಿಬಾಗ್ ಟೌನ್ ಕೋಚಿಂಗ್ ಡಿಪೋಗೆ ಶಂಕುಸ್ಥಾಪನೆ ನೆರವೇರಿಸಿದರು. ಈ ಯೋಜನೆಯ ಕಾಮಗಾರಿ ಪೂರ್ಣಗೊಂಡರೆ, ಮಧುಪುರ್ ಬೈಪಾಸ್ ಮಾರ್ಗವು ಹೌರಾ-ದೆಹಲಿ ಮುಖ್ಯ ಮಾರ್ಗದಲ್ಲಿ ರೈಲುಗಳನ್ನು ಅಡೆತಡೆ ತಪ್ಪಿಸಲು ಅನುಕೂಲವಾಗುತ್ತದೆ. ಜತೆಗೆ, ಗಿರಿಡಿಹ್ ಮತ್ತು ಜಸಿದಿಹ್ ನಡುವಿನ ಪ್ರಯಾಣದ ಸಮಯ ಕಡಿಮೆ ಮಾಡಲು ಸಹಾಯ ಮಾಡುತ್ತದೆ, ಹಜಾರಿಬಾಗ್ ಟೌನ್ ಕೋಚಿಂಗ್ ಡಿಪೋ ಈ ನಿಲ್ದಾಣದಲ್ಲಿ ಕೋಚಿಂಗ್ ಸರಕು(ಸ್ಟಾಕ್)ಗಳ ನಿರ್ವಹಣೆಯನ್ನು ಸುಲಭಗೊಳಿಸಲು ಸಹಾಯ ಮಾಡುತ್ತದೆ ಎಂದು ರೈಲ್ವೆ ಇಲಾಖೆ ಮಾಹಿತಿ ನೀಡಿದೆ.

ಈಗಾಗಲೇ ಕೆಎಸ್‌ಆರ್ ಬೆಂಗಳೂರು-ಧಾರವಾಡ ರೈಲು ವಯಾ ಹುಬ್ಬಳ್ಳಿ ಸಂಚಾರವನ್ನು ನಡೆಸುತ್ತಿದೆ. ವರ್ಧಿತ ಸಂಪರ್ಕಕ್ಕಾಗಿ ಹೊಸ ರೈಲು ಸೇವೆಗಳನ್ನು ಸೇರಿಸುವುದರೊಂದಿಗೆ ವಂದೇ ಭಾರತ್ ಪೋರ್ಟ್ ಫೋಲಿಯೊ ನಿರಂತರವಾಗಿ ವಿಸ್ತರಿಸುತ್ತಿದೆ. ಮೇಕ್ ಇನ್ ಇಂಡಿಯಾ ಉಪಕ್ರಮದಡಿ ಸ್ಥಳೀಯವಾಗಿ ವಿನ್ಯಾಸಗೊಳಿಸಲಾಗಿದೆ,

ಕೇರಳ ಮೂಲದ ಇಬ್ಬರು ಅರೆಸ್ಟ್ ಚೆಲುವರಾಯಸ್ವಾಮಿ ಸ್ಪಷ್ಟನೆ

- ಉದಯವಾಹಿನಿ, ಮಂಡ್ಯ

ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನಲ್ಲಿ ಗಣೇಶ ವಿಸರ್ಜನೆ ವೇಳೆ ನಡೆದ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇರಳ ಮೂಲದ ಇಬ್ಬರನ್ನು ಬಂಧಿಸಲಾಗಿದೆ ಎಂದು ಸಚಿವ ಚೆಲುವರಾಯ ಸ್ವಾಮಿ ಸ್ಪಷ್ಟನೆ ನೀಡಿದರು. ನಾಗಮಂಗಲ ಗಲಭೆಯಲ್ಲಿ ಸಂಬಂಧ ಅಲ್ಲೇ ಬೇಕರಿಯಲ್ಲಿ ಕೆಲಸ ಮಾಡುತ್ತಿದ್ದ ಇಬ್ಬರು ಕೇರಳ ಮೂಲದವರನ್ನು ಘಟನೆಯಲ್ಲಿ ಭಾಗಿಯಾಗಿದ್ದಾರೆ ಎಂದು ಬಂಧಿಸಲಾಗಿದೆ. ಹಾಗಂತ ಕೇರಳದವರು ಗಲಭೆಗೆ ಬಂದು ಹೋಗಿದ್ದಾರೆ ಎಂದಲ್ಲ. ಗಲಭೆ ಸಂಬಂಧ ಸಂಪೂರ್ಣವಾಗಿ ವರದಿ ತರಿಸಿಕೊಳ್ಳೋಣ ಎಂದು ಸಚಿವ ಚಲುವರಾಯಸ್ವಾಮಿ ಹೇಳಿದರು. ಅಂಗಡಿಗಳಿಗೆ ಬೆಂಕಿ ಹಾಕಿದ್ದು ಮತ್ತು ಕಲ್ಲು ತೂರಲು ಮೊದಲು ಪ್ರಾರಂಭ ಮಾಡಿದ್ದು ಯಾರು ಎಂಬ ಮಾಹಿತಿ ಬೇಕಾಗುತ್ತದೆ. ಒಟ್ಟಾರೆ ಎರಡೂ ಕೋಮಿನವರು ಒಟ್ಟಾಗಿ ಎಲ್ಲಾ ಹಬ್ಬಗಳನ್ನು ಮಾಡಬೇಕೆಂಬ ತೀರ್ಮಾನವನ್ನು ಸಭೆಯಲ್ಲಿ ತೆಗೆದುಕೊಂಡಿದ್ದೇವೆ ಎಂದು ತಿಳಿಸಿದರು.

ಆಡಿಯೋ ಅವರದ್ದೇ ಎಂದು ಖಚಿತವಾದರೆ ಕಾನೂನು ಕ್ರಮ

- ಉದಯವಾಹಿನಿ, ತುಮಕೂರು

ಗುತ್ತಿಗೆದಾರನಿಗೆ ಜೀವ ಬೆದರಿಕೆ, ಜಾತಿ ನಿಂದನೆ, ಮಹಿಳೆಯರ ಬಗ್ಗೆ ಕೀಳುಮಟ್ಟದ ಪದಬಳಕೆ ಪ್ರಕರಣದಲ್ಲಿ ಬಂಧನಕ್ಕೀಡಾಗಿರುವ ಬಿಜೆಪಿ ಶಾಸಕ ಮುನಿರತ್ನ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವರು, ಈಗಾಗಲೇ ಮುನಿರತ್ನ ಅವರನ್ನು ಪೊಲೀಸರು ಬಂಧಿಸಿದ್ದು, ಎರಡು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ಪಡೆಯಲಾಗಿದೆ. ಆಡಿಯೋವನ್ನು ಎಫ್‌ಎಸ್‌ಎಲ್ ಗೆ ರವಾನಿಸಲಾಗಿದೆ. ಆಡಿಯೋ ಅವರದ್ದಾ, ಅಥವಾ ಅಲ್ಲವಾ ಎಂಬ ಬಗ್ಗೆ ಪರೀಕ್ಷಿಸಿ ದೃಢಪಡಿಸುತ್ತಾರೆ. ಅವರದ್ದೇ ಆಡಿಯೋ ಎಂದಾದರೆ ಕಾನೂನು ಪ್ರಕಾರ ಕ್ರಮ ಜರುಗಿಸಲಾಗುವುದು ಎಂದರು. ಇದೇ ವೇಳೆ ನಾಗಮಂಗಲ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖಾ ವರದಿ ಬರುವವರೆಗೂ ನಾನು ಏನೂ ಹೇಳುವುದಿಲ್ಲ ಎಂದು ತಿಳಿಸಿದರು. ವರದಿ ಬಂದ ಬಳಿಕ ಎಲ್ಲಾವೂ ಗೊತ್ತಾಗಲಿದೆ ಎಂದು ಹೇಳಿದರು.

ಮುನಿರತ್ನ ಬಂಧನ ದ್ವೇಷದ ರಾಜಕಾರಣ ಮಾಡಿಲ್ಲ: ಸಚಿವೆ

- ಉದಯವಾಹಿನಿ, ಬೆಳಗಾವಿ

'ಬಿಜೆಪಿ ಶಾಸಕ ಮುನಿರತ್ನ ಬಂಧಿಸಲು ನಾವು ಯಾವುದೇ ದ್ವೇಷದ ರಾಜಕಾರಣ ಮಾಡಿಲ್ಲ. ಮುನಿರತ್ನ ಅವರನ್ನು ಏಕೆ ಬಂಧಿಸಲಾಗಿದೆ ಎಂಬುದು ಇಡೀ ರಾಜ್ಯಕ್ಕೆ ಗೊತ್ತಿದೆ. ಇದಕ್ಕೆ ಕನ್ನಡಿ ಹಿಡಿಯಬೇಕಾದ ಅಗತ್ಯವಿಲ್ಲ' ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳಕರ ಹೇಳಿದರು. ಮುನಿರತ್ನ ಬಂಧಿಸಲು ಕಾಂಗ್ರೇಸ್‌ನವರ ದ್ವೇಷ ರಾಜಕಾರಣವೇ ಕಾರಣ' ಎಂಬ ಬಿಜೆಪಿಯವರ ಆರೋಪಕ್ಕೆ, ಇಲ್ಲಿ ಭಾನುವಾರ ಸುದ್ದಿಗಾರರಿಗೆ ಅವರು ಹೀಗೆ ಪ್ರತಿಕ್ರಿಯಿಸಿದರು. ಮುನಿರತ್ನ ಬಂಧಿಸಲು ಯಾರು ದ್ವೇಷದ ರಾಜಕಾರಣ ಮಾಡುತ್ತಾರೆ ಬೈಯಿರಿ ಅಥವಾ ಬ್ಲ್ಯಾಕ್‌ಮೇಲ್ ಮಾಡಿ ಎಂದು ಕಾಂಗ್ರೇಸ್ ನಾಯಕರು ಅವರಿಗೆ ಹೇಳಿದ್ದಾರಾ ಮಾಡಿದ್ದುಣ್ಣೋ ಮಾರಾಯ ಎನ್ನುವ ಸ್ಥಿತಿ ಅವರದ್ದಾಗಿದೆ' ಎಂದು ದೂರಿದರು. ಮಹಿಳೆಯರ ಬಗ್ಗೆ ಮುನಿರತ್ನ ಆಡಿದ ಕೀಳು ಮಾತುಗಳನ್ನು ಯಾರೂ ಸಹಿಸಲು ಸಾಧ್ಯವಿಲ್ಲ. ಜಾತಿ, ಜಾತಿಗಳ ಮಧ್ಯೆ ಸಂಘರ್ಷ ತರುವಂತಹ ಮಾತುಗಳನ್ನು ಯಾರೂ ಕೂಡ ಆಡಬಾರದು' ಎಂದರು.

ಗಲಾಟೆ ವಿಷಯ ಪ್ರಸ್ತಾಪಿಸಿದ ಮೋದಿ ವಿರುದ್ಧ ಜಾರಕಿಹೊಳಿ ಆಕ್ರೋಶ

- ಉದಯವಾಹಿನಿ, ಬೆಳಗಾವಿ

ಮಂಡ್ಯ ಜಿಲ್ಲೆಯ ನಾಗಮಂಗಲದ ಗಲಾಟೆ ವಿಷಯವನ್ನು ಪ್ರಧಾನಿ ನರೇಂದ್ರ ಮೋದಿ ತಮ್ಮ ಭಾಷಣದಲ್ಲಿ ಪ್ರಸ್ತಾಪಿಸಿದ ಕುರಿತು ಮಾತನಾಡಿದ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ, 'ಈ ವಿಷಯ ಬಿಟ್ಟು ಅವರಿಗೆ ಬೇರೆ ಏನಾದರೂ ಇದೆಯೇ ಎಂದು ಪ್ರಶ್ನಿಸಿದ್ದಾರೆ. 'ರಾಜ್ಯದಲ್ಲಿ 60 ಸಾವಿರ ಗಣಪನ ಮೂರ್ತಿಗಳಿವೆ. ಒಂದು ಕಡೆ ಆಕಸ್ಮಿಕವಾಗಿ ಇಂಥ ಘಟನೆ ನಡೆದಿರಬಹುದು. ಪೊಲೀಸರು ಆ ಬಗ್ಗೆ ಪರಿಶೀಲಿಸಿ ಕ್ರಮ ವಹಿಸುತ್ತಾರೆ. ಇವರಯಾಕೆ ಅದನ್ನು ಅಷ್ಟು ಗಂಭೀರವಾಗಿ ತೆಗೆದುಕೊಳ್ಳಬೇಕು' ಎಂದಿದ್ದಾರೆ. ಬಾಯಿಗೆ ಬಂದಂತೆ ಮಾತನಾಡಲು ಶಾಸಕ ಮುನಿರತ್ನ ಅವರಿಗೆ ನಾವು ಹೇಳಿದ್ದೇವಾ ಕಾಂಗ್ರೇಸ್, ಬಿಜೆಪಿ ಮತ್ತು ಜೆಡಿಎಸ್‌ನವರು ಹೇಳಿದ್ದರಾ' ಎಂದು ಜಾರಕಿಹೊಳಿ ಪ್ರಶ್ನಿಸಿದರು. ನನ್ನ ಬಂಧಿಸಲು ಕಾಂಗ್ರೇಸ್ ಪಿತೂರಿ ಮಾಡಿದೆ' ಎಂಬ ಮುನಿರತ್ನ ಹೇಳಿಕೆಗೆ, ಇಲ್ಲಿ ಭಾನುವಾರ ಸುದ್ದಿಗಾರರಿಗೆ ಹೀಗೆ ಪ್ರತಿಕ್ರಿಯಿಸಿದ ಅವರು, 'ಮುನಿರತ್ನ ಬಂಧನದಲ್ಲಿ ದ್ವೇಷದ ರಾಜಕಾರಣವಿಲ್ಲ. ತರಾತುರಿಯಲ್ಲಿ ನಾವು ಯಾರನ್ನೂ ಬಂಧಿಸಿಲ್ಲ' ಎಂದರು.

ಪೊಲೀಸರಿಂದ ಶಾಸಕ ಮುನಿರತ್ನ ತೀವ್ರ ವಿಚಾರಣೆ

- ಉದಯವಾಹಿನಿ, ಬೆಂಗಳೂರು

ಒಂದೂವರೆ ಗಂಟೆಗಳ ಕಾಲ ವಿಚಾರಣೆ

ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ ಮುನಿರತ್ನ ಅವರನ್ನು ವೈಯಾಲಿ ಕಾವಲ್ ಠಾಣೆ ಪೊಲೀಸರು ತೀವ್ರ ವಿಚಾರಣೆಗೊಳಪಡಿಸಿ ಪ್ರಕರಣಕ್ಕೆ ಸಂಬಂಧಿಸಿದಂತೆ ಹೇಳಿಕೆಯನ್ನು ಪಡೆದು ಕೊಂಡಿದ್ದಾರೆ.

ಕೋಲಾರ ಜಿಲ್ಲೆಯ ನಂಗಲಿ ಗ್ರಾಮದ ಬಳಿಯಿಂದ ಮುನಿರತ್ನ ಅವರನ್ನು ಕರೆತಂದು ಬಂಧನದ ಪ್ರಕ್ರಿಯೆ ಮುಗಿದ ನಂತರ ವೈದ್ಯಕೀಯ ತಪಾಸಣೆಗೊಳಪಡಿಸಿ ಬಳಿಕ ಠಾಣೆಗೆ ಕರೆತಂದು ವಿಚಾರಣೆಗೊಳಪಡಿಸಿದ್ದಾರೆ.

ನೀವು ಬಿಬಿಎಂಪಿ ಗುತ್ತಿಗೆದಾರ ಚೆಲುವರಾಜು ಅವರಿಗೆ ನಿಂದಿಸಿ ಲಂಚ ಕೇಳಿದ್ದೀರಾ ಬಿಬಿಎಂಪಿಯ ಮಾಜಿ ಸದಸ್ಯ ವೇಲು ನಾಯ್ಕರ್ ಅವರಿಗೆ ಏಕೆ ಜಾತಿನಿಂದನೆ ಮಾಡಿದ್ದೀರಿ ಅವರಿಗೂ, ನಿಮಗೂ ಏನು ಸಂಬಂಧ ಗುತ್ತಿಗೆಯಲ್ಲಿ ಅವರ ಪಾತ್ರವೇನು ನೀವು ಈ ರೀತಿ ಪದಗಳನ್ನು ಬಳಸಿ ನಿಂದನೆ ಮಾಡಬಹುದೇ ನೀವು ಜನಪ್ರತಿನಿಧಿಗಳು ಈ ರೀತಿ ಮಾತನಾಡುವುದು ಸರಿಯೇ ಎಂಬಿತ್ಯಾದಿ ಪ್ರಶ್ನೆಗಳನ್ನು ಎಸಿಪಿಯವರು ಕೇಳಿ ಮಾಹಿತಿಯನ್ನು ಪಡೆದುಕೊಂಡಿದ್ದಾರೆ ಎಂದು ತಿಳಿದುಬಂದಿದೆ. ಮಧ್ಯರಾತ್ರಿ 12ರಿಂದ 1.30ರವರೆಗೆ ಸುಮಾರು ಒಂದೂವರೆ ಗಂಟೆಗಳ ಕಾಲ ಎಸಿಪಿಯವರು ಮುನಿರತ್ನ ಅವರನ್ನು ವಿಚಾರಣೆಗೊಳಪಡಿಸಿದ್ದರೆಂದು ಗೊತ್ತಾಗಿದೆ. ಆ ಆಡಿಯೋದಲ್ಲಿ ಇರುವುದು ನನ್ನ ಧ್ವನಿಯಲ್ಲ. ನಾನು ಜನಪ್ರತಿನಿಧಿ. ಆ ರೀತಿ ಮಾತನಾಡಲಿಲ್ಲ. ನನ್ನ ವಿರುದ್ಧ ಪಿತೂರಿ ಹಾಗೂ ಷಡ್ಯಂತ್ರ ಮಾಡಿದ್ದಾರೆ ಎಂದು ಮುನಿರತ್ನ ತನಿಖಾಧಿಕಾರಿಗಳ ಪ್ರಶ್ನೆಗೆ ಉತ್ತರಿಸಿದ್ದಾರೆ ಎಂದು ತಿಳಿದುಬಂದಿದೆ.



ಸಿಎಂ ಸಿದ್ದರಾಮಯ್ಯ ಕ್ಷಮೆಯಾಚಿಸಬೇಕು

- ಉದಯವಾಹಿನಿ, ಬೆಂಗಳೂರು

ಗಣಪತಿ ಮೂರ್ತಿಯನ್ನು ಬಂಧಿಸಿ ಪೊಲೀಸ್ ಠಾಣೆಯಲ್ಲಿ ಇರಿಸಲಾಗಿದೆ. ಈ ಘಟನೆಗೆ ಸಿಎಂ ಸಿದ್ದರಾಮಯ್ಯ ಕ್ಷಮೆಯಾಚಿಸಬೇಕು ಎಂದು ಬಿಜೆಪಿ ಮುಖಂಡ ಎನ್. ರವಿಕುಮಾರ್ ಒತ್ತಾಯಿಸಿದರು. ನಾಗಮಂಗಲ ಪಟ್ಟಣದಲ್ಲಿ ಗಣಪತಿ ಉತ್ಸವದ ವೇಳೆ ಲಾಠಿ ಚಾರ್ಜ್ ಮಾಡಲಾಗಿದೆ. ಗಣಪತಿ ಮೂರ್ತಿಯನ್ನು ಬಂಧಿಸಿ ಪೊಲೀಸ್ ಠಾಣೆಯಲ್ಲಿ ಇರಿಸಲಾಗಿದೆ. ಇದು ಖಂಡನೀಯವಾಗಿದ್ದು, ಸಿದ್ದರಾಮಯ್ಯ ಅವರು ಕೂಡಲೇ ಕ್ಷಮೆಯಾಚಿಸಬೇಕು ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಾರ್ಯಕ್ರಮದ ವೇಳೆ ಭದ್ರತಾ ಲೋಪವೆಸಗಿದ್ದಾರೆ. ಅದೇ ರೀತಿ ಹಿಂದೆ ವಿಧಾನಸೌಧದಲ್ಲೂ ವ್ಯಕ್ತಿ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ತಾನುಳ್ಳೊಡುಂಟು: ನಿಜಗುಣರ ಪರಮಾನುಭವ ಬೋಧೆಯ ಮಾತು. ತಾನು ಕಾಣುವವನು ಅರಿಯುವವನು ಇದ್ದರೆ ನಾಮ ರೂಪಾತ್ಮಕ ಈ ಜಗತ್ತು ತೋರುವುದು. ತಾನೇ ಇಲ್ಲದಿದ್ದರೆ ಇದಾವುದೂ ತೋರದು. ಆದ್ದರಿಂದ ತನ್ನಿಂದಲೇ ಇದೆಲ್ಲ. ಕಲ್ಪಿತ ಪುರುಷನು ಈ ಜಗತ್ತನ್ನು ಕಾಣುವನು. ತನ್ನ ನಿಜ ಸ್ವರೂಪದ ಅರಿವಾದ ಬಳಿಕ ಕಲ್ಪಿತ ಪುರುಷನಿಲ್ಲ. ಆಗ ಜಗತ್ತು ತೋರದು. ತಾನೇ ತಾನಾದ ಅದ್ವಯ ಪರಮಾತ್ಮ ತತ್ತ್ವಮಾತ್ರ ಉಳಿಯುವುದು.

ದುಷ್ಟ ಶಕ್ತಿಗಳನ್ನು ನಾಶ ಮಾಡಲು ಪ್ರಜಾಪ್ರಭುತ್ವವಾದಿಗಳೇ ಎದ್ದುನಿಲ್ಲಿ

ನಮ್ಮ ಸಂವಿಧಾನ ಎತ್ತಿ ಹಿಡಿದಿರುವ ಬಹುತ್ವವನ್ನು ನಾವು ಬದುಕಿನಲ್ಲಿ ಆಚರಿಸೋಣ: ಸಿಎಂ ಸಿದ್ದರಾಮಯ್ಯ ಕರೆ

• ಉದಯವಾಹಿನಿ, ಬೆಂಗಳೂರು

ಏಕತೆ ನೆಪದಲ್ಲಿ ಸಮಾಜವನ್ನು ಒಡೆಯುವ, ಮನುಷ್ಯರನ್ನು ವಿಭಜಿಸುವ ವಿಚ್ಛಿದ್ರಕಾರಕ ದುಷ್ಟ ಶಕ್ತಿಗಳನ್ನು ನಾಶ ಮಾಡಲು ಪ್ರಜಾಪ್ರಭುತ್ವವಾದಿಗಳು ಎದ್ದುನಿಲ್ಲಿ ಎಂದು ಸಿಎಂ ಸಿದ್ದರಾಮಯ್ಯ ಕರೆ ನೀಡಿದರು. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾರಿತ್ರಿಕ ಮಾನವ ಸರಪಳಿ ಚಳವಳಿಯನ್ನು ವಿಧಾನಸೌಧದ ಗ್ರಾಂಡ್ ಸ್ಟೆಪ್ಸ್ ನಲ್ಲಿ ಉದ್ಘಾಟಿಸಿ ಮಾತನಾಡಿದರು. ನಮ್ಮ ಸಂವಿಧಾನ ಎತ್ತಿ ಹಿಡಿದಿರುವ ಬಹುತ್ವವನ್ನು ನಾವು ಬದುಕಿನಲ್ಲಿ ಆಚರಿಸೋಣ. ಆ ಮೂಲಕ ಸಮಾಜ ಒಡೆಯುವ ದುಷ್ಟರ ಷಡ್ಯಂತ್ರ ಸೋಲಿಸೋಣ. ಪ್ರಜಾಪ್ರಭುತ್ವಗಟ್ಟಿಗೊಳಿಸೋಣ ಎಂದರು.

ನಮ್ಮ ಬುದ್ಧ, ಬಸವಣ್ಣನ ಕಾಲದಲ್ಲೇ ನಮ್ಮಲ್ಲಿ ಪ್ರಜಾಪ್ರಭುತ್ವ, ಸಂಸದೀಯ ವ್ಯವಸ್ಥೆ ಇತ್ತು. ಅನುಭವ ಮಂಟಪ ಮೊದಲ ಪ್ರಜಾಪ್ರಭುತ್ವದ ಸಾಂಸ್ಥಿಕ ಸಂಕೇತ ಎಂದರು. 1949ರ ನವೆಂಬರ್ 25ನೇ ತಾರೀಕಿನಂದು ಬಾಬಾ ಸಾಹೇಬರು ಮಾಡಿದ ಭಾಷಣವನ್ನು ಪ್ರಸ್ತಾಪಿಸಿದ ಸಿಎಂ, ಆರ್ಥಿಕ-ಸಾಮಾಜಿಕ ಪ್ರಜಾಪ್ರಭುತ್ವ ಎಲ್ಲರಿಗೂ ಸಿಕ್ಕಾಗ ಮಾತ್ರ ರಾಜಕೀಯ ಸ್ವಾತಂತ್ರ್ಯಕ್ಕೆ ಅರ್ಥ ಬರುತ್ತದೆ. ತಾರಾತಮ್ಯ ಭಾರತದಲ್ಲಿ ಆಚರಣೆಯಲ್ಲಿ ಇರುವವರೆಗೂ ರಾಜಕೀಯ ಸ್ವಾತಂತ್ರ್ಯಕ್ಕೆ ಅರ್ಥ ಇಲ್ಲ ಎಂದರು. ಸಂವಿಧಾನದ ಪೀಠಿಕೆಯಲ್ಲಿ ಅತ್ಯಂತ ದೊಡ್ಡ ಮೌಲ್ಯಗಳಿವೆ. ಹೀಗಾಗಿಯೇ ಪ್ರತಿ ಶಾಲಾ ಕಾಲೇಜುಗಳಲ್ಲಿ ಇದನ್ನು ಓದಿಸುವ, ಅರ್ಥೈಸುವ , ಪಾಲಿಸುವ ಪ್ರಯತ್ನ ಮುನ್ನಡೆಸಿದ್ದೇವೆ ಎಂದರು. ನಮ್ಮ ರಾಷ್ಟ್ರಗೀತೆ ಮತ್ತು ನಮ್ಮ ನಾಡಗೀತೆಯಲ್ಲಿರುವ ಭಾರತ ಮತ್ತು ಕರ್ನಾಟಕ ನಮ್ಮದಾಗಬೇಕು. ಯಾವುದೇ ತಾರತಮ್ಯ ಇಲ್ಲದ ಶಾಂತಿಯ ತೋಟ ನಮ್ಮದಾಗಬೇಕು ಎಂದು ಕರೆ ನೀಡಿದರು.

ಈ ಬಿಜೆಪಿ ಮತ್ತು ಇವರ ಜೊತೆಗಿರುವ ವಿಚ್ಛಿದ್ರಕಾರಕ ಶಕ್ತಿ ಗಳು ಬಡವರ, ಮಧ್ಯಮ ವರ್ಗದ ವಿರೋಧಿಗಳು. ಇವರು ಬಡವರ ಪರವಾದ ಕಾರ್ಯಕ್ರಮಗಳು ಜಾರಿ ಆಗಲು ಬಿಡುವುದಿಲ್ಲ. ಆದ್ದರಿಂದ ಇವರನ್ನು ನಾವು ಸೋಲಿಸಬೇಕು ಎಂದರು. 20 ಲಕ್ಷಕ್ಕೂ ಹೆಚ್ಚು ಮಂದಿಯ ಮಾನವ ಸರಪಳಿ ರಚಿಸಿರುವುದೇ ದುಷ್ಟಶಕ್ತಿಗಳಿಗೆ ಎಚ್ಚರಿಕೆ ನೀಡಿ ಮನುಷ್ಯ ಸಮಾಜವನ್ನು ಬೆಸೆಯುವುದಾಗಿದೆ

- ಸಿದ್ದರಾಮಯ್ಯ, ಸಿಎಂ

ಉದ್ಘಾಟನೆ ಸಂದರ್ಭದಲ್ಲಿ ಪ್ರಜಾಪ್ರಭುತ್ವ ದಿನದ ರಾಯಭಾರಿ ಹರೇಕಳ ಹಾಜಪ್ಪ, ಪೌರ ಕಾರ್ಮಿಕ ತಾಯಂದಿರಾದ ನಾಗಲಕ್ಷ್ಮಿ, ಮಂಜುಳ ಹಾಗೂ ತೃತೀಯ ಲಿಂಗಿ ಪ್ರಿಯಾಂಕ ಮತ್ತು ಇಬ್ಬರು ವಿಶೇಷ ಚೇತನ ವಿದ್ಯಾರ್ಥಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಎಡ-ಬಲದಲ್ಲಿ ನಿಂತು ಪ್ರಜಾಪ್ರಭುತ್ವ ದಿನವನ್ನು ಅರ್ಥಪೂರ್ಣಗೊಳಿಸಿದರು.

ಸಮಾಜದಲ್ಲಿರುವ ಅಸಮಾನತೆ ತೊಡೆದು ಹಾಕುವವರೆಗೂ ದೇಶಕ್ಕೆ ಸಿಕ್ಕ ಸ್ವಾತಂತ್ರ್ಯಕ್ಕೆ ಅರ್ಥ ಇರುವುದಿಲ್ಲ. ನಮ್ಮ ಸರ್ಕಾರ ಸಮಾನತೆ ಸಾಧಿಸುವ ದಿಕ್ಕಿನಲ್ಲಿ, ಎಲ್ಲಾ ಜಾತಿ-ಎಲ್ಲಾ ಧರ್ಮದ ಬಡವರಿಗೆ, ಮಧ್ಯಮ ವರ್ಗದವರಿಗೆ ಶಕ್ತಿ ತುಂಬುವ ಕಾರ್ಯಕ್ರಮ ರೂಪಿಸಿ ಜಾರಿ ಮಾಡಿದ್ದೇವೆ.

ಏಕತೆ ನೆಪದಲ್ಲಿ ಸಮಾಜವನ್ನು ಒಡೆಯುವ ವಿಚ್ಛಿದ್ರಕಾರಕ ಶಕ್ತಿಗಳನ್ನು ನಾಶ ಮಾಡಲು ಪ್ರಜಾಪ್ರಭುತ್ವವಾದಿಗಳು ಎದ್ದುನಿಲ್ಲಬೇಕು. ಬನ್ನಿ ಎದ್ದು ನಿಲ್ಲೋಣ ಎಂದು ಕರೆ ನೀಡಿದರು.

ಏಕತೆ ಭಜನೆ ಮಾಡುವ ವಿಚ್ಛಿದ್ರಕಾರಕ ದುಷ್ಟ ಶಕ್ತಿಗಳು ಸಾಮಾಜಿಕ ನ್ಯಾಯ, ಸಮಾನತೆಯ ವಿರೋಧಿಗಳು. ಇವರು ಸಮಾಜದ ಶತ್ರುಗಳು ಇವರನ್ನು ಮೆಟ್ಟಿ ನಿಲ್ಲದ ಹೊರತು ಮಹಿಳೆಯರ, ದಲಿತರ, ಹಿಂದುಳಿದವರ ಹಕ್ಕುಗಳು, ಅವಕಾಶಗಳು ಸಿಗಲು ಸಾಧ್ಯವಾಗುವುದಿಲ್ಲ ಎಂದರು. ಶಾಸಕರಾದ ರಿಜ್ವಾನ್ ಅರ್ಷದ್ ಅವರು ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ, ಉಪಸಭಾಪತಿ ರುದ್ರಪ್ಪ ಲಮಾಣಿ, ಸಚಿವರುಗಳಾದ ಹೆಚ್.ಸಿ.ಮಹದೇವಪ್ಪ, ಪ್ರಿಯಾಂಕ್ ಖರ್ಗೆ, ಕೆ.ಜೆ.ಜಾರ್ಜ್, ದಿನೇಶ್ ಗುಂಡೂರಾವ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹಮದ್, ಯು.ಬಿ.ವೆಂಕಟೇಶ್ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

ಕನ್ನಡತಿಯ ಘರ್ಜನೆಗೆ ಬೆದರಿದ ಓಲಾ

• ಉದಯವಾಹಿನಿ, ಬೆಂಗಳೂರು

ಇತ್ತೀಚೆಗೆ ಕನ್ನಡದ ಗ್ರಾಹಕಿಯೋರ್ವರು, ಓಲಾ ಕಂಪನಿಯ ಎಲೆಕ್ಟ್ರಿಕ್ ಸ್ಕೂಟರ್ ಬಗ್ಗೆ ಅಸಮಾಧಾನ ಹೊರಹಾಕಿ, ಪ್ರಿಯ ಕನ್ನಡಿಗರೇ ದಯವಿಟ್ಟು ಓಲಾ ಸ್ಕೂಟರ್ ಖರೀದಿಸಬೇಡಿ. ಇದು ಡಬ್ಬಾ ಗಾಡಿ, ಓಲಾ ತಗೋಂಡ್ರೆ ನಿಮ್ಮ ಜೀವನ ಗೋಳು ಎಂಬ ಬರಹವುಳ್ಳ ಪೋಸ್ಟರ್ ಅನ್ನು ಸ್ಕೂಟರ್‌ಗೆ ಅಂಟಿಸಿದ್ದು ವೈರಲ್ ಆಗಿತ್ತು.

ನಿಶಾ ಗೌರಿ ಎಂಬುವವರು ತಮ್ಮ 'X' ಖಾತೆ ಮೂಲಕ ಸ್ಕೂಟರ್ ಫೋಟೋ, ವಿಡಿಯೋಗಳೊಂದಿಗೆ ಪೋಸ್ಟ್ ಮಾಡಿದ್ದರು. ಇದರ ಬೆನ್ನಲ್ಲೇ ಎಚ್ಚೆತ್ತ ಓಲಾ ಕಂಪನಿಯು, ಅಸಮಾಧಾನಿತ ಗ್ರಾಹಕಿಯನ್ನು ಸಂಪರ್ಕಿಸಿದ್ದಾರೆ.

ಸ್ಕೂಟರ್ ಸಮಸ್ಯೆ ಬಗೆಹರಿಸುವುದಾಗಿ ಕಂಪನಿಯು ಭರವಸೆ ನೀಡಿ ರಿಪೇರಿಗೆ ತೆಗೆದುಕೊಂಡು ಹೋಗಿದೆ. ಅಲ್ಲದೇ ನೊಂದ ಗ್ರಾಹಕಿಗೆ ಟೆಸ್ಟ್ ಡ್ರೈವ್ ಓಲಾ ಸ್ಕೂಟರ್ ಅನ್ನು ತಾತ್ಕಾಲಿಕವಾಗಿ ನೀಡಿದ್ದಾಗಿ ನಿಶಾ ಗೌರಿ ಎಂಬುವವರು ಟ್ವೀಟ್ ಮಾಡಿದ್ದಾರೆ. ನಮ್ಮ ಸಮಸ್ಯೆಯನ್ನು ಪರಿಹರಿಸಲು ಓಲಾದವರು ಇನ್ನು ಎಷ್ಟು ದಿನಗಳು ತೆಗೆದುಕೊಳ್ಳುತ್ತಾರೆ ಎಂಬುವುದು ತಿಳಿದಿಲ್ಲ ಎಂದೂ ಬರೆದುಕೊಂಡಿದ್ದಾರೆ.

ಅಂಗನವಾಡಿ ಕಾರ್ಯಕರ್ತೆಯರಿಂದ ವಿಧಾನಸೌಧ ಚಲೋ ಸೆ. 19ರಂದು

• ಉದಯವಾಹಿನಿ, ಬೆಂಗಳೂರು

ಅಂಗನವಾಡಿ ಉಳಿಸಿ ಬಲಪಡಿಸಿ ಎಂಬ ಘೋಷಣೆಯೊಂದಿಗೆ ಐದು ಪ್ರಮುಖ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಸೆಪ್ಟೆಂಬರ್ 19 ರಂದು ಅಂಗನವಾಡಿ ಕಾರ್ಯಕರ್ತೆಯರು ವಿಧಾನಸೌಧ ಚಲೋ ಹಮ್ಮಿಕೊಂಡಿದ್ದಾರೆ. ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಿಂದ ವಿಧಾನಸಭಾ ಚಲೋ ಆರಂಭವಾಗಲಿದೆ.

ರಾಜ್ಯದ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಪೂರೈಸುತ್ತಿರುವ ಪೌಷ್ಟಿಕ ಆಹಾರ ಪದಾರ್ಥಗಳು ಕಳಪೆಯಾಗಿದ್ದು, ಗುಣಮಟ್ಟ ಆಹಾರ ಪದಾರ್ಥ ಸರಬರಾಜು ಮಾಡಬೇಕು. 1975 ರಿಂದ ಸೇವೆ ಸಲ್ಲಿಸಿ ನಿವೃತ್ತರಾದ ಅಂಗನವಾಡಿ ಕಾರ್ಯಕರ್ತೆಯರಿಗೆ ಗ್ರಾಚ್ಯುಯಿಟಿ ನೀಡಬೇಕು. ಅಂಗನವಾಡಿ ಕಾರ್ಯಕರ್ತೆಯರಿಗೆ 15 ಸಾವಿರ ರೂ., ಸಹಾಯಕಿಯರಿಗೆ 10 ಸಾವಿರ ರೂ. ವೇತನ ನೀಡಬೇಕು. ಆಯ್ಕೆಯ ವಯೋಮಿತಿಯನ್ನು ಸಾಮಾನ್ಯ ವರ್ಗದವರಿಗೆ 38 ವರ್ಷ, ಎಸ್ಸಿ, ಎಸ್ಟಿ ಅಭ್ಯರ್ಥಿಗಳಿಗೆ 40 ವರ್ಷ ನಿಗದಿಪಡಿಸಬೇಕು ಎಂದು ಒತ್ತಾಯಿಸಿ ಹೋರಾಟ ಕೈಗೊಳ್ಳಲಾಗಿದೆ.

ರಾಜ್ಯದ ಅತಿ ಉದ್ದದ ಮಾನವ ಸರಪಳಿ ಪ್ರಶಸ್ತಿ ಸ್ವೀಕರಿಸಿದ ಸಚಿವ ಮಹದೇವಪ್ಪ

• ಉದಯವಾಹಿನಿ, ಬೆಂಗಳೂರು

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಬೀದರ್ ನಿಂದ ಚಾಮರಾಜನಗರದವರೆಗೆ 2500 ಕಿಲೋಮೀಟರ್ ಮಾನವ ಸರಪಳಿ ನಿರ್ಮಿಸಲಾಗಿದ್ದು, ಕಾರ್ಯಕ್ರಮ ಗಿನ್ನೆಸ್ ದಾಖಲೆಗೆ ಪಾತ್ರವಾಗಿದೆ. ವಿಧಾನಸೌಧದ ಮುಂದೆ ನಡೆದ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ ಕಾರ್ಯಕ್ರಮಕ್ಕೆ ಚಾಲನೆ ನಿಡಿದ್ದು, ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಗಿನ್ನೆಸ್ ವಿಶ್ವದಾಖಲೆ ಪ್ರಶಸ್ತಿ ಸ್ವೀಕರಿಸಿದ್ದಾರೆ.

ವಿಶ್ವಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ 2500 ಕಿ.ಮೀ. ಉದ್ದದ ಮಾನವ ಸರಪಳಿಯನ್ನು ರಾಜ್ಯಾದ್ಯಂತ ನಿರ್ಮಿಸುವ ಮೂಲಕ ವಿಶ್ವದಾಖಲೆಗೆ ಪಾತ್ರವಾಗಿದೆ. ಇದೇವೇಳೆ ಸಂವಿಧಾನದ ಮಹತ್ವಸಾರುವ ಪ್ರಸ್ತಾವನೆ ಓದುವುದು, ಪ್ರಜಾಪ್ರಭುತ್ವದ ರಕ್ಷಣೆಯ ಹೊಣೆಗಾರಿಕೆ ನೆನಪಿಸುವ ಜಾಗೃತಿ ಮೂಡಿ ಸಲಾಗಿದೆ. ರಾಜ್ಯಾದ್ಯಂತ 10ಲಕ್ಷ ಗಿಡಗಳನ್ನು ನೆಡಲಾಗಿದೆ. ಈ ವಿನೂತನ ಮತ್ತು ಬೃಹತ್ ಕಾರ್ಯಕ್ರಮಕ್ಕೆ ಲಂಡನ್‌ನ ವಿಶ್ವದಾಖಲೆ ಪರಿಶೀಲಿಸುವ ತಂಡ ಆಗಮಿಸಿದ್ದು, ಎಲ್ಲವೂ ದಾಖಲೆಗಳ ನಿಯಮದಂತಿರುವುದನ್ನು ವಿವಿಧ ಹಂತಗಳಲ್ಲಿ ಅಧ್ಯಯನ ಮಾಡಿ ನಂತರ ಕಾರ್ಯಕ್ರಮ ದಾಖಲೆಗಳ ನಿಯಮಕ್ಕೆ ಒಪ್ಪುವಂತೆ ಇದ್ದ ಹಿನ್ನಲೆ ಗಿನ್ನೆಸ್ ದಾಖಲೆ ಪ್ರಶಸ್ತಿ ನೀಡಲಾಗಿದೆ.

ಸಿಎಂ ಕಾರ್ಯಕ್ರಮದಲ್ಲಿ ಭದ್ರತಾ ವೈಫಲ್ಯ ವೇದಿಕೆಯತ್ತ ನುಗ್ಗಿದ ವ್ಯಕ್ತಿ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಾರ್ಯಕ್ರಮದಲ್ಲಿ ಮತ್ತೆ ಭದ್ರತಾ ವೈಫಲ್ಯವಾಗಿದ್ದು, ವ್ಯಕ್ತಿಯೋರ್ವ ವೇದಿಕೆಗೆ ನುಗ್ಗಿ ಬಂದು ಹೈಡ್ರಾಮಾ ನಡೆಸಿ ರುವ ಘಟನೆ ವಿಧಾನಸೌಧದಲ್ಲಿ ನಡೆದಿದೆ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಭಾನುವಾರ ಚಾರಿತ್ರಿಕ ಮಾನವ ಸರಪಳಿ ಚಳವಳಿಯನ್ನು ವಿಧಾನಸೌಧದ ಗ್ರಾಂಡ್ ಸ್ಟೆಪ್ಸ್ ನಲ್ಲಿ ಉದ್ಘಾಟಿಸಿದರು.

ಕಾರ್ಯಕ್ರಮ ನಡೆಯುತ್ತಿದ್ದ ವೇಳೆ ವ್ಯಕ್ತಿಯೊಬ್ಬ ವೇದಿಕೆಗೆ ಜಂಪ್ ಮಾಡಿದ್ದಾನೆ. ಶಾಲುಗಳನ್ನು ಹಾಕಿಕೊಂಡಿದ್ದ ವ್ಯಕ್ತಿ ಏಕಾಏಕಿ ವೇದಿಕೆಗೆ ನುಗ್ಗಿ ಬಂದಿದ್ದಾನೆ. ಅರೇಕ್ಷಣ ಸಿಎಂ ಹಾಗೂ ಸಚಿವರು ಗಾಬರಿಯಾಗಿದ್ದಾರೆ. ತಕ್ಷಣ ಎಚ್ಚೆತ್ತ ಭದ್ರತಾ ಸಿಬ್ಬಂದಿ, ಪೊಲೀಸರು ಯುವಕನನ್ನು ವಶಕ್ಕೆ ಪಡೆದಿದ್ದಾರೆ. ಆದಾಗ್ಯೂ ಯುವಕ ತನ್ನ ಬಳಿ ಇದ್ದ ಶಾಲನ್ನು ತೆಗೆದು ಸಿಎಂ ಅತ್ತ ಎಸೆದು ಹೈ ಡ್ರಾಮ ಮಾಡಿದ್ದಾನೆ. ಸದ್ಯ ವ್ಯಕ್ತಿಯನ್ನು ವಿಧಾನಸೌಧ ಪೊಲೀಸರು ವಶಕ್ಕೆ ಪಡೆದು, ವಿಚಾರಣೆ ನಡೆಸಿದ್ದಾರೆ.

ಹಳೆ ವಾಹನಗಳಿಗೆ ಎಚ್‌ಎಸ್‌ಆರ್‌ಪಿ ಅಳವಡಿಕೆ ಗಡುವು ಡಿಸೆಂಬರ್‌ವರೆಗೆ ವಿಸ್ತರಣೆ ಸಾಧ್ಯತೆ

• ಉದಯವಾಹಿನಿ, ಬೆಂಗಳೂರು

ಹಳೆ ವಾಹನಗಳಿಗೆ ಎಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಸಲು ನೀಡಲಾಗಿದ್ದ ಗಡುವು ಸೆ. 15ಕ್ಕೆ ಮುಕ್ತಾಯವಾಗಿದ್ದು, ಎಚ್‌ಎಸ್‌ಆರ್‌ಪಿ ಅಳವಡಿಸಿದ ವಾಹನಗಳಿಗೆ ದಂಡ ವಿಧಿಸುವ ನಿರ್ಧಾರವನ್ನು ಸದ್ಯಕ್ಕೆ ಸಾರಿಗೆ ಇಲಾಖೆ ಕೈಗೊಂಡಿಲ್ಲ. ನಂಬರ್ ಪ್ಲೇಟ್ ಅಳವಡಿಸಲು ಡಿಸೆಂಬರ್ ವರೆಗೆ ಗಡುವು ವಿಸ್ತರಿಸುವ ಸಾಧ್ಯತೆ ಇದೆ.

ಎಚ್‌ಎಸ್‌ಆರ್‌ಪಿ ಅಳವಡಿಸಿದ ವಾಹನಗಳಿಗೆ ಸೆ. 16ರಿಂದ ದಂಡ ವಿಧಿಸಲಾಗುವುದು ಎಂದು ಹೇಳಲಾಗಿತ್ತು. ಆದರೆ, ಈ ಸಂಬಂಧ ಸಲ್ಲಿಕೆಯಾದ ಅರ್ಜಿ ವಿಚಾರಣೆ ಸೆ. 18ರಂದು ಹೈಕೋರ್ಟ್ ನಲ್ಲಿ ನಡೆಯಲಿದೆ. ಹೀಗಾಗಿ ಸದ್ಯಕ್ಕೆ ಸಾರಿಗೆ ಇಲಾಖೆ ಅಧಿಕಾರಿಗಳು ದಂಡ ವಿಧಿಸುವ ಬಗ್ಗೆ ತೀರ್ಮಾನಿಸಿಲ್ಲ. ವಿಚಾರಣೆಯ ನಂತರ ದಂಡ ವಿಧಿಸಬೇಕೆ ಅಥವಾ ಗಡುವು ವಿಸ್ತರಿಸಬೇಕೆ ಎನ್ನುವ ನಿರ್ಧಾರ ಕೈಗೊಳ್ಳಲಿದ್ದು, ಬಹುತೇಕ ಡಿಸೆಂಬರ್ ವರೆಗೂ ಗಡುವು ವಿಸ್ತರಿಸುವ ಸಾಧ್ಯತೆ ಇದೆ. ಇಲ್ಲದಿದ್ದಲ್ಲಿ ಹೈಕೋರ್ಟ್ ವಿಚಾರಣೆ ನಂತರ ದಂಡ ವಿಧಿಸುವ ಬಗ್ಗೆ ತೀರ್ಮಾನಿಸಲಾಗುವುದು ಎಂದು ಹೇಳಲಾಗಿದೆ. 2019ರ ಏಪ್ರಿಲ್ 1ಕ್ಕಿಂತ ಮೊದಲು ನೋಂದಣಿಯಾದ ಹಳೆಯ ವಾಹನಗಳಿಗೆ ಎಚ್‌ಎಸ್‌ಆರ್‌ಪಿಅಳವಡಿಕೆ ಕಡ್ಡಾಯವಾಗಿದೆ. ರಾಜ್ಯದಲ್ಲಿ ಇನ್ನೂ ಸುಮಾರು 1 ಕೋಟಿ ವಾಹನಗಳಿಗೆ ಎಚ್‌ಎಸ್‌ಆರ್‌ಪಿ ಅಳವಡಿಸಿಕೊಳ್ಳಬೇಕಿರುವುದರಿಂದ ಗಡುವು ವಿಸ್ತರಿಸುವ ಸಾಧ್ಯತೆ ಇದೆ ಎನ್ನಲಾಗಿದೆ.

ಲೊಕೇಷನ್ ಟ್ರ್ಯಾಕಿಂಗ್ ಡಿವೈಸ್ ಅಳವಡಿಕೆಗೆ ಲಾರಿ ಮಾಲೀಕರ ವಿರೋಧ: ಮುಷ್ಕರದ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ಉದಯವಾಹಿನಿ ಚಿತ್ರ

ವೆಹಿಕಲ್ ಲೊಕೇಷನ್ ಟ್ರ್ಯಾಕಿಂಗ್ ಡಿವೈಸ್ ಅಳವಡಿಕೆಗೆ ಲಾರಿ ಮಾಲೀಕರ ಸಂಘದಿಂದ ವಿರೋಧ ವ್ಯಕ್ತವಾಗಿದೆ. VLTD ಅಳವಡಿಸುವ ಆದೇಶವನ್ನು ಸರ್ಕಾರ ಹಿಂಪಡೆಯಬೇಕು. ಇಲ್ಲದಿದ್ದರೆ ಸರಕು ಸಾಗಣೆ ಲಾರಿ ಮುಷ್ಕರ ನಡೆಸ ಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ. ಪ್ರಯಾಣಿಕರ ಸುರಕ್ಷತೆ ದೃಷ್ಟಿಯಿಂದ ಸಾರ್ವಜನಿಕ ಸೇವೆ ನೀಡುವ ಕ್ಯಾಬಿಎಸ್, ಶಾಲಾ ವಾಹನಗಳು, ಬಸ್ ಸೇರಿದಂತೆ ಯೆಲ್ಲೋ ಬೋರ್ಡ್ ಅಳವಡಿಸಿರುವ ವಾಹನಗಳು VLTD ಅಳವಡಿಸಿಕೊಳ್ಳುವ ಗಡುವು ಮುಕ್ತಾಯವಾಗಿದ್ದು, VLTD ಅಳವಡಿಸಿಕೊಳ್ಳದ ವಾಹನಗಳಿಗೆ ದಂಡ ವಿಧಿಸುವ ಜೊತೆಗೆ ಫಿಟ್ನೆಸ್ ಪ್ರಮಾಣ ಪತ್ರ ನೀಡದಿರಲು ಸಾರಿಗೆ ಇಲಾಖೆ ನಿರ್ಧರಿಸಿದೆ. ಆದರೆ, ಖಾಸಗಿ ಸಾರಿಗೆ ಸಂಘಟನೆಗಳ ಒಕ್ಕೂಟವು ವಾಹನಗಳ ವಿರುದ್ಧ ಸಾರಿಗೆ ಇಲಾಖೆ ಕ್ರಮ ಕೈಗೊಂಡಲ್ಲಿ ಆರ್.ಟಿ.ಒ. ಕಚೇರಿ ಎದುರು ವಾಹನಗಳನ್ನು ನಿಲ್ಲಿಸಿ ಪ್ರತಿಭಟನೆ ನಡೆಸುವ ಎಚ್ಚರಿಕೆ ನೀಡಿದೆ.

ಇದೀಗ ಲಾರಿ ಮಾಲೀಕರ ಸಂಘದ ಪ್ರಮುಖರು ಕೂಡ ಸಾರಿಗೆ ಇಲಾಖೆ ನಿರ್ಧಾರ ಬದಲಿಸದಿದ್ದರೆ ರಾಜ್ಯಾದ್ಯಂತ ಸರಕು ಸಾಗಣೆ ವಾಹನಗಳನ್ನು ಸ್ಥಗಿತಗೊಳಿಸಿ ಅನಿರ್ದಿಷ್ಟಾವಧಿ ಮುಷ್ಕರ ಕೈಗೊಳ್ಳುವುದಾಗಿ ಹೇಳಿದ್ದಾರೆ. ಲಾರಿಗಳು ಯೆಲ್ಲೋ ಬೋರ್ಡ್ ಅಳವಡಿಸಿ ಕೊಂಡಿದ್ದರೂ ಯಾವುದೇ ಸಾರ್ವಜನಿಕ ಸೇವೆ ನೀಡುತ್ತಿಲ್ಲ, ಲಾರಿಗಳಲ್ಲಿ ಚಾಲಕರು ಮತ್ತು ಕ್ಲೀನರ್‌ಗಳು ಮಾತ್ರ ಸಂಚರಿಸುತ್ತಾರೆ. ಹೀಗಾಗಿ ಲಾರಿಗಳಿಗೆ VLTD ಅಳವಡಿಕೆ ಅವಶ್ಯಕತೆ ಇಲ್ಲ ಎಂದು ಹೇಳಲಾಗಿದೆ.

ನಾಗಮಂಗಲಕ್ಕೆ ಬಿಜೆಪಿ ಸತ್ಯ ಶೋಧನಾ ಸಮಿತಿ ಭೇಟಿ

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಸತ್ಯಶೋಧನಾ ಸಮಿತಿಯು ಇಂದು ನಾಗಮಂಗಲಕ್ಕೆ ಭೇಟಿ ಕೊಡಲಿದೆ. ಅಲ್ಲಿನ ಮಾಹಿತಿಯನ್ನು ಪಡೆಯಲಿದೆ ಎಂದು ರಾಜ್ಯದ ಮಾಜಿ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ್ ಅವರು ತಿಳಿಸಿದರು.

ಮಾಧ್ಯಮ ಪ್ರತಿನಿಧಿಗಳ ಜೊತೆ ಭಾನುವಾರ ಮಾತನಾಡಿದ ಅವರು, ನನ್ನ ನೇತೃತ್ವದಲ್ಲಿ ಬಿಜೆಪಿ ಸತ್ಯಶೋಧನಾ ಸಮಿತಿಯನ್ನು ರಚಿ ಸಿ

ಪೊಲೀಸ್ ಗಾಡೀಲಿ ವೈರಲ್ ಆಗಿದ್ದ ಗಣೇಶನಿಗೆ ಸಿಕ್ತು ವಿಸರ್ಜನೆ ಭಾಗ್ಯ

ಪ್ರತಿಭಟನೆ ವೇಳೆ ಗಾಡಿಯಲ್ಲಿ ಕೂರಿಸಿದ್ದ ಮೂರ್ತಿಯನ್ನು ಭಾನುವಾರ ಪೊಲೀಸರೇ ಖುದ್ದು ವಿಸರ್ಜನೆ

• ಉದಯವಾಹಿನಿ, ಮಂಡ್ಯ

ಉದಯವಾಹಿನಿ ಚಿತ್ರ

ಹಿಂದೂಗಳ ಮೇಲೆ ದಾಳಿ

ಜಿಲ್ಲೆಯ ನಾಗಮಂಗಲದಲ್ಲಿ ನಡೆದ ಗಲಭೆ ಖಂಡಿಸಿ ಹಿಂದೂ ಸಂಘಟನೆಗಳು ಬೆಂಗಳೂರಿನ ಟೌನ್‌ಹಾಲ್ ಬಳಿ ಬೃಹತ್ ಪ್ರತಿಭಟನೆ ನಡೆಸಿದ್ದವು. ನಾಗಮಂಗಲದಲ್ಲಿ ಗಣೇಶನ ಮೆರವಣಿಗೆ ಮೇಲೆ ಕಲ್ಲು ತೂರಾಟ ಖಂಡಿಸಿ ಇಲ್ಲಿಯೂ ಗಣೇಶನ ಮೂರ್ತಿ ತಂದು ಪ್ರತಿಭಟನೆ ನಡೆಸುತ್ತಿದ್ದರು.

ಈ ವೇಳೆ ಪೊಲೀಸರು ಅವರನ್ನು ವಶಕ್ಕೆ ಪಡೆದು, ಆ ಮೂರ್ತಿಯನ್ನು ಪೊಲೀಸರ ವಾಹನದಲ್ಲಿ ಕೂರಿಸಿದ್ದರು. ಗಣೇಶ ಮೂರ್ತಿ ಪೊಲೀಸರ ಗಾಡಿ ಯಲ್ಲಿದ್ದ ಫೋಟೋವೊಂದು ಎಲ್ಲೆಡೆ ಹರಿದಾಡಿತ್ತು. ದೇಶಾದ್ಯಂತ ಪೊಲೀಸರ ಈ ನಡೆಗೆ ಭಾರಿ ವಿರೋಧ ಕೂಡ ವ್ಯಕ್ತವಾಗಿತ್ತು. ಪ್ರಧಾನಿ ನರೇಂದ್ರ ಮೋದಿ ಅವರೂ ಈ ಘಟನೆ ಉಲ್ಲೇಖಿಸಿ, ಶನಿವಾರ ಹರಿಯಾಣದಲ್ಲಿ ಕಾಂಗ್ರೇಸ್ ಸರ್ಕಾರವನ್ನು ಕುಟುಕಿದ್ದರು. ದೇಶದೆಲ್ಲೆಡೆ ಚರ್ಚೆಗೆ ಕಾರಣವಾಗಿರುವ ಈ ಗಣೇಶನಿಗೆ ಭಾನುವಾರ ವಿಸರ್ಜನೆ ಭಾಗ್ಯ ಸಿಕ್ಕಿದೆ. ಪ್ರತಿಭಟನೆ ವೇಳೆ ಗಾಡಿಯಲ್ಲಿ ಕೂರಿಸಿದ್ದ ಪೊಲೀಸರೇ ಈ ಮೂರ್ತಿಯನ್ನು ಇಂದು ಖುದ್ದು ವಿಸರ್ಜನೆ ಮಾಡಿದ್ದಾರೆ.

ಈ ಫೋಟೋಗಳನ್ನು ಹಂಚಿಕೊಂಡಿರುವ ಬೆಂಗಳೂರಿನ ಎಸ್.ಜೆ.ಠಾಣೆ ಪೊಲೀ ಸರು, ಪ್ರತಿಭಟನಾಕಾರರನ್ನು ವಶಕ್ಕೆ ಪಡೆಯಲಾ ಗಿದೆ. ನಂತರ ಪೊಲೀಸ್ ಅಧಿಕಾರಿಗಳು ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಗಣೇಶ ಮೂರ್ತಿಯ ವಿಸರ್ಜನೆ ಮಾಡಿರುತ್ತಾರೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ.

ಸೆಪ್ಟೆಂಬರ್ 13ರಂದು ನಾಗಮಂಗಲ ಗಣೇಶ ಮೆರವಣಿಗೆ ಘಟನೆಗೆ ಸಂಬಂಧಿಸಿದಂತೆ ಹಿಂದೂ ಸಂಘಟನೆಗಳು ಬೆಂಗಳೂರಿನ ಟೌನ್‌ಹಾಲ್‌ನಲ್ಲಿ ಪ್ರತಿಭಟನೆ ನಡೆಸಿದ್ದವು.

ಪ್ರತಿಭಟನೆ ಫ್ರೀಡಂಪಾರ್ಕ್‌ಗೆ ಸೀಮಿತಗೊಳಿಸಿರುವ ಕರ್ನಾಟಕ ಹೈಕೋರ್ಟ್ ಆದೇಶವನ್ನು ಧಿಕ್ಕರಿಸಿ ಕೆಲವರು ಗಣಪತಿ ಮೂರ್ತಿಯೊಂದಿಗೆ ಪ್ರತಿಭಟನೆ ನಡೆಸಿ ಸಾರ್ವಜನಿಕರಿಗೆ ತೊಂದರೆಗೆ ಕಾರಣರಾದರು. ಈ ವೇಳೆ ಅವರು ಪ್ರತಿಭಟನೆಗೆ ತಂದಿದ್ದ ಗಣೇಶನ ಮೂರ್ತಿಯನ್ನು ಪೊಲೀಸರೇ ವಿಧಿವಿಧಾನದೊಂದಿಗೆ ವಿಸರ್ಜನೆ ಮಾಡಿರುವುದಾಗಿ ತಿಳಿಸಿದ್ದಾರೆ. ಗಣೇಶನ ಮೂರ್ತಿಯನ್ನು ಪೊಲೀಸರು ಹೊತ್ತೊಯ್ದು ಪೊಲೀಸರ ಗಾಡಿಯಲ್ಲಿ ಇಟ್ಟಿದ್ದ ಫೋಟೋಗಳು ಹಾಗೂ ವಿಡಿಯೋ ಎಲ್ಲೆಡೆ ಸಂಚಲನ ಸೃಷ್ಟಿಸಿದ್ದವು. ಈ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ್ದ ರಾಜ್ಯ ಬಿಜೆಪಿಯು ಕೇಡುಗಾಲಕ್ಕೆ ನಾಯಿ ಮೊಟ್ಟೆ ಇಟ್ಟಂತೆ ಕಾಂಗ್ರೇಸ್ ಸರ್ಕಾರ ರಾಹು ಕಾಲಕ್ಕೆ ಗಣೇಶ ಮೂರ್ತಿಗಳನ್ನು ಬಂಧಿಸಿದೆ. ಹಿಂದೂ ವಿರೋಧಿ ಕರ್ನಾಟಕ ಸರ್ಕಾರ ಅದೆಷ್ಟರಮಟ್ಟಿಗೆ ಲಜ್ಜೆ ಬಿಟ್ಟು ನಿಂತಿದೆ ಎನ್ನುವುದಕ್ಕೆ ಗಣೇಶ ಮೂರ್ತಿಯನ್ನೇ ಬಂಧಿಸಿ ಪೊಲೀಸ್ ವಾಹನದಲ್ಲಿ ತೆಗೆದುಕೊಂಡು ಹೋಗುತ್ತಿರುವುದೇ ಸಾಕ್ಷಿ! ಎಂದು ವಾಗ್ದಾಳಿ ನಡೆಸಿತ್ತು.

ಇಷ್ಟು ದಿನ ಹಿಂದೂಗಳ ಮೇಲೆ ದಾಳಿ ಮಾಡಿಸುವುದು, ಹಿಂದೂಗಳ ಭೂಮಿ ಕಬಳಿಸುವುದು, ಹಿಂದೂಗಳನ್ನು ಬಂಧಿಸುವುದು, ಹಿಂದೂಗಳನ್ನು ಹತ್ತಿಕ್ಕುತ್ತಿದ್ದ ಭ್ರಷ್ಟ ಸಿಎಂ ಸಿದ್ದರಾಮಯ್ಯ ಅವರು ಗಣೇಶ ಮೂರ್ತಿಗಳನ್ನೇ ಬಂಧಿಸಿರುವುದು ರಾಹು ಕಾಲ ಶೀಘ್ರದಲ್ಲೇ ಕೊನೆಯಾಗಲಿದೆ ಎಂಬುದರ ಮುನ್ಸೂಚನೆ ಎಂದು ಆಕ್ರೋಶ ವ್ಯಕ್ತಪಡಿಸಿತ್ತು.

> ನಿನ್ನೆ ಹರಿಯಾಣದಲ್ಲಿ ವಿಧಾನಸಭಾ ಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆ ಪ್ರಧಾನಿ ನರೇಂದ್ರ ಮೋದಿ ಕುರುಕ್ಷೇತ್ರದಲ್ಲಿ ಭಾಷಣ ಮಾಡುವ ವೇಳೆ ಕರ್ನಾಟಕದ ಈ ಘಟನೆ ಉಲ್ಲೇಖಿಸಿದ್ದರು. ಕರ್ನಾಟಕದಲ್ಲಿ ಕಾಂಗ್ರೇಸ್ ಆಡಳಿತದಲ್ಲಿ ಗಣೇಶನನ್ನೂ ಬಂಧಿಸಲಾಗುತ್ತಿದೆ. ಇಡೀ ದೇಶವೇ ಗಣೇಶೋತ್ಸವವನ್ನು ಆಚರಿಸುತ್ತಿದೆ. ಆದರೆ ಕಾಂಗ್ರೇಸ್ ವಿಘ್ನನಿವಾರಕನ ಪೂಜೆಗೂ ವಿಘ್ನವನ್ನುಂಟು ಮಾಡುತ್ತಿದೆ ಎಂದು ವಾಗ್ದಾಳಿ ನಡೆಸಿದ್ದರು.

ಹೊಸ ಸುಳ್ಳನ್ನು ಹೇಳುತ್ತಲೇ ಇದೆ

ಕಾಂಗ್ರೇಸ್ ಮೀಸಲಾತಿ ವಿರೋಧಿ ಪಕ್ಷ. ಹಾಗಾಗಿ ಕಾಂಗ್ರೇಸ್ ದಿನಕ್ಕೊಂದು ಹೊಸ ಸುಳ್ಳನ್ನು ಹೇಳುತ್ತಲೇ ಇದೆ. ಈ ರೀತಿ ಸುಳ್ಳುಗಳನ್ನು ಹೇಳಲು ಕಾಂಗ್ರೇಸ್ ಪಕ್ಷಕ್ಕೆ ನಾಚಿಕೆ ಆಗುವುದಿಲ್ಲವೇ ಎಂದು ಪ್ರಶ್ನಿಸಿದ್ದರು. ಪೊಲೀಸರ ಈ ನಡೆಗೆ ದೇಶಾದ್ಯಂತ ವಿರೋಧ ವ್ಯಕ್ತವಾಗಿತ್ತು. ಕೊನೆಗೂ ಎಚ್ಚೆತ್ತುಕೊಂಡಿರುವ ಪೊಲೀಸರು ಗಣೇಶನ ಮೂರ್ತಿಯನ್ನು ವಿಧಿವಿಧಾನಗಳೊಂದಿಗೆ ವಿಸರ್ಜನೆ ಮಾಡುವ ಮೂಲಕ ಈ ವಿವಾದಕ್ಕೆ ಅಂತ್ಯ ಹಾಡಿದ್ದಾರೆ.

ಸಂವಿಧಾನಕ್ಕೆ ರಕ್ಷಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ: ಶಾಸಕ

• ಉದಯವಾಹಿನಿ, ಕೋಲಾರ

ಉದಯವಾಹಿನಿ ಚಿತ್ರ

ದೇಶದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಅಪಾಯದಲ್ಲಿದ್ದು ಬಡವರ ಅಭಿವೃದ್ಧಿಗಾಗಿ ರಚನೆಯಾದ ಸಂವಿಧಾನಕ್ಕೂ ಕೂಡ ಕುತ್ತು ಬಂದಿದೆ ಅದನ್ನು ರಕ್ಷಣೆ ಮಾಡಿಕೊಳ್ಳುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಮಾಲೂರು ಶಾಸಕ ಕೆ.ವೈ ನಂಜೇಗೌಡ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ, ವಿವಿಧ ಸಂಘ ಸಂಸ್ಥೆಗಳು ಹಾಗೂ ಶಾಲಾಕಾಲೇಜು ವಿದ್ಯಾರ್ಥಿಗಳ ಸಹಯೋಗದಲ್ಲಿ ಭಾನುವಾರ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಚಿಕ್ಕಬಳ್ಳಾಪುರ ರಸ್ತೆಯ ಚೊಕ್ಕಂಡಹಳ್ಳಿಯಿಂದ ಕೋಲಾರ ನಗರ ಮಾರ್ಗವಾಗಿ ರಾಮಸಂದ್ರ ಗಡಿಯವರಗಿನ 55 ಕಿಮೀ ಉದ್ದದ ಮಾನವ ಸರಪಳಿ ಕಾರ್ಯಕ್ರಮದ ವೇದಿಕೆ ಕಾರ್ಯಕ್ರಮ ಹಾಗೂ ಮಾನವ ಸರಪಳಿ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದ ಅವರು ಎಲ್ಲಾ ಜಾತಿ ಧರ್ಮ ಪಕ್ಷ ಬಿಟ್ಟು ಸಂವಿಧಾನದ ಆಶಯಗಳ ಒಳಗಡೆ ನಾವು ಇದ್ದೇವೆ ಸಂವಿಧಾನ ಇದ್ದರೆ ಅಷ್ಟೇ ನಮ್ಮ ಉಳಿಗಾಲ ಅದನ್ನು ಮರೆತ ಬದುಕು ಇಲ್ಲವಾಗಿದೆ ಸಿದ್ದರಾಮಯ್ಯ ಅವರು ಒಳ್ಳೆಯ ತೀರ್ಮಾನಕ್ಕೆ ಜಿಲ್ಲೆಯಲ್ಲಿ ಸಾವಿರಾರು ಜನರು ಭಾಗಿಯಾಗುವ ಮೂಲಕ ಪ್ರಜಾಪ್ರಭುತ್ವ ಅತ್ಯಂತ ಬಲಿಷ್ಠ ಮತ್ತು ಶ್ರೇಷ್ಠ ಎಂದು ಸಾಬೀತು ಮಾಡಿದ್ದಾರೆ ಎಂದರು. ಶಾಸಕ ಕೊತ್ತೂರು ಮಂಜುನಾಥ್ ಮಾತನಾಡಿ ಬ್ರಿಟಿಷ್ ಸಾಮ್ರಾಜ್ಯದಿಂದ ಸ್ವಾತಂತ್ರ್ಯ ಪಡೆದ ನಂತರ ಎಲ್ಲರೂ ಸಮಾನರು ಎಂಬ ಸಂದೇಶವನ್ನು ಅಂಬೇಡ್ಕರ್ ಕೊಟ್ಟ ಸಂವಿಧಾನವೇ ಸಾಕ್ಷಿಯಾಗಿದೆ ಸಂವಿಧಾನದ ಅಡಿಯಲ್ಲಿಯೇ ಅವಕಾಶಗಳನ್ನು ಪಡೆಯಬೇಕು ಅವರ ದಾರಿಯಲ್ಲಿ ನಾವು ಎಲ್ಲರೂ ನಡೆಯಬೇಕು ಎಂಬುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

> ಪ್ರಜಾಪ್ರಭುತ್ವದಿಂದ ಸ್ವಾತಂತ್ರ್ಯ, ಸಮಾನತೆ, ನ್ಯಾಯಪರತೆ ಮತ್ತು ಎಲ್ಲಾ ಮಾನವನ ಘನತೆಯನ್ನು ಕಾಪಾಡುವುದಾಗಿದೆ. ಪ್ರಜಾಪ್ರಭುತ್ವ ಆಡಳಿತ ವ್ಯವಸ್ಥೆಯಲ್ಲ ಅದು ಒಂದು ಸ್ವಾತಂತ್ರ್ಯ ಮತ್ತು ಅವಕಾಶಗಳಾಗಿದೆ ಧ್ವನಿ ಇಲ್ಲದವರಿಗೆ ಧ್ವನಿಯಾಗುತ್ತದೆ. ಸಾಮಾಜಿಕ ನ್ಯಾಯ ಕಾಪಾಡುವ ಬಲಿಷ್ಠ ವ್ಯವಸ್ಥೆ ಇದಾಗಿದ್ದು ಇದರ ರಕ್ಷಣೆ ನಮ್ಮ ಹೊಣೆಯಾಗಿದೆ
> – ಕೆ.ವೈ ನಂಜೇಗೌಡ, ಶಾಸಕ

ಕಡ್ಲೇಪುರಿ, ಖಾರ ಸವಿಯಲು ಚೆಂದ

• ಉದಯವಾಹಿನಿ, ಮುಳಬಾಗಿಲು

ಉದಯವಾಹಿನಿ ಚಿತ್ರ

ಕಡ್ಲೇಪುರಿ, ನಾನಾ ಬಗೆ ಖಾರದ ತಿನಿಸು ಸುತ್ತಮುತ್ತಲಿನ ಸಂತೆಗಳಲ್ಲಿ ಮಾರುತ್ತಾ ಸ್ವಲ್ಪವೂ ರುಚಿ ಹಾಗೂ ಶುಚಿಗೆ ಭಂಗ ಬಾರದಂತೆ ಜನರಿಗೆ ತಿನಿಸು ಮಾರುತ್ತಾ ಬಂದಿರುವ ಮೂರು ತಲೆಮಾರಿನ ಕುಟುಂಬವೊಂದು ಇದರಲ್ಲೇ ಜೀವನ ಕಟ್ಟಿಕೊಂಡಿದೆ. ನೆರೆಯ ಆಂಧ್ರಪ್ರದೇಶದ ಮಾಡಿಗ್ರಾಮದ ನಾಗೇಶ್ ಕಡ್ಲೇಪುರಿ ವ್ಯಾಪಾರವನ್ನು ತಮ್ಮ ತಾತ ನಾರಾಯಣಪ್ಪ ಮತ್ತು ತಂದೆ ವೆಂಕಟರಾಮಯ್ಯ ಅವರಿಂದ ಮುಂದುವರಿಸಿಕೊಂಡು ಬಂದಿದ್ದಾರೆ.

ಸುಮಾರು 100 ವರ್ಷಗಳಿಂದಲೂ ಒಂದೇ ಬಗೆ ತಿನಿಸು ಜನರ ಕೈಗೆಟುಕುವ ದರದಲ್ಲಿ ಮಾರುತ್ತಿದ್ದಾರೆ.

ಕಡ್ಲೇಪುರಿಯಲ್ಲಿ ಮಸಾಲೆ ಪುರಿ, ಅವಲಕ್ಕಿ ಪುರಿ, ಬೈರ್‌ನೆಲ್ಲುಪುರಿ, ಸಣ್ಣ ಅಕ್ಕಿ ಪುರಿ ಮತ್ತಿತರ ಬಗೆ ಹಾಗೂ ಕಾರಬೂಂದಿ, ಕಡಲೆ ಬೇಳೆ, ಉಪ್ಪು ಕಡಲೆ, ಹಸಿರು ಬಟಾಣಿ ಮಸಾಲೆ, ಮೆಕ್ಕೆಜೋಳ ಚಿಪ್ಸ್, ವಾಮ್ ಪುಡಿ ಮುಂತಾದ ಸುಮಾರು 20 ಬಗೆ ನಾನಾ ತಿನಿಸು ಮಾರುತ್ತಾರೆ. ಮೂಲತಃ ಆಂಧ್ರಪ್ರದೇಶದವರಾದರೂ ತಾಲ್ಲೂಕಿನ ನಂಗಲಿ, ಬೈರಕೂರು, ಎನ್.ವಡ್ಡಹಳ್ಳಿ, ಮಲ್ಲನಾಯಕನಹಳ್ಳಿ ಮತ್ತಿತರ ಕಡೆ ಸೇರುವ ಸಂತೆ ರಸ್ತೆ ಪಕ್ಕದ ಪಾದಚಾರಿ ಮಾರ್ಗದಲ್ಲಿ ಮರದ ಹಲಗೆ ಮೇಲೆ ಪ್ಲಾಸ್ಟಿಕ್ ಮಿಶ್ರಿತ ಬಿಳಿ ಗೋಣಿ ಚೀಲಗಳಲ್ಲಿ ತಿನಿಸು ಇಟ್ಟು ಮಾರುತ್ತಾರೆ.

> ತಮ್ಮ ತಂದೆ ಜತೆಗೆ ಚಿಕ್ಕ ಹುಡುಗನಾಗಿದ್ದಾಗಿನಿಂದಲೂ ಸಂತೆಗಳಿಗೆ ಹೋಗಿ ವ್ಯಾಪಾರ ಮಾಡುತ್ತಿದ್ದ ನಾಗೇಶ್, ಈಚೆಗೆ ತಂದೆ ವೆಂಕಟರಾಮಯ್ಯ ಮರಣವನ್ನಪ್ಪಿದ ನಂತರ ಅದೇ ವೃತ್ತಿಯಲ್ಲಿ ತೊಡಗಿಸಿಕೊಂಡಿದ್ದಾರೆ. ಸುತ್ತಮುತ್ತಲಿನ ಜನ ನಾಗೇಶ್ ಎನ್ನದೆ ವೆಂಕಟರಾಮಯ್ಯ ಎಂದೇ ಕರೆಯುತ್ತಾರೆ'. ಯಾವುದೇ ಕಾರಣಕ್ಕೂ ರುಚಿ, ಖಾರ, ಗುಣಮಟ್ಟದಲ್ಲಿ ರಾಜೀ ಇಲ್ಲ –ನಾಗೇಶ್

ಬೆಂಕಿ ಹಚ್ಚಿದ್ದು ಯಾರೆಂದು ಗೊತ್ತಿದೆ: ಸಚಿವ

• ಉದಯವಾಹಿನಿ, ನಾಗಮಂಗಲ

ಗಣೇಶ ಮೂರ್ತಿ ಮೆರವಣಿಗೆ ಸಂದರ್ಭದಲ್ಲಿ ಯಾರು ಮೊದಲು ಬೆಂಕಿ ಹಚ್ಚಿದ್ದಾರೆಂಬ ಮಾಹಿತಿ ಇದೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಇಲ್ಲಿ ತಿಳಿಸಿದರು. ಇಲ್ಲಿ ಶಾಂತಿ ಸಭೆಗೂ ಮುನ್ನ ಪತ್ರಕರ್ತರೊಂದಿಗೆ ಮಾತನಾಡಿದ ಅವರು, 'ಮೊದಲು ಕಾನೂನು– ಸುವ್ಯವಸ್ಥೆ ಸರಿಯಾಗಬೇಕು. ಅಗತ್ಯಬಿದ್ದರೆ ವಿಶೇಷ ತನಿಖೆ ನಡೆಯಲಿದೆ. ತಪ್ಪಿತಸ್ಥರನ್ನು ಬಂಧಿಸಿ ಕ್ರಮ ಜರುಗಿಸಲಾಗುವುದು' ಎಂದು ಹೇಳಿದರು.

ಚನ್ನಪಟ್ಟಣದ ಉಪ ಚುನಾವಣೆಗಾಗಿ ಗಲಭೆ ಸೃಷ್ಟಿಸಲಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ಸಿಎಂ ಇಳಿಸಲು ಕುತಂತ್ರ ಅನ್ನೋದೂ ಸರಿಯಲ್ಲ, ಎರಡು ಬಾರಿ ಸಿಎಂ ಆಗಿದ್ದ ಅವರಿಗೆ ನಾನು ಉತ್ತರಿಸಬೇಕೆ? ನಾಗಮಂಗಲಕ್ಕೆ ಬಂದು ಜನರಿಗೆ ಏನು ಸಂದೇಶ ಕೊಟ್ಟಿದ್ದಾರೆ? ಅವರಿಗೆ ಪ್ರತಿಕ್ರಿಯಿಸದಿರುವುದೇ ಉತ್ತಮ' ಎಂದರು.ಗಲಭೆಗೆ ಸರ್ಕಾರವೇ ಕಾರಣ ಎಂದು ಕುಮಾರಸ್ವಾಮಿ, ಮತ್ತು ಬಿಜೆಪಿಯವರೂ ಹೇಳಿದ್ದಾರೆ. ಹೊರಗಿನವರು ಏನೇ ಹೇಳಿದರೂ ನನಗೆ ನಾಗಮಂಗಲ ಜನರೇ ಮುಖ್ಯ ಎಂದರು.

ಗಲಭೆ ಪ್ರಕರಣದಿಂದ ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷ ರಾಜೇಶ್ ಅವರನ್ನು ಕೈ ಬಿಟ್ಟ ಬಗ್ಗೆ ಪ್ರತಿಕ್ರಿಯಿಸಿ, 'ಗಲಭೆಯಲ್ಲಿ ಅವರು ಭಾಗವಹಿಸಿರಲಿಲ್ಲ' ಎಂದು ಸಮರ್ಥಿಸಿಕೊಂಡರು. ಸಿ.ಸಿ.ಟಿ.ವಿ ಕ್ಯಾಮೆರಾ ದೃಶ್ಯಾವಳಿ ನೋಡಿಕೊಂಡು ಬಂಧಿಸಿದರೆ 500 ಜನ ಆಗುತ್ತಾರೆ. ಮೆರವಣಿಗೆ ತಂಡದಲ್ಲಿ ರಾಜೇಶ್ ಪುತ್ರ ಇದ್ದರೆಂದು ಆತನನ್ನು ಬಂಧಿಸಿದ್ದಾರೆ.

ತಪ್ಪು ಮಾಡಿದ ಯಾರನ್ನೂ ರಕ್ಷಿಸಲ್ಲ. ಕೆಲವು ಅಮಾಯಕರನ್ನು ಬಂಧಿಸಿದ್ದು, ಆರೋಪಪಟ್ಟಿಯಿಂದ ಕೈಬಿಡಲು ಸೂಚಿಸಿರುವೆ' ಎಂದು ಸಮರ್ಥಿಸಿಕೊಂಡರು. ತಾಯಿ ಆಕ್ರೋಶ; 'ಗಲಭೆಯ ವೇಳೆ ಮಗ ಶ್ರೀನಿವಾಸ್ ಸ್ಥಳದಲ್ಲಿಲ್ಲದಿದ್ದರೂ ಬಂಧಿಸಲಾಗಿದೆ' ಎಂದು ಆತನ ತಾಯಿ ಕೆಂಪಮ್ಮ, ಸಚಿವರ ಮುಂದೆಯೇ ಆಕ್ರೋಶ ವ್ಯಕ್ತಪಡಿಸಿದರು.

ಶಾಸಕ ಮುನಿರತ್ನ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕು: ವೈ. ಸಂಪಂಗಿ

• ಉದಯವಾಹಿನಿ, ಬೇತಮಂಗಲ

ಉದಯವಾಹಿನಿ ಚಿತ್ರ

ದಲಿತ ಸಮುದಾಯ ಹಾಗೂ ಒಕ್ಕಲಿಗ ಸಮುದಾಯದ ವಿರುದ್ಧ ಬಾಯಿಗೆ ಬಂದಂತೆ ಅವಾಚ್ಯ ಶಬ್ದಗಳಿಂದ ಬೈದು ಜಾತಿ ನಿಂದನೆ ಮಾಡಿರುವ ಶಾಸಕ ಮುನಿರತ್ನಂ ನಾಯ್ಡು ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಕೆಜಿಎಫ್ ಮಾಜಿ ಶಾಸಕ ವೈ.ಸಂಪಂಗಿ ಒತ್ತಾಯಿಸಿದರು.

ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು. ಯಾವುದೇ ಪಕ್ಷ ಆಗಲಿ ಹಾಗೂ ಯಾವುದೇ ನಾಯಕನಾಗಲಿ ಅಂಬೇಡ್ಕರ್ ಅವರು ನೀಡಿರುವ ಸಂವಿಧಾನದಲ್ಲಿ ಎಲ್ಲರೂ ಒಂದೇ ಹಾಗಿದ್ದು. ಶಾಸಕ ಮುನಿರತ್ನಂ ನಾಯ್ಡು ದಲಿತ ಸಮುದಾಯ ಹಾಗೂ ಒಕ್ಕಲಿಗ ಸಮುದಾಯವನ್ನು ಬಾಯಿಗೆ ಬಂದಂತೆ ಅವಾಚ್ಯ ಶಬ್ದಗಳಿಂದ ಬೈದು ಜಾತಿ ನಿಂದನೆ ಮಾಡಿ ಈಗಾಗಲೇ ಎರಡು ದಿನಗಳಾಗಿದ್ದು, ತಕ್ಷಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ರಾಜ್ಯದಲ್ಲಿ ಕಾಂಗ್ರೇಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಇಂತಹ ಅನೇಕ ಘಟನೆಗಳು ನಡೆಯುತ್ತಲೇ ಇವೆ, ಈಗ ಮುನಿರತ್ನಂ ನಾಯ್ಡು ಅವರ ಮಾತುಗಳು ವೈರಲ್ ಆಗಿ ಎರಡು ದಿನಗಳು ಕಳೆದರೂ ರಾಜ್ಯ ಸರ್ಕಾರ ಯಾವುದೇ ಕ್ರಮ ಕೈಗೊಳ್ಳದಿರುವುದು ದುರದೃಷ್ಟ ಸಂಗತಿ ಎಂದು ಆಗ್ರಹಿಸಿದರು.

ಈಗಾಗಲೇ ಬಿಜೆಪಿ ಪಕ್ಷದ ರಾಜ್ಯಾಧ್ಯಕ್ಷ ವಿಜೇಂದ್ರ ಯಡಿಯೂರಪ್ಪ ಹಾಗೂ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಸೇರಿದಂತೆ ರಾಜ್ಯ ಮಟ್ಟದ ನಾಯಕರ ಗಮನಕ್ಕೆ ಮುನಿರತ್ನಂ ವಿರುದ್ಧ ಕ್ರಮ ಕೈಗೊಳ್ಳಬೇಕು, ಇಲ್ಲದಿದ್ದರೆ ರಾಜ್ಯದಲ್ಲಿ ಬಿಜೆಪಿ ಪಕ್ಷಕ್ಕೆ ಯಾರು ಮತ ನೀಡಲ್ಲ ಎಂದು ತಿಳಿಸಲಾಗಿದ್ದು, ಶೀಘ್ರವೇ ರಾಜ್ಯ ಮಟ್ಟದ ನಾಯಕರು ಕ್ರಮ ಕೈಗೊಳ್ಳುವ ಭರವಸೆ ಇದೆ ಎಂದರು.

ಜಾತಿ ನಿಂದನೆ ಮಾಡಿದವರು ಯಾವ ಪಕ್ಷದವರು ಆದರೂ ಅದು ತಪ್ಪು ಆದರಿಂದ ಮುನಿರತ್ನ ಅವರ ವಿರುದ್ಧ ನಾನು ಸಹ ಹೋರಾಟ ಮಾಡುವುದಾಗಿ ತಿಳಿಸಿದರು.

> ರಾಜ್ಯಾದ್ಯಂತ ಉಗ್ರ ರೂಪದಲ್ಲಿ ಹೋರಾಟಗಳು ಹಾಗೂ ಧರಣಿಗಳು ನಡೆಯುವ ಮುನ್ನವೇ ಪೊಲೀಸ್ ಇಲಾಖೆಯು ಕಾನೂನು ಕ್ರಮ ಕೈಗೊಂಡು ಜನರ ನಂಬಿಕೆ ಉಳಿಸಿಕೊಳ್ಳಬೇಕೆಂದರು
> – ವೈ.ಸಂಪಂಗಿ, ಮಾಜಿ ಶಾಸಕ

ಸಿಸಿಟಿವಿಯಲ್ಲಿ ಸೆರೆಯಾಯ್ತು ಬೆಚ್ಚಿ ಬೀಳಿಸುವಂತಹ ದೃಶ್ಯ

• ಉದಯವಾಹಿನಿ, ಮಂಡ್ಯ

ಉದಯವಾಹಿನಿ ಚಿತ್ರ

ನಾಗಮಂಗಲ ಗಲಭೆಗೆ ಸ್ಫೋಟಕ ಟ್ವಿಸ್ಟ್

ಮಂಡ್ಯ ಜಿಲ್ಲೆ ನಾಗಮಂಗಲ ಪಟ್ಟಣದಲ್ಲಿ ಗಣೇಶ ವಿಸರ್ಜನೆ ವೇಳೆ ಕೋಮುಗಲಭೆ ನಡೆದಿತ್ತು. ಮುಸ್ಲಿಮರು ಮೆರವಣಿಗೆ ವೇಳೆ ಕಲ್ಲುತೂರಿದ್ದರು. ಅಲ್ಲದೇ, ಕೆಲ ಅಂಗಡಿಗಳಿಗೂ ಬೆಂಕಿ ಹಾಕಲಾಗಿತ್ತು. ಇದೀಗ ಈ ಒಂದು ಗಲಭೆಗೆ ಸ್ಫೋಟಕವಾದಂತಹ ಟ್ವಿಸ್ಟ್ ಸಿಕ್ಕಿದ್ದು ಗಳಭೆಗು ಮುನ್ನ ಕಿಡಿಗೇಡಿಗಳು ಸಿಸಿಟಿವಿ ಗಳನ್ನು ಒಡೆದು ಹಾಕುತ್ತಿರುವ ದೃಶ್ಯ ಸೆರೆಯಾಗಿದೆ.

ಹೌದು ನಾಗಮಂಗಲದಲ್ಲಿ ನಡೆದ ಗಲಭೆಗೆ ಸಂಬಂಧಿಸಿದಂತೆ ಸಿಸಿಟಿವಿಯಲ್ಲಿ ಬೆಚ್ಚಿ ಬೀಳಿಸುವಂತಹ ದೃಶ್ಯ ಸೆರೆಯಾಗಿದೆ. ಅಂಗಡಿಗಳಿಗೆ ಬೆಂಕಿ ಹಚ್ಚುವ ಮುನ್ನ ಸಿಸಿಟಿವಿಗಳನ್ನು ಧ್ವಂಸ ಮಾಡಲಾಗಿದೆ. ಹಾರೆ ಯಿಂದ

ಅಂತರಾಳದಿಂದ... EDITORIAL

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ಆಶಯವೋ, ಅಣಕವೋ?

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ಆಚರಿಸಲಾಗುತ್ತಿದ್ದು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿಯ ಸಂದೇಶ ಹೊರಟಿದೆ. ಜಗತ್ತಿನ ಹಲವು ದೇಶಗಳು ಈ ಆಚರಣೆಯಲ್ಲಿ ಪಾಲ್ಗೊಳ್ಳುವ ತಯಾರಿ ಮಾಡುತ್ತಿದ್ದು, ಕರ್ನಾಟಕದಲ್ಲಂತೂ ಖುದ್ದು ಸರ್ಕಾರವೇ 2,500 ಕಿ.ಮೀ.ಗಳ ಮಾನವ ಸರಪಳಿಯನ್ನು ಆಯೋಜಿಸುತ್ತಿದೆ. ಪ್ರಜಾತಂತ್ರದ ಆಶಯಗಳನ್ನು ವಿಸ್ತರಿಸಲು, ಮನುಷ್ಯರು ಒಂದು ಸಮುದಾಯವಾಗಿ ಸಮಾಜದೊಳಗೆ ಪ್ರಜಾಪ್ರಭುತ್ವವನ್ನು ಇನ್ನೂ ಹೇಗೆ ಜಾರಿ ಮಾಡಬೇಕೆಂದು ಚಿಂತಿಸಲು ಸಾಂಕೇತಿಕವಾಗಿ ಒಂದು ದಿನ ಇರುವುದು ಒಳ್ಳೆಯದೇ. ಆದರೆ, ಎಲ್ಲವೂ ಸಾಂಕೇತಿಕ ಮಾತ್ರ ಆಗಿಬಿಟ್ಟರೆ ಅದು ಘೋಷಿತ ಉದ್ದೇಶವನ್ನು ಅಣಕ ಮಾಡಿದಂತೆ ಆಗುತ್ತದೆ. ವಾಕ್ ಸ್ವಾತಂತ್ರ್ಯ, ನಾಗರಿಕ ಹಕ್ಕುಗಳು, ಕಾನೂನುಬದ್ಧ ಆಡಳಿತ, ಉತ್ತರದಾಯಿತ್ವ ಹೊಂದಿರುವ ಸಂಸ್ಥೆಗಳು ಮತ್ತು ಮಾನವ ಹಕ್ಕುಗಳ ರಕ್ಷಣೆ? ಇವುಗಳನ್ನು ಎತ್ತಿಹಿಡಿಯುವ ಮತ್ತು ಗಟ್ಟಿಗೊಳಿಸುವ ಉದ್ದೇಶಕ್ಕಾಗಿ ಈ ದಿನವನ್ನು ಮುಡಿಪಾಗಿಟ್ಟಿದ್ದೇವೆಂದು ವಿಶ್ವಸಂಸ್ಥೆ ಘೋಷಿಸಿಕೊಂಡಿದೆ. ಎಲ್ಲವೂ ಅಗತ್ಯವಿರುವ ಆದರ್ಶಗಳೇ. ಇಂತಹ ಆದರ್ಶಗಳನ್ನು ಜಾಗತಿಕ ಮಟ್ಟದಲ್ಲಿ ಎತ್ತಿಹಿಡಿದು ಕೆಲಸ ಮಾಡುವ ಒಂದು ಸರ್ವಮಾನ್ಯವಾದ ಸಂಸ್ಥೆ ಇರುವುದು ಈ ಭುವಿಯಲ್ಲಿ ಇನ್ನೂ ಪ್ರಜಾತಂತ್ರ ಉಸಿರಾಡಲು ಅನುವು ಮಾಡಿಕೊಟ್ಟಿದೆ. 1997ರ ಸೆಪ್ಟೆಂಬರಿನಲ್ಲಿ ಅಂತರ್ ಸಂಸದೀಯ ಸಂಸ್ಥೆಯು ಪ್ರಜಾತಂತ್ರದ ಕುರಿತ ಸಾರ್ವತ್ರಿಕ ಘೋಷಣೆಯನ್ನು ಅಂಗೀಕರಿಸಿದ್ದರಿಂದ, 2007ರಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಮಂಡಳಿಯು ಸೆಪ್ಟೆಂಬರ್ 15ನ್ನು ಪ್ರಜಾತಂತ್ರದ ದಿನವಾಗಿ ಘೋಷಿಸಿತು. ಆದರೆ, ಎಲ್ಲವೂ ಅಪಹಾಸ್ಯವೆಂದು ತೋರುವುದು ಇದೇ ವಿಶ್ವಸಂಸ್ಥೆಯ ತೋರುಗಾಣಿಕೆಯ ನಡವಳಿಕೆಯಿಂದ. ಪ್ರಪಂಚದ ಎಷ್ಟೋ ದೇಶಗಳಲ್ಲಿ ಇಂದಿಗೂ ಮೇಲಿನ ಎಲ್ಲಾ ಆಶಯಗಳ ಮೇಲೆ ಅಪಾಯಕಾರಿ ದಾಳಿ ನಡೆಯುತ್ತಲೇ ಇದೆ. ಇದನ್ನು ಈ ವರ್ಷದ ಪ್ರಜಾತಂತ್ರದ ದಿನದ ಸಂದೇಶ ಕಳಿಸಿರುವ ಸೆಕ್ರೆಟರಿ ಜನರಲ್‌ರ ಮಾತುಗಳಲ್ಲೇ ಕಾಣಬಹುದು- 'ಈ ಹಕ್ಕುಗಳು ಮತ್ತು ಮೌಲ್ಯಗಳು ಜಗತ್ತಿನೆಲ್ಲೆಡೆ ದಾಳಿಗೊಳಗಾಗುತ್ತಿವೆ. ಸ್ವಾತಂತ್ರ್ಯ-ಸ್ವಾಯತ್ತತೆಗಳು ನಶಿಸುತ್ತಿವೆ. ನಾಗರಿಕ ಅವಕಾಶ ಕ್ಷೀಣಿಸುತ್ತಿದೆ. ಧ್ರುವೀಕರಣ ತೀವ್ರಗೊಳ್ಳುತ್ತಿದೆ ಮತ್ತು ಅಪನಂಬಿಕೆ ಬೆಳೆಯುತ್ತಿದೆ'. ಈ ವರ್ಷ ಜಗತ್ತಿನ ಅರ್ಧದಷ್ಟು ಜನಸಂಖ್ಯೆ ಹೊಂದಿರುವ 50 ದೇಶಗಳು ಚುನಾವಣೆ ನಡೆಸುತ್ತಿವೆ ಎಂಬುದನ್ನು ನೆನಪಿಸಿಕೊಳ್ಳುತ್ತಾ ಅವರಾಡಿರುವ ಮಾತುಗಳು ಇವು. ದೇಶದೊಳಗಿನ ಪ್ರಜಾತಂತ್ರವನ್ನು ವಿಸ್ತರಿಸುವ ಅಗತ್ಯವನ್ನು ಮತ್ತಷ್ಟು ಚರ್ಚೆಗೆ ಒಡ್ಡುತ್ತಲೇ ದೇಶಗಳ ನಡುವಿನ ಪ್ರಜಾತಾಂತ್ರಿಕ ನಡವಳಿಕೆಯ ಕುರಿತೂ ಚಿಂತಿಸಿ ಕಾರ್ಯಪ್ರವೃತ್ತರಾಗಬೇಕಿದೆ. ನಿರ್ದಿಷ್ಟವಾಗಿ ಪ್ಯಾಲೆಸ್ತೀನಿನ ಮೇಲೆ ಇಸ್ರೇಲಿನ ದುರಾಕ್ರಮಣ, ಅದಕ್ಕೆ ಅಮೆರಿಕದ ಬೆಂಬಲ ಇತಿಹಾಸದಲ್ಲೇ ಅತ್ಯಂತ ಅಪ್ರಜಾತಾಂತ್ರಿಕ ಮತ್ತು ಕ್ರೂರತನದಿಂದ ಕೂಡಿದ್ದಾಗಿದೆ. ಈ ಕುರಿತು ವಿಶ್ವಸಂಸ್ಥೆಯು 45ಕ್ಕೂ ಹೆಚ್ಚು ನಿರ್ಣಯಗಳನ್ನು ತೆಗೆದುಕೊಂಡಿದ್ದರೆ, ವಿಶ್ವಸಂಸ್ಥೆಯ ಭದ್ರತಾ ಮಂಡಳಿಯು 150ಕ್ಕೂ ಹೆಚ್ಚು ನಿರ್ಣಯಗಳನ್ನು ಕೈಗೊಂಡಿದೆ. ಅವೆಲ್ಲವೂ ಇಸ್ರೇಲ್ ಅಮೆರಿಕಕ್ಕೆ ಕಾಲಕಸವಾಗಿದ್ದು, ಇಸ್ರೇಲ್ ವಿಶ್ವಸಂಸ್ಥೆಯ ನಿಯಮಾವಳಿಗಳನ್ನು 5,698 ಬಾರಿ ಉಲ್ಲಂಘಿಸಿವೆಯೆಂದು ವರದಿಯಾಗಿದೆ. ಬಲಾಢ್ಯ ದೇಶಗಳು ಇಂತಹ ಉಲ್ಲಂಘನೆ ಮಾಡಿದಾಗ, ನಿರ್ಣಯಗಳನ್ನು ಕೈಗೊಂಡಿದ್ದರ ಆಚೆಗೆ ವಿಶ್ವಸಂಸ್ಥೆ ಏನೂ ಮಾಡಲಾಗಿಲ್ಲ. ಇದು ವಿಶ್ವಸಂಸ್ಥೆಯ ರಚನೆಯಲ್ಲೇ ಇರುವ ಸಮಸ್ಯೆಯಾಗಿದೆ. ಅದರ ಹೊರತಾಗಿ, ಜಗತ್ತಿನಲ್ಲಿ ಮಾನವ ಹಕ್ಕುಗಳ, ಪ್ರಜಾತಾಂತ್ರಿಕ ಹಕ್ಕುಗಳ ಕುರಿತಾಗಿ ಕಾಲಕಾಲಕ್ಕೆ ಹೊರಡಿಸುವ ನಿರೂಪಗಳಿಂದ ವಿಶ್ವಸಂಸ್ಥೆ ಸಕಾರಾತ್ಮಕ ಪಾತ್ರವನ್ನು ನಿರ್ವಹಿಸುತ್ತಿರುವುದೂ ವಾಸ್ತವ. ಆ ಮೂಲಕ ಪ್ರಜಾತಂತ್ರದ ಪರವಾಗಿ ಲಾಬಿ ನಡೆಸುವ ಗುಂಪುಗಳಿಗೆ ಅದು ಸಾಧ್ಯತೆಗಳನ್ನು ಉಳಿಸಿದೆ.

> ಪ್ರಜಾತಂತ್ರದ ಆಶಯಗಳನ್ನು ವಿಸ್ತರಿಸಲು, ಮನುಷ್ಯರು ಒಂದು ಸಮುದಾಯವಾಗಿ ಸಮಾಜದೊಳಗೆ ಪ್ರಜಾಪ್ರಭುತ್ವವನ್ನು ಇನ್ನೂ ಹೇಗೆ ಜಾರಿ ಮಾಡಬೇಕೆಂದು ಚಿಂತಿಸಲು ಸಾಂಕೇತಿಕವಾಗಿ ಒಂದು ದಿನ ಇರುವುದು ಒಳ್ಳೆಯದೇ. ಆದರೆ, ಎಲ್ಲವೂ ಸಾಂಕೇತಿಕ ಮಾತ್ರ ಆಗಿಬಿಟ್ಟರೆ ಅದು ಘೋಷಿತ ಉದ್ದೇಶವನ್ನು ಅಣಕ ಮಾಡಿದಂತೆ ಆಗುತ್ತದೆ.

ಇಲ್ಲಿ ವಿಶ್ವಸಂಸ್ಥೆಯ ಆಚೆಗೆ ಇತರ ಗುಂಪುಗಳು, ಸಮುದಾಯಗಳು, ಸಂಘಟನೆಗಳು, ರಾಜಕೀಯ ಪಕ್ಷಗಳು ಆತ್ಮಾವಲೋಕನಕ್ಕೆ ಒಡ್ಡಿಕೊಳ್ಳಬೇಕಾದ ಅಗತ್ಯವಿದೆ. ಉದಾಹರಣೆಗೆ ಇಂದು ಭಾರತದ ಒಕ್ಕೂಟ ಸರ್ಕಾರದ ಚುಕ್ಕಾಣಿ ಹಿಡಿದಿರುವ ಭಾರತೀಯ ಜನತಾ ಪಕ್ಷವು ನಾಗರಿಕ ಹಕ್ಕುಗಳ ಮತ್ತು ಕನಿಷ್ಠ ಮಾನವೀಯತೆಯ ಹಾಗೂ ನೆಲದ ಕಾನೂನನ್ನು ಪಾಲಿಸುವ ವಿಚಾರದಲ್ಲಿ ಹಲವು ಎಲ್ಲೆಗಳನ್ನು ದಾಟಿಯಾಗಿದೆ. ತಾನು ಗುರಿ ಮಾಡಲು ಬಯಸುವ ಸಮುದಾಯಗಳ ಮನೆಗಳ ಮೇಲೆ ಬುಲ್ಡೋಜರ್ ಹತ್ತಿಸುವ ಒಂದು ದುಷ್ಟ ಪರಂಪರೆಯನ್ನು ಅದು ಶುರು ಮಾಡಿದೆ. ಮತಾಂಧ ಗುಂಪುಗಳು ಮುಸ್ಲಿಮರನ್ನು ಹತ್ಯೆ ಮಾಡುತ್ತಿವೆ. ಇದನ್ನು ಬಿಜೆಪಿ ಸರ್ಕಾರಗಳು ಮೌನವಾಗಿ ನೋಡುತ್ತಿರುವುದಷ್ಟೇ ಅಲ್ಲ, ಅದಕ್ಕೆ ಪ್ರೋತ್ಸಾಹ ನೀಡುತ್ತಿವೆ. ಇದು ಕಳೆದ ಹತ್ತಿಪ್ಪತ್ತು ವರ್ಷಗಳ ವಿದ್ಯಮಾನವಾಗಿದ್ದರೆ, ದಲಿತರು ಮತ್ತು ಮಹಿಳೆಯರ ಮೇಲಿನ ದೌರ್ಜನ್ಯ ಹಾಗೂ ಕೊಲೆಗಳ ಅಂಕಿ-ಅಂಶಗಳು ಗಾಬರಿ ಹುಟ್ಟಿಸುತ್ತವೆ. ಇವೆಲ್ಲವೂ ಕೇವಲ ಅಂಕಿ-ಅಂಶಗಳಾಗಿ ಉಳಿದುಬಿಟ್ಟಿರುವ ದುರಂತ ನಮ್ಮ ಮುಂದಿದೆ. ಇಂತಹ ಒಂದು ಸರ್ಕಾರವು ಪ್ರಜಾತಂತ್ರದ ಕುರಿತು ಮಾತನಾಡುವುದೇ ಅಪಹಾಸ್ಯದ ಸಂಗತಿಯಾಗಿದೆ. ಕರ್ನಾಟಕದ ಕಾಂಗ್ರೇಸ್ ನೇತೃತ್ವದ ಸರ್ಕಾರವು ಸಾವಿರಾರು ಕಿ.ಮೀ.ಗಳ ಮಾನವ ಸರಪಳಿ ಆಯೋಜಿಸುತ್ತಿರುವ ಹೊತ್ತಿನಲ್ಲೆ ರಾಜ್ಯದಲ್ಲಿ ಒಂದು ವಿಚಾರದ ಕುರಿತು ಸಹಿ ಸಂಗ್ರಹ ಅಭಿಯಾನ ಆರಂಭವಾಗಿದೆ. ಬೆಂಗಳೂರಿನಲ್ಲಿ ಫ್ರೀಡಂ ಪಾರ್ಕಿನಲ್ಲಿ ಯಾರಿಗೂ ಕಾಣದಂತೆ ಪ್ರತಿಭಟನೆ ಮಾಡುವುದನ್ನು ಬಿಟ್ಟು ಬೇರೆ ಅವಕಾಶವಿಲ್ಲದಿರುವುದೂ ಸೇರಿದಂತೆ ಹಲವು ಪ್ರಶ್ನೆಗಳನ್ನು ಆ ಅಭಿಯಾನ ಎತ್ತಿದೆ. ಈ ಸರ್ಕಾರ ಬಂದ ಮೇಲೆ ಪ್ಯಾಲೆಸ್ತೀನ್‌ನಲ್ಲಿ ನಡೆಯುತ್ತಿರುವ ನರಮೇಧದ ವಿರುದ್ಧ ಪ್ರತಿಭಟಿಸಲೂ ಅವಕಾಶ ಇರಲಿಲ್ಲ. ಹೀಗಿರುವಾಗ ಅದೇ ಸರ್ಕಾರವು ಮುಂದೆ ನಿಂತು ಸಾವಿರಾರು ಕಿ.ಮೀ.ಗಳ ಉದ್ದದ ಮಾನವ ಸರಪಳಿ ಆಯೋಜಿಸಿದರೆ ಸಾಕೇ ಎಂಬ ಪ್ರಶ್ನೆ ಸಹಜವಾಗಿಯೇ ಉದ್ಭವಿಸುತ್ತದೆ. ಈ ಪ್ರಜಾತಂತ್ರದ ಸರಪಳಿ ಗಟ್ಟಿಯಾಗಬೇಕೆಂದರೆ ಪ್ರತಿಭಟನೆಯ ಅವಕಾಶಗಳನ್ನು ನಿರ್ಬಂಧಿಸುವ ನಿಯಮಗಳನ್ನು ಕರ್ನಾಟಕ ಸರ್ಕಾರ ಹಿಂತೆಗೆದುಕೊಳ್ಳಬೇಕು. ಪ್ರತಿದಿನದ ಹಲವು ಹಳವಂಡಗಳ ನಡುವೆ ಇಂತಹ ಎಲ್ಲಾ ಪ್ರಶ್ನೆಗಳನ್ನು ಎತ್ತಲಾದರೂ ಒಂದು ದಿನ ಇದೆಯಲ್ಲಾ ಎಂಬುದಷ್ಟೇ ಸಮಾಧಾನಕರ ಸಂಗತಿ.

• ಹಿಂದಿನ ಸಂಚಿಕೆಯಿಂದ

1ನೆಯ ಅಧ್ಯಾಯ

ಶ್ರೀರಾಮನು ಭರದ್ವಾಜ ಮುನೀಶ್ವರನ ಆಶ್ರಮದಲ್ಲಿ ಆತನ ಅಪ್ಪಣೆಯಿಂದ ಮನೋಹರವಾದ ಪರ್ಣಶಾಲೆಯನ್ನು ಮಾಡಿ ಕೊಂಡು ಲಕ್ಷ್ಮಣ ಸೀತಾದೇವಿಯರೊಡನೆ ಸುಖವಾಗಿ ಅತ್ಯಂತ ವಿನೋದದಿಂದಿದ್ದನು. ಇತ್ತಲಾಗಿ ಅಯೋಧ್ಯಾಪಟ್ಟಣದಲ್ಲಿ ತನ್ನ ಮಗನಾದ ಶ್ರೀರಾಮನನ್ನು ಕಾಣದೆ ಪುತ್ರ ವಿಯೋಗದಿಂದ ಹಂಬಲಿಸುತ್ತಿದ್ದ ದಶರಥಮಹಾರಾಯನು ಸ್ವರ್ಗಸ್ಥನಾದನು ಆಗ ರಾಜ್ಯಾಧಿಪತ್ಯವನ್ನು ಮಾಡಲು ತನ್ನ ಪುರೋಹಿತನಾದ ವಸಿಷ್ಠಮುನೀಂದ್ರನೂ ಬ್ರಾಹ್ಮಣರೂ ಆಜ್ಞಾಪಿಸಿ ದರೂ ಭರತನು ಮಹಾಪರಾಕ್ರಮಿಯಾಗಿದ್ದರೂ ರಾಜ್ಯಾಧಿಪತ್ಯವನ್ನು ಬಯಸದೆ ವನಾಂತರಕ್ಕೆ ಹೋಗಿ ಅಣ್ಣನಾದ ರಘುನಾಥನನ್ನು ಗುರುಭಾವದಿಂದ ಸತ್ಕರಿಸಿ ಸ್ವಾಮಿ, ರಾಜ್ಯಾಧಿಪತ್ಯಕ್ಕೆ ನೀನೇ ಅಧಿಕಾರಿಯಲ್ಲದೆ ಮತ್ತೊಬ್ಬನಲ್ಲ ಎಂದು ನುಡಿದನು. ಆ ಮಾತನ್ನು ಕೇಳಿ ಅತ್ಯಂತ ಉದಾರಗುಣವುಳ್ಳವನಾಗಿ ಸುಮುಖನಾದ ರಘುನಾಥನು ತನ್ನ ತಂದೆಯಾದ ದಶರಥರಾಜನ ಅನುಜ್ಞೆಯಿಂದ ರಾಜ್ಯದಲ್ಲಿ ಆಸಕ್ತಿಯಿಲ್ಲದವನಾದರೂ ರಾಜ್ಯಪಾಲನಕ್ಕೋಸ್ಕರ ಭರತನಿಗೆ ತನ್ನ ಪಾದುಕೆಗಳನ್ನು ಕೊಟ್ಟು ಕಳುಹಿಸಿದನು. ತನ್ನ ಅಣ್ಣನಾದ ರಘುನಾಥನು ರಾಜ್ಯಪಾಲನವನ್ನು ಮಾಡಬೇಕೆಂಬ ಇಷ್ಟಾರ್ಥವನ್ನು ಪಡೆಯದ್ದರಿಂದ, ಭರತನು ನಂದಿಗ್ರಾಮದಲ್ಲಿ ಆ ಪಾದುಕೆಗಳನ್ನು ಮುಂದಿಟ್ಟುಕೊಂಡು ರಘುನಾಥನು ಯಾವಾಗ ಬರುವನೆಂದು ಅವನ ಆಗಮನವನ್ನು ನಿರೀಕ್ಷಿಸುತ್ತ ರಾಜ್ಯಪರಿಪಾಲನವನ್ನು ಮಾಡುತ್ತಿದ್ದನು.

ಅನಂತರದಲ್ಲಿ ಮಹಾತ್ಮನೂ ಸತ್ಯಸಂಧನೂ ಆದ ರಘುನಾಥನು ಪುರಜನ ಪರಿಜನಗಳನ್ನು ಪಟ್ಟಣಕ್ಕೆ ಕಳುಹಿಸಿ ಏಕಾಗ್ರಚಿತ್ತನಾಗಿ ದಂಡಕಾರಣ್ಯವನ್ನು ಪ್ರವೇಶಿಸಿ ವಿರಾಧನೆಂಬ ರಾಕ್ಷಸನನ್ನು ಕೊಂದು ಶರಭಂಗನೆಂಬ ಯಷೀಶ್ವರನನ್ನು ದರ್ಶನಮಾಡಿದನು. ಅನಂತರ ಸುತೀಕ್ಷ್ಣನನ್ನೂ ಶ್ಸ್ರೈಭ್ರಾತೃವನ್ನೂ ಆತನ ಅಣ್ಣನಾದ ಅಗಸ್ತ್ಯಭುಷೀಶ್ವರನನ್ನೂ ದರ್ಶನಮಾಡಿದನು. ಅಗಸ್ತ್ಯಮುನೀಶ್ವರನು ಅತ್ಯಂತಪ್ರೀತಿಯುಳ್ಳವನಾಗಿ ಅಕ್ಷಯಬಾಣಗಳುಳ್ಳ ಬತ್ತಳಿಕೆಗಳೆರಡನ್ನೂ ಇಂದ್ರದೇವತಾಕವಾದ ಬಿಲ್ಲನ್ನೂ ಬಾಣಗಳನ್ನೂ ಖಡ್ಡವನ್ನೂ ಕೊಡಲು ಅವುಗಳನ್ನು ತೆಗೆದುಕೊಂಡು ವನವಾಸಿಗಳೊಡನೆ ಅರಣ್ಯದಲ್ಲಿ ವಾಸವಾಗಿದ್ದನು. ಆಗ ಸಮಸ್ತ ಯಷಿಗಳೂ ಆತ್ಮನ ಸಮಿಪಕ್ಕೆ ಬಂದು ಕಾಣಿಸಿಕೊಂಡು ರಾಕ್ಷಸರ: ಉಪದ್ರವವನ್ನು ಬಿಡಿಸಬೇಕೆಂದು ಬಿನ್ನಹಮಾಡಿಕೊಂಡರು, ರಘುನಾಥನು ಆ ಯಷಿಗಳ ವಾಕ್ಕಗಳನ್ನು ಕೇಳಿ ಅವರನ್ನು ಕುರಿತು ಹುಷಿಗಳಿರಾ, ರಣರಂಗದಲ್ಲಿ ಸಮಸ್ತರಾಕ್ಷಸರನ್ನೂ ಸಂಹಾರಮಾಡುತ್ತೇನೆ ' ಎಂದು ನುಡಿದು, ಯಜ್ಞಪುರುಷನ ಮರ್ಯಾದೆಯಲ್ಲಿ ಅತಿಶುದ್ಧಾತ್ಮರಾಗಿ ದಂಡಕಾರಣ್ಯವಾಸಿಗಳಾದ ಆ ಯಖಷಿಗಳಿಗೆ ಅಭಯವನ್ನು ಕೊಟ್ಟು ಜನಸ್ಥಾನವೆಂಬ ಅರಣ್ಯದಲ್ಲಿ ಸಂಚರಿಸುತ್ತ ನಾನಾರೂಪಗಳಿಂದ ವಿಹರಿಸುತ್ತಿದ್ದ ಶೂರ್ಪಣಖಿ ಯೆಂಬ ರಾಕ್ಷಸಿಯ ನಾಸಿಕಾಛೇದನವನ್ನು ಮಾಡಿಸಿದನು

ಮುಂದುವರಿಯುವುದು...

ಅನಂತ ಚತುರ್ದಶಿ ವ್ರತದ ಉದ್ದೇಶ

• ಶ್ರೀ. ವಿನೋದ್ ಕಾಮತ್

ಭಾದ್ರಪದ ಶುಕ್ಲಪಕ್ಷ ಚತುರ್ದಶಿಯಂದು ಅನಂತ ಚತುರ್ದಶಿ ವ್ರತವನ್ನು ಆಚರಿಸಲಾಗುತ್ತದೆ. ಇದರ ಅವಧಿ ಹದಿನಾಲ್ಕು ವರ್ಷಗಳು. ನಂತರ ವ್ರತದ ಉದ್ಯಾಪನೆ ಮಾಡಲಾಗುತ್ತದೆ. ಈ ವ್ರತವನ್ನು ಯಾರಾದಾರೂ ಮಾಡಲು ಸೂಚಿಸಿದರೆ ಅಥವಾ ಅನಂತ ವ್ರತದ ದಾರ ದೊರೆತರೆ ಮಾಡುತ್ತಾರೆ. ಅನಂತ ಚತುರ್ದಶಿಯಲ್ಲಿ ಬರುವ 'ಅನಂತ'ದ ಅರ್ಥವೆಂದರೆ ಅನಾದಿ ಅನಂತ ರೂಪದಲ್ಲಿರುವ, ಎಂದೂ ಕಡಿಮೆಯಾಗದ ಚೈತನ್ಯ ರೂಪದಲ್ಲಿರುವ ಶಕ್ತಿ.

ಅನಂತ ಚತುರ್ದಶಿ ವ್ರತದ ಉದ್ದೇಶ : ಲೌಕಿಕ ಇಚ್ಛೆ ಆಕಾಂಕ್ಷೆಗಳನ್ನು ಪೂರೈಸುವ ಉದ್ದೇಶದಿಂದ ಅನಂತ ಚತುರ್ದಶಿ ವ್ರತವನ್ನು ಆಚರಿಸಲಾಗುತ್ತದೆ (ಅಂದರೆ ಇದೊಂದು 'ಕಾಮ್ಯ ವ್ರತ'ವಾಗಿದೆ). ಮುಖ್ಯವಾಗಿ ಕಳೆದುಹೋದ ಸಮೃದ್ಧಿಯನ್ನು (ಗತವೈಭವವನ್ನು) ಮರಳಿ ಪಡೆಯಲು ಈ ವ್ರತವನ್ನು ಆಚರಿಸಲಾಗುತ್ತದೆ. ಅನಂತ ಚತುರ್ದಶಿಯ ದಿನ, ಬ್ರಹ್ಮಾಂಡದಲ್ಲಿ ಶ್ರೀ ವಿಷ್ಣುವಿನ ಲಹರಿಗಳು ಸಕ್ರಿಯವಾಗಿರುತ್ತವೆ. ಈ ದಿನ ಸಾಮಾನ್ಯ ಜನರಿಗೂ ಕೂಡ ಈ ಲಹರಿಗಳನ್ನು ಆಕರ್ಷಿಸಲು ಮತ್ತು ಗ್ರಹಿಸಲು ಸುಲಭವಿರುತ್ತದೆ. ಅನಂತಪೂಜೆ ಮಾಡುವುದು ಎಂದರೆ ಶ್ರೀ ವಿಷ್ಣುವಿನ ಕ್ರಿಯಾಶಕ್ತಿಯನ್ನು ಗ್ರಹಿಸಿಕೊಳ್ಳುವುದು.

ಸಾಮಾನ್ಯ ಭಕ್ತರು ಶ್ರೀ ವಿಷ್ಣುತತ್ತ್ವದ ಉನ್ನತ ಲಹರಿಗಳನ್ನು ಗ್ರಹಿಸಲು ಸಾಧ್ಯವಿಲ್ಲದ ಕಾರಣ, ಹಿಂದೂ ಧರ್ಮದಲ್ಲಿ ಸಾಮಾನ್ಯ ಜನರಿಗೆ ಅನುಕೂಲವಾಗುವಂತೆ, ಕನಿಷ್ಠ ಪಕ್ಷ ಈ ಲಹರಿಗಳಿಂದಾದರೂ ಲಾಭವಾಗಲಿ ಎಂದು ಅನಂತ ಚತುರ್ದಶಿ ವ್ರತವನ್ನು ಹೇಳಲಾಗಿದೆ. ಅನಂತ ವ್ರತದ ಪ್ರಧಾನ ದೇವರು ಅನಂತ, ಅಂದರೆ ಭಗವಾನ ಶ್ರೀ ವಿಷ್ಣು. ಯಮುನಾ ಮತ್ತು ಶೇಷನಾಗ ದೇವತೆಗಳು ಈ ಪೂಜೆಯ ಗೌಣ ದೇವತೆಗಳಾಗಿರುತ್ತಾರೆ.

ಅನಂತ ಚತುರ್ದಶಿ ವ್ರತ ಪೂಜೆ : ಸಾಧ್ಯವಾದಷ್ಟು ಅನಂತನ ವ್ರತದ ಪೂಜೆಯನ್ನು ದಂಪತಿಗಳು ನಡೆಸಬೇಕು. ಅ ಸಾಧಾರಣ ಸನ್ನಿವೇಷಗಳಲ್ಲಿ ಪುರುಷ ಅಥವಾ ಮಹಿಳೆ ಒಬ್ಬರೇ ಪೂಜೆಯನ್ನು ಮಾಡಬಹುದು. ಪೂಜೆಯನ್ನು ಹೇಗೆ ನಡೆಸಬೇಕು ಎಂದು ಸಂಕ್ಷಿಪ್ತವಾಗಿ ಇಲ್ಲಿ ನೀಡಲಾಗಿದೆ - ವ್ರತದ ಪೂಜೆಯನ್ನು ಪ್ರಾರಂಭಿಸುವ ಮೊದಲು, ಕಳೆದುಹೋದ ಸಮೃದ್ಧಿಯನ್ನು ಮರಳಿ ಪಡೆಯಲು ಈ ಪೂಜೆಯನ್ನು ಮಾಡುವ ಸಂಕಲ್ಪವನ್ನು ಮಾಡಲಾಗುತ್ತದೆ. ನಂತರ, ಯಮುನಾಪೂಜೆಯಲ್ಲಿ ಶಾಸ್ತ್ರೋಕ್ತವಾಗಿ ಶ್ರೀ ಯಮುನಾ ದೇವಿಯ ಷೋಡಶೋಪಚಾರ ಪೂಜೆ ನಡೆಸಲಾಗುತ್ತದೆ. ಮೊದಲು ಶ್ರೀ ಯಮುನಾ ದೇವಿಗೆ ಆಸನವನ್ನು ನೀಡಬೇಕು. ಶ್ರೀ ಯಮುನಾ ದೇವಿಯ ಪವಿತ್ರ ಪಾದಗಳನ್ನು ತೊಳೆಯಬೇಕು. ನಂತರ, ಅರ್ಘ್ಯವನ್ನು ನೀಡಬೇಕು. ನಂತರ, ಐದು ಪದಾರ್ಥಗಳೊಂದಿಗೆ ಸ್ನಾನ ಅರ್ಪಿಸಬೇಕು. ದೇವಿಗೆ ನೀರಿನ ಅಭಿಷೇಕವನ್ನು ಮಾಡಬೇಕು. ವ್ರತವನ್ನು ಆಚರಿಸುತ್ತಿರುವ ಮಹಿಳೆ ಅರಿಶಿನ-ಕುಂಕುಮವನ್ನು ಶ್ರೀ ಯಮುನಾ ದೇವಿಗೆ ಅರ್ಪಿಸಬೇಕು. ನಂತರ ಕಳಶದಲ್ಲಿ ಅಕ್ಷತೆಗಳನ್ನು ಅರ್ಪಿಸಿ ಶ್ರೀಯಮುನಾ ದೇವಿಯ ಅಂಗ-ಪೂಜೆ ಮಾಡಲಾಗುತ್ತದೆ. ಧೂಪ, ಆರತಿ, ನೈವೇದ್ಯ ಇತ್ಯಾದಿಗಳನ್ನು ಅರ್ಪಿಸುವ ಮೂಲಕ ಪೂಜೆ ಯನ್ನು ಮುಕ್ತಾಯಗೊಳಿಸಬೇಕು.



ಶೇಷನಾಗನ ಪೂಜೆ : ಇದರಲ್ಲಿ ದರ್ಭೆಯಿಂದ ಮಾಡಿದ ಏಳು ಹೆಡೆಗಳ ನಾಗರಹಾವನ್ನು ಶೇಷನಾಗನ ಸಂಕೇತವಾಗಿ ತಯಾರಿಸಿ ಅದರ ಶಾಸ್ತ್ರೋಕ್ತ ಪೂಜೆ ನಡೆಸಲಾಗುತ್ತದೆ. ಮೊದಲು ಶೇಷನಾಗನನ್ನು ಆಹ್ವಾನಿಸಲಾಗುತ್ತದೆ. ಶೇಷನಾಗನಿಗೆ ಆಸನವನ್ನು ನೀಡಿ ನಂತರ, ಪಾದ್ಯ ಪೂಜೆ, ಅರ್ಘ್ಯ ಅರ್ಪಿಸಲಾಗುತ್ತದೆ. ಶೇಷನಾಗನ ಅಂಗ-ಪೂಜೆ ಮಾಡಲಾಗುತ್ತದೆ. ಶೇಷ ನಾಗನ ಏಳು ಹೆಡೆಳನ್ನು ಪೂಜಿ ಸಲಾಗುತ್ತದೆ. ನಂತರ ಶೇಷನಾಗನ ನಾಮಪೂಜೆ ಮಾಡಲಾಗುತ್ತದೆ. ಕೊನೆಯಲ್ಲಿ ಧೂಪ, ದೀಪ, ನೈವೇದ್ಯ ಇತ್ಯಾದಿ ಅರ್ಪಿಸಿ ಪೂಜೆಯ ನ್ನು ಮುಕ್ತಾಯಗೊಳಿಸಲಾಗುತ್ತದೆ.

ಅನಂತ ಚತುರ್ದಶಿ ವ್ರತದಲ್ಲಿ ಶೇಷನಾಗನನ್ನು ಪೂಜಿಸುವ ಕಾರಣ: ಅನಂತ ಚತುರ್ದಶಿಯ ದಿನ, ಶ್ರೀ ವಿಷ್ಣುತತ್ತ್ವಕ್ಕೆ ಸಂಬಂಧಿಸಿದ ಕ್ರಿಯೆಯ ಲಹರಿಗಳು ಬ್ರಹ್ಮಾಂಡದಲ್ಲಿ ಹೊರಸೂಸಲ್ಪಡುತ್ತವೆ. ಶೇಷನಾಗನು ಈ ಲಹರಿಗಳ ಅತ್ಯುತ್ತಮ ವಾಹಕನಾಗಿದ್ದಾನೆ. ಹಾಗಾಗಿ ಅನಂತ ವ್ರತದಲ್ಲಿ ಶೇಷನಾಗನಿಗೆ ಪ್ರಮುಖ ಸ್ಥಾನ ನೀಡಲಾಗಿದೆ. ಈ ದಿನ ಬ್ರಹ್ಮಾಂಡದಲ್ಲಿ ಕಾರ್ಯನಿರ್ವಹಿಸುವ ಕ್ರಿಯಾಶಕ್ತಿಯ ಲಹರಿಗಳುಗಳು ಸುರುಳಿಗಳ ರೂಪದಲ್ಲಿ ಇರುವುದರಿಂದ, ಶೇಷರೂಪದಲ್ಲಿರುವ ದೇವತೆಯ ಪೂಜೆಯೊಂದಿಗೆ

ಅಡುಗೆ ಎಣ್ಣೆ ದರ ದಿಢೀರ್ ಏರಿಕೆ: ಹಬ್ಬದ ಸಂಭ್ರಮದಲ್ಲಿರುವ ಜನತೆಗೆ ಶಾಕ್

● ಕಳೆದೊಂದು ವಾರದಿಂದ ಹಾವು ಏಣಿಯಾಟ ನಡೆಸಿದ್ದ ಅಡುಗೆ ಎಣ್ಣೆ ದರವು ದಿಢೀರ್ ಗಗನಕ್ಕೆ

• ಉದಯವಾಹಿನಿ ಗದಗ

ದಸರಾ, ದೀಪಾವಳಿ ಸೇರಿ ಸರಣಿ ಹಬ್ಬಗಳ ಸಂಭ್ರಮದಲ್ಲಿದ್ದ ಜನತೆಗೆ ಅಡುಗೆ ಎಣ್ಣೆ ದರವು ದಿಢೀರ್ ಶಾಕ್ ನೀಡಿದೆ. ಲೀಟರ್ ಎಣ್ಣೆಗೆ 20ರಿಂದ 25 ರೂ. ಗೆ ಏರಿಕೆಯಾಗಿದ್ದರಿಂದ ಗ್ರಾಹಕರಿಗೆ ಬರೆ ಎಳೆದಂತಾಗಿದೆ.

ಕಳೆದೊಂದು ವಾರದಿಂದ ಹಾವು ಏಣಿಯಾಟ ನಡೆಸಿದ್ದ ಅಡುಗೆ ಎಣ್ಣೆ ದರವು ದಿಢೀರ್ ಗಗನಕ್ಕೇರಿದೆ.

ಕೇವಲ ಒಂದೇ ದಿನದ ಅವಧಿಯಲ್ಲಿ ಪಾಮ್ ಆಯಿಲ್, ಸೋಯಾಬಿನ್ ಎಣ್ಣೆ ಹಾಗೂ ಸೂರ್ಯಕಾಂತಿ ರಿಫೈಂಡ್ ಆಯಿಲ್ ದರ ಹೆಚ್ಚಳವಾಗಿದ್ದರಿಂದ ಸಾರ್ವಜನಿಕರು ಪರದಾಡುವಂತಾಗಿದೆ.

ಅಡುಗೆ ಎಣ್ಣೆಯು ಈಗಾಗಲೇ ಜಿಎಸ್‌ಟಿ ವ್ಯಾಪ್ತಿಗೆ ಸೇರಿದೆ. ಆದರೆ, ಅಡುಗೆ ಎಣ್ಣೆಗೆ ಹೆಚ್ಚುವರಿಯಾಗಿ ಶೇ. 20ರಷ್ಟು ಇಂಪೋರ್ಟ್ ಡ್ಯೂಟಿ ಟ್ಯಾಕ್ಸ್ ಹೆಚ್ಚಳ ಮಾಡಿದ್ದರಿಂದ ಎಣ್ಣೆ ದರ ಗಗನಕ್ಕೇರಿದೆ ಎನ್ನುತ್ತಿದ್ದಾರೆ ಅಡುಗೆ ಎಣ್ಣೆ ವ್ಯಾಪಾರಿಗಳು. ಎಡರನೇ ಶನಿವಾರ, ರವಿವಾರ ಹಾಗೂ ಸೋಮವಾರ ಈದ್ ಹಬ್ಬವಿರುವುದರಿಂದ ಸತತವಾಗಿ ಮೂರು ದಿನಗಳ ಕಾಲ ಸರಕಾರಿ ರಜೆ ಇರುವುದರಿಂದ ಮಂಗಳವಾರವೇ ಇಂಪೋರ್ಟ್ ಡ್ಯೂಟಿ ಟ್ಯಾಕ್ಸ್ ಕುರಿತು ಸಂಪೂರ್ಣ ಮಾಹಿತಿ ಲಭ್ಯವಾಗಲಿದೆ. ಅಲ್ಲದೆ, ಮಂಗಳವಾರವೇ ಅಡುಗೆ ಎಣ್ಣೆಯ ದರದಲ್ಲಿ ಏರಿಕೆ ಹಾಗೂ ಇಳಿಕೆಯ ಮಾಹಿತಿ ಲಭ್ಯವಾಗಲಿದೆ. ಅಲ್ಲಿಯವರೆಗೆ ಅಡುಗೆ ಎಣ್ಣೆ ದರವು ಗ್ರಾಹಕರಿಗೆ ಬಿಸಿ ತುಪ್ಪವಾಗಿ ಪರಿಣಮಿಸಲಿದೆ.

ಕಳೆದ ಎರಡು ದಿನಗಳ ಹಿಂದೆ 15 ಲೀಟರ್ ಹೊಂದಿದ ಪಾಮ್ ಆಯಿಲ್ ಬಾಕ್ಸ್‌ಗೆ 1,450 ರೂ. ನಿಗದಿಯಾಗಿತ್ತು. ಆದರೆ, ಶುಕ್ರವಾರ ಸಂಜೆ ವೇಳೆಗೆ ಶೇ. 20ರಷ್ಟು ಇಂಪೋರ್ಟ್ ಡ್ಯೂಟಿ ಟ್ಯಾಕ್ಸ್ ಹೆಚ್ಚಳದಿಂದ ಕೇವಲ 24 ಗಂಟೆಯೊಳಗಾಗಿ ಬಾಕ್ಸ್ ಒಂದಕ್ಕೆ 200ರಿಂದ 250 ರೂ. ಅಂದರೆ 1,650ರಿಂದ 1,700 ರೂ. ವರೆಗೆ ಏರಿಕೆಯಾಗಿದೆ. ಲೀಟರ್ ಪಾಕೆಟ್ ಗೆ 98 ರೂ. ಇದ್ದ ಬೆಲೆ ಈಗ 120ಕ್ಕೇರಿದೆ.

ಕಳೆದ ಎರಡು ದಿನಗಳ ಹಿಂದೆ 10 ಲೀಟರ್ ಹೊಂದಿದ ಸೂರ್ಯಕಾಂತಿ ರಿಫೈಂಡ್ ಆಯಿಲ್ ಬಾಕ್ಸ್‌ಗೆ 1,050 ರೂ. ನಿಗದಿಯಾಗಿತ್ತು. ಆದರೆ, ಶುಕ್ರವಾರ ಸಂಜೆ ವೇಳೆಗೆ ಶೇ. 20ರಷ್ಟು ಇಂಪೋರ್ಟ್ ಡ್ಯೂಟಿ ಟ್ಯಾಕ್ಸ್ ಹೆಚ್ಚಳದಿಂದ ಕೇವಲ 24 ಗಂಟೆಯೊಳಗಾಗಿ ಬಾಕ್ಸ್ ಒಂದಕ್ಕೆ 150ರಿಂದ 200 ರೂ. ಅಂದರೆ 1,220ರಿಂದ 1,300 ರೂ. ವರೆಗೆ ಏರಿಕೆಯಾಗಿದೆ. ಲೀಟರ್ ಪಾಕೆಟ್‌ಗೆ 105 ರೂ. ಇದ್ದ ಬೆಲೆ ಈಗ 125ಕ್ಕೇರಿದೆ. ಇದರಿಂದಾಗಿ ಗ್ರಾಹಕರಿಗೆ ಭಾರಿ ಹೊಡೆತ ಬಿದ್ದಂತಾಗಿದೆ.

ಪಾಮ್ ಆಯಿಲ್, ಸೂರ್ಯಕಾಂತಿ ರಿಫೈಂಡ್ ಆಯಿಲ್ ಸೇರಿ ಅಡುಗೆ ಎಣ್ಣೆಯು ಈಗಾಗಲೇ ಜಿಎಸ್‌ಟಿ ವ್ಯಾಪ್ತಿಗೆ ಸೇರಿತ್ತು. ಇಂಪೋರ್ಟ್ ಡ್ಯೂಟಿ ಟ್ಯಾಕ್ಸ್ ಸೊನ್ನೆಗೆ ಇಳಿಸಲಾಗಿತ್ತು. ಶುಕ್ರವಾರ ಸಂಜೆ ಏಕಾಏಕಿ ಇಂಪೋರ್ಟ್ ಡ್ಯೂಟಿ ಟ್ಯಾಕ್ಸ್ ಶೇ. 20ರಷ್ಟು ಹೆಚ್ಚಿಸಿದ್ದರಿಂದ ಅಡುಗೆ ಎಣ್ಣೆ ದರದಲ್ಲಿ ಭಾರಿ ಏರಿಕೆ ಕಂಡಿದೆ. ಮಂಗಳವಾರ ಮಧ್ಯಾಹ್ನದವರೆಗೆ ದರದಲ್ಲಿ ಯಾವುದೇ ವ್ಯತ್ಯಾಸ ಕಾಣದು. ಅಂದೇ ಅಡುಗೆ ಎಣ್ಣೆ ದರದಲ್ಲಿ ಏರಿಕೆ ಅಥವಾ ಇಳಿಕೆ ಕುರಿತು ತಿಳಿಯಲಿದೆ

-ಹಿಮಾಂಶು ಜೈನ್,
ಗ್ರೇನ್ ಮಾರುಕಟ್ಟೆ ವ್ಯಾಪಾರಸ್ಥ

ಉದಯವಾಹಿನಿ ಚಿತ್ರ

ಲೀಟರ್ ಅಡುಗೆ ಎಣ್ಣೆಗೆ 20ರಿಂದ 25 ರೂ. ದರ ಹೆಚ್ಚಿಸಿರುವುದು ಗ್ರಾಹಕರ ಮೇಲೆ ಬರೆ ಎಳೆದಂತಾಗಿದೆ. ಬಡವರು, ಕೂಲಿಕಾರ್ಮಿಕರು, ಮಧ್ಯಮ ವರ್ಗದವರು ಪಾಮ್ ಆಯಿಲ್ ಹೆಚ್ಚಾಗಿ ಬಳಸುತ್ತಾರೆ. ಪಾಮ್ ಆಯಿಲ್ ದರದಲ್ಲಿ ಕೂಡ ಹೆಚ್ಚಳವಾಗಿದ್ದರಿಂದ ತೊಂದರೆ ಅನುಭವಿಸುವಂತಾಗಿದೆ. ಅಡುಗೆ ಎಣ್ಣೆ ದರ ಇಳಿಕೆಯಾಗದಿದ್ದರೆ ಮುಂಬರುವ ದಸರಾ ಹಾಗೂ ದೀಪಾವಳಿ ಹಬ್ಬಗಳು ಬಡವರ ಪಾಲಿಗೆ ಶಾಪವಾಗಿ ಪರಿಣಮಿಸಲಿವೆ

- ಸೋಮಶೇಖರ ಕರಸಿದ್ದಿಮಠ

ಎಣ್ಣೆಗೆ 20ರಿಂದ 25 ರೂ.ಗೆ ಏರಿಕೆ

ಉದಯ ವಾಹಿನಿ

ಪ್ರಾದೇಶಿಕ

ಮಿನಿ ನ್ಯೂಸ್

ಪ್ರಜಾಪ್ರಭುತ್ವಕ್ಕಾಗಿ ಕೈಜೋಡಿಸಿದ ಲಕ್ಷಮಂದಿ

ಉದಯವಾಹಿನಿ ಚಿತ್ರ

• ಉದಯವಾಹಿನಿ ಉಡುಪಿ

ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಭಾನುವಾರ ನಡೆದ ಮಾನವ ಸರಪಳಿ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ ಲಕ್ಷಕ್ಕೂ ಅಧಿಕ ಮಂದಿ ಪಾಲ್ಗೊಂಡರು. ಬೈಂದೂರಿನ ಶಿರೂರು ಗೇಟ್ ನಿಂದ ಕಾಪು ತಾಲ್ಲೂಕಿನ ಹೆಜಮಾಡಿ ಸೇತುವೆವರೆಗೆ ಶಾಲಾ-ಕಾಲೇಜು ವಿದ್ಯಾರ್ಥಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಾರ್ವಜನಿಕರು ಕೈ ಕೈ ಹಿಡಿದು ಮಾನವ ಸರಪಳಿ ರಚಿಸಿದರು.

ಜಿಲ್ಲಾ ಮಟ್ಟದ ಕಾರ್ಯಕ್ರಮ ಉಡುಪಿಯ ಕಿನ್ನಿಮೂಲ್ಕಿ ಸ್ವಾಗತ ಗೋಪುರ ದ ಬಳಿ ಜರುಗಿತು. ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ಕಿರಣ್ ಎಸ್. ಗಂಗಣ್ಣನವರ್, ಜಿಲ್ಲಾಧಿಕಾರಿ ಕೆ. ವಿದ್ಯಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಅರುಣ್ ಕೆ., ಜಿಲ್ಲಾ ಪಂಚಾಯಿತಿ ಸಿಇಒ ಪ್ರತೀಕ್ ಬಾಯಲ್ ಉಪಸ್ಥಿತರಿದ್ದರು.

ಸಂವಿಧಾನ ಜಾಗೃತಿಯ ಜೊತೆಗೆ ಪರಿಸರ ಸಂರಕ್ಷಣೆ

• ಉದಯವಾಹಿನಿ ಮುದ್ದೇಬಿಹಾಳ

ಸೆಪ್ಟಂಬರ್ 15 ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಪ್ರಜಾಪ್ರಭುತ್ವ ವನ ನಿರ್ಮಾಣ ವಿನೂತನ ಕಾರ್ಯಕ್ರಮವು ಸಂವಿಧಾನ ಜಾಗೃತಿಯ ಜೊತೆಗೆ ಪರಿಸರ ಸಂರಕ್ಷಣೆ ಹಾಗೂ ಪರಿಸರ ಪ್ರೇಮವನ್ನು ಬೆಳೆಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಾ.ಪಂ ಇಒ ನಿಂಗಪ್ಪ ಮಸಳಿ ಹೇಳಿದರು.

ತಾಲ್ಲೂಕ ಪಂಚಾಯತ ಹಾಗೂ ಅರಣ್ಯ ಇಲಾಖೆ ಸಹಯೋಗದಲ್ಲಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ಅಂಗವಾಗಿ ಪ್ರಜಾಪ್ರಭುತ್ವ ವನ ನಿರ್ಮಾಣ ತಾಲ್ಲೂಕಿನ ಬಿದರಕುಂದಿ ಗ್ರಾ.ಪಂ ಅರಣ್ಯ ಇಲಾಖೆ ಹೊರವಲಯದಲ್ಲಿ 2450 ಸಸಿ ನೆಡುವ ಕಾರ್ಯಕ್ರಮದಲ್ಲಿ ಮುಖ್ಯ ಅಥಿತಿಯಾಗಿ ಮಾತನಾಡಿದ ಅವರು ಸಂವಿಧಾನ ಜಾಗೃತಿ ಜೊತೆಗೆ ಪರಿಸರ ಸಂರಕ್ಷಣೆ ಮಾಡುವ ನಿಟ್ಟಿನಲ್ಲಿ ಪ್ರಜಾಪ್ರಭುತ್ವ ವನ ನಿರ್ಮಾಣ ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಉದಯವಾಹಿನಿ ಚಿತ್ರ

ಬಿದರಕುಂದಿ ಗ್ರಾಮ ಪಂಚಾಯತ ಅಧ್ಯಕ್ಷ ರೂಪ ಚಲವಾದಿ, ಗ್ರಾಮ ಪಂಚಾಯತ ಸದಸ್ಯರು ಸಸಿಗೆ ನಿರುಣಿಸಿದರು. ಶಿಕ್ಷಕ ನಬಿಲಾಲ್ ನದಾಫ ಸಂವಿಧಾನ ಪೂರ್ವ ಪೀಠಿಕೆಯ ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

ಈ ಸಂದರ್ಭದಲ್ಲಿ ಬೀದರ್ ಕುಂದಿ ಗ್ರಾಮ ಪಂಚಾಯತ ಅಧ್ಯಕ್ಷ ರೂಪ ಚಲವಾದಿ, ಸಾಮಾಜಿಕ ವಲಯ ಅರಣ್ಯ ಅಧಿಕಾರಿಗಳು ಮುದ್ದೇಬಿಹಾಳ, ಪ್ರಾದೇಶಿಕ ವಲಯ ಅರಣ್ಯ ಅಧಿಕಾರಿಗಳು ಮುದ್ದೇಬಿಹಾಳ, ಉಪವಲಯ ಅಧಿಕಾರಿಗಳು ಪಂಚಾಯಿತಿ ಸಿಬ್ಬಂದಿ ವರ್ಗ, ಅರಣ್ಯ ಇಲಾಖೆ ಸಿಬ್ಬಂದಿ ಹಾಗೂ ಅಧಿಕಾರಿ ವರ್ಗ ಈ ಸಂದರ್ಭದಲ್ಲಿ ಹಾಜರಿದ್ದರು.

ಬಿಡಾಡಿ ದನಗಳ ಹಾವಳಿಗೆ ಬೇಸತ್ತ ಜನ

• ಉದಯವಾಹಿನಿ ಕವಿತಾಳ

ಹದಗೆಟ್ಟ ಮುಖ್ಯ ರಸ್ತೆ, ವಾಹನಗಳು ಸಂಚರಿಸಿದಂತೆಲ್ಲಾ ಮುಖಕ್ಕೆ ಹರಡುವ ವಿಪರೀತ ದೂಳು, ಹಗಲು, ರಾತ್ರಿ ಎನ್ನದೇ ಬಿಡಾಡಿ ದನಗಳು ಮತ್ತು ಬೀದಿ ನಾಯಿಗಳ ಕಾಟ, ಬೈಕ್ ಸವಾರರು ಕೈಯಲ್ಲಿ ಜೀವ ಹಿಡಿದುಕೊಂಡು ಓಡಾಡಬೇಕಾದ ಪರಿಸ್ಥಿತಿ ಇದು ಅಂದಾಜು 25 ಸಾವಿರ ಜನಸಂಖ್ಯೆ ಹೊಂದಿದ ಪಟ್ಟಣದ ದುರವಸ್ಥೆ. ಇಲ್ಲಿನ ಆನ್ವರಿ ಕ್ರಾಸ್‌ನಿಂದ ಸರ್ಕಾರಿ ಕಾಲೇಜಿನವರೆಗೆ ವಿಭಜಕದ ಮೇಲೆ ನಿಲ್ಲುವ ಬಿಡಾಡಿ ದನಗಳು ಬೈಕ್ ಸವಾರರ ಮೇಲೆ ಎರಗುತ್ತವೆ ಮತ್ತು ರಾತ್ರಿ ವೇಳೆ ರಸ್ತೆಯಲ್ಲಿಯೇ ಮಲಗುವ ಎಮ್ಮೆಗಳು ಬೈಕ್ ಸವಾರರ ಪ್ರಾಣ ಬಲಿಗೆ ಕಾಯುತ್ತಿರುತ್ತವೆ.

ಸಿರವಾರ ತಾಲ್ಲೂಕು ವ್ಯಾಪ್ತಿಯ ಪ್ರಮುಖ ಪಟ್ಟಣ ಎನಿಸಿಕೊಂಡ ಕವಿತಾಳ ಪಟ್ಟಣವನ್ನು ತಾಲ್ಲೂಕು ಕೇಂದ್ರ ಮಾಡಬೇಕು ಎಂದು ಈ ಹಿಂದೆ ಹೋರಾಟ, ಪ್ರತಿಭಟನೆಗಳು ನಡೆದಿದ್ದವು. ಇಲ್ಲಿನ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೇರಿಸಲಾಯಿತು ಅದನ್ನು ಇಲ್ಲಿನ ಜನರು ಸಂಭ್ರಮಿಸಿದರು. ಜನ ಪ್ರತಿನಿಧಿಗಳು ಮತ್ತು ಅಧಿಕಾರಿಗಳ ನಿರ್ಲಕ್ಷದಿಂದ ಹಲವು ಸಮಸ್ಯೆಗಳು ಕಾಡುತ್ತಿದ್ದು 'ಈ ಊರಲ್ಲಿ ಯಾರೂ ಹೇಳೋರಿಲ್ಲ ಕೇಳೋರಿಲ್ಲ' ಎಂದು ಜನ ಮಾತನಾಡಿಕೊಳ್ಳುತ್ತಿದ್ದಾರೆ.

ಉದಯವಾಹಿನಿ ಚಿತ್ರ

ಬಸ್ ನಿಲ್ದಾಣ, 110 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರ, ಜಲ ಸಂಪನ್ಮೂಲ ಇಲಾಕೆ ಕಚೇರಿ, ಪಟ್ಟಣ ಪಂಚಾಯಿತಿ, 30 ಹಾಸಿಗೆ ಸಾಮರ್ಥ್ಯದ ಸಮುದಾಯ ಆರೋಗ್ಯ ಕೇಂದ್ರ, ನೆಮ್ಮದಿ ಕೇಂದ್ರ, ಕೃಷಿ ಉತ್ಪನ್ನ ಉಪ ಮಾರುಕಟ್ಟೆ, ರೈತ ಸಂಪರ್ಕ ಕೇಂದ್ರ, ಪೊಲೀಸ್ ಠಾಣೆ, ವಸತಿ ಸಹಿತ ಪದವಿ ಕಾಲೇಜು, ಸರ್ಕಾರಿ ಪಿಯು ಕಾಲೇಜು, ಪ್ರೌಢಶಾಲೆಗಳನ್ನು ಹೊಂದಿದೆ.

ಸಿರವಾರ, ಮಾನ್ವಿ ಮತ್ತು ಮಸ್ಕಿ ತಾಲ್ಲೂಕು ವ್ಯಾಪ್ತಿಯ ಅಂದಾಜು 48 ಹಳ್ಳಿಗಳು ಠಾಣೆ ವ್ಯಾಪಿಗೆ ಒಳಪಟ್ಟಿದ್ದು ವಿವಿಧ ಕಚೇರಿ ಕೆಲಸ ಮತ್ತು ಮಾರುಕಟ್ಟೆಗೆ ಮತ್ತಿತರ ಕಾರ್ಯಗಳಿಗೆ ನಿತ್ಯ ನೂರಾರು ಜನರು ಬಂದು ಹೋಗುತ್ತಾರೆ.

ಸರಿಯಾದ ರಸ್ತೆ, ಚರಂಡಿ, ಮೂತ್ರಾಲಯ ವ್ಯವಸ್ಥೆ ಇಲ್ಲದೆ ಸಾರ್ವಜನಿಕರು ಪರದಾಡುವ ಪರಿಸ್ಥಿತಿ ಇದೆ, ಸೊಳ್ಳೆಗಳ ಕಾಟ ಮಿತಿ ಮೀರಿದ್ದು ಫಾಗಿಂಗ್ ಮಾಡುವಲ್ಲಿ ಸ್ಥಳೀಯ ಆಡಳಿತ ಗಮನಹರಿಸುತ್ತಿಲ್ಲ'

-ಎಂ.ಡಿ.ಮೆಹಬೂಬ, ಕಾರ್ಮಿಕ ಸಂಘಟನೆ ಮುಖಂಡ

ಲವ್ ಜಿಹಾದ್‌ಗೆ ಬಲಿಯಾಗದಂತೆ ಯುವತಿಯರಿಗೆ ಪ್ರಮಾಣ ವಚನ

• ಉದಯವಾಹಿನಿ ಗದಗ

ಉದಯವಾಹಿನಿ ಚಿತ್ರ

ಅವಳಿ ನಗರದ ಹಿಂದೂ ಮಹಾಗಣಪತಿ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಬಾಬು ಬಾಕಳೆ ಕ್ರಾಂತಿ ಸೇನಾ ವತಿಯಿಂದ ಲವ್ ಜಿಹಾದ್‌ಗೆ ಬಲಿಯಾಗದಂತೆ ಹಿಂದೂ ಸಮಾಜದ ಯುವತಿಯರಿಗೆ ಶ್ರೀರಾಮಚಂದ್ರ ಹಾಗೂ ಗಣಪತಿ ಮೇಲೆ ಶನಿವಾರ ಸಾಮೂಹಿಕವಾಗಿ ಪ್ರಮಾಣವಚನ ಮಾಡಿಸಿ ಜಾಗೃತಿ ಮೂಡಿಸಲಾಯಿತು. ಕ್ರಾಂತಿ ಸೇನಾ ಜಿಲ್ಲಾ ಘಟಕದ ಅಧ್ಯಕ್ಷ ಬಾಬು ಬಾಕಳೆ ಮಾತನಾಡಿ, ದೇಶದಲ್ಲಿ ಸಾಕಷ್ಟು ಹಿಂದೂ ಯುವತಿಯರು ಲವ್ ಜಿಹಾದ್‌ಗೆ ಬಲಿಯಾಗಿ ಜೀವನ ಹಾಳು ಮಾಡಿಕೊಂಡ ಸಾಕಷ್ಟು ಉದಾಹರಣೆಗಳು ನಮ್ಮ ಕಣ್ಣ ಮುಂದಿವೆ. ಆದಕಾರಣ, ಯುವತಿಯರು ಲವ್ ಜಿಹಾದ್‌ಗೆ ಕಡಿವಾಣ ಹಾಕಿ, ತಡೆಯುವಂತಹ ಪ್ರಯತ್ನವನ್ನೂ ಮಾಡಬೇಕು ಎಂದು ಹೇಳಿದರು.

ಚಿಂತಕಿ ಹರಿಕಾ ಮಂಜನಾಥ ಮಾತನಾಡಿ, ಹಿಂದೂ ಸಮಾಜ ಜಾಗೃತವಾಗಬೇಕು. ಪ್ರತಿಯೊಬ್ಬ ಪೋಷಕರು ಸನಾತನ ಹಿಂದೂ ಧರ್ಮದ ಸಂಸ್ಕೃತಿ, ಸಂಸ್ಕಾರವನ್ನು ಮಕ್ಕಳಿಗೆ ಕಲಿಸಬೇಕು ಎಂದರು.

ಕಾರ್ಯಾರಂಭಿಸದ ಇಂದಿರಾ ಕ್ಯಾಂಟೀನ್

• ಉದಯವಾಹಿನಿ ಕಲಘಟಗಿ

ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಕಡಿಮೆ ದರದಲ್ಲಿ ಹಸಿದವರಿಗೆ ಆಹಾರ ಪೂರೈಸುವ ಇಂದಿರಾ ಕ್ಯಾಂಟೀನ್ ಕಟ್ಟಡ ಪಟ್ಟಣದಲ್ಲಿ ಪೂರ್ಣಗೊಂಡರೂ ಕಾರ್ಯಾರಂಭ ಮಾಡದ ಕಾರಣ ಸಾರ್ವಜನಿಕರಿಗೆ ನಿರಾಸೆಯಾಗಿದೆ.

2017ರಲ್ಲಿ ರಾಜ್ಯ ಸರ್ಕಾರ ಯೋಜನೆ ಅನುಷ್ಠಾನಕ್ಕೆ ತಂದಿದ್ದರೂ, ಕಲಘಟಗಿ ವಿಧಾನ ಸಭಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಗೆದ್ದಿದ್ದರಿಂದ ನನೆಗುದಿಗೆ ಬಿದ್ದಿತ್ತು.

ಈಗ ಮತ್ತೆ ರಾಜ್ಯ ಹಾಗೂ ಕ್ಷೇತ್ರದಲ್ಲಿ ಕಾಂಗ್ರೆಸ್ ಆಡಳಿತ ಇರುವ ಕಾರಣ ಸಚಿವ ಸಂತೋಷ್ ಲಾಡ್ ಅವರು ಆಸಕ್ತಿ ತೋರಿ ಇಂದಿರಾ ಕ್ಯಾಂಟೀನ್ ಕಟ್ಟಡವನ್ನು ಪೂರ್ಣಗೊಳಿಸಿ ಐದು ತಿಂಗಳೇ ಕಳೆದಿವೆ. ಲೋಕಸಭಾ ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿದ್ದ ಕಾರಣ ಕ್ಯಾಂಟೀನ್ ಆರಂಭಕ್ಕೆ ಹಿನ್ನಡೆ ಆಗಿತ್ತು. ಇದೀಗ ಚುನಾವಣೆ ಮುಗಿದು ಮೂರು ತಿಂಗಳು ಕಳೆದರೂ ಕ್ಯಾಂಟೀನ್ ಆರಂಭಕ್ಕೆ ಕಾಲ ಕೂಡಿ ಬಂದಿಲ್ಲ. ಕಟ್ಟಡ ಪೂರ್ಣಗೊಂಡ ನಂತರ ಸಚಿವ ಸಂತೋಷ್ ಲಾಡ್ ಕ್ಯಾಂಟೀನ್ ಕಟ್ಟಡ ಪರಿಶೀಲನೆ ಮಾಡಿ ಒಂದು ವಾರದಲ್ಲಿ ಆರಂಭ ಮಾಡಲು ಅಧಿಕಾರಿಗಳಿಗೆ ಸೂಚಿಸಿದ್ದರೂ, ಅದು ಇನ್ನೂ ನನಸಾಗಿಲ್ಲ. ಕಲಘಟಗಿ ತಾಲ್ಲೂಕು ನಂಜುಂಡಪ್ಪ ವರದಿಯಲ್ಲಿ ಹಿಂದುಳಿದ ತಾಲ್ಲೂಕಾಗಿದೆ. ಬಡವರು, ಕಾರ್ಮಿಕರು, ರೈತರು, ವಿದ್ಯಾರ್ಥಿಗಳು, ಬೇರೆ ಕಡೆಯಿಂದ ವಲಸೆ ಬಂದ ವಿವಿಧ ಜನಾಂಗಗಳ ಜನರು ಪಟ್ಟಣದಲ್ಲಿ ವಾಸ ಮಾಡುತ್ತಾರೆ. ಭಿಕ್ಷುಕರೂ ಇದ್ದಾರೆ. ಇಂದಿರಾ ಕ್ಯಾಂಟೀನ್ ಆರಂಭವಾಗದೆ ಖಾಸಗಿ ಹೋಟೆಲ್‌ಗಳಲ್ಲಿ ದುಬಾರಿ ವೆಚ್ಚ ತೆತ್ತು ಹೊಟ್ಟೆ ತುಂಬಿಸಿಕೊಳ್ಳಬೇಕಾಗಿದೆ.

ಹಸಿವು ನೀಗಿಸುವ ಇಂದಿರಾ ಕ್ಯಾಂಟೀನ್

ಉದಯವಾಹಿನಿ ಚಿತ್ರ

ಸಚಿವರು ಇತ್ತ ಗಮನ ಹರಿಸಿ ಕಡಿಮೆ ದರದಲ್ಲಿ ಹಸಿವು ನೀಗಿಸುವ ಇಂದಿರಾ ಕ್ಯಾಂಟೀನ್ ಆರಂಭ ಮಾಡಿದಲ್ಲಿ ಪಟ್ಟಣಕ್ಕೆ ಬರುವ ನೂರಾರು ಕೂಲಿ ಕಾರ್ಮಿಕರಿಗೆ, ಬಡವರಿಗೆ, ರೈತರಿಗೆ ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ವರದಾನವಾಗಲಿದೆ

-ಪರಶುರಾಮ ಎತ್ತಿನಗುಡ್ಡ
ರೈತ ಮುಖಂಡ

ಶಾಂತಿ, ಸ್ಥಿರತೆ ಪ್ರಜಾಪ್ರಭುತ್ವ ಬಲಪಡಿಸಲು ಆಚರಣೆ

ಉದಯವಾಹಿನಿ ಚಿತ್ರ

• ಉದಯವಾಹಿನಿ,ಚಿಂಚೋಳಿ

ಮಾನವ ಹಕ್ಕುಗಳ ರಕ್ಷಣೆ ಅಭಿವೃದ್ಧಿ ಶಾಂತಿ ಮತ್ತು ಸ್ಥಿರತೆಯ ಮೂಲಕ ಪ್ರಜಾಪ್ರಭುತ್ವವನ್ನು ಬಲಪಡಿಸಲು ಮೌಲ್ಯ ತತ್ವಗಳು ಎತ್ತಿಹಿಡಿಯಲು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವಾಗಿ ಆಚರಿಸಲಾಗುತ್ತಿದೆ ಎಂದು ಪ್ರಭಾರಿ ಮುಖ್ಯ ಗುರುಗಳಾದ ಸುಷ್ಮಿತಾ ಮಾಳದಕರ್ ಹೇಳಿದರು.

ತಾಲ್ಲೂಕಿನ ನಾಗಾಯಿದ್ಲಾಯಿ ಗ್ರಾಮದ ಸರಕಾರಿ ಪ್ರೌಢಶಾಲೆಯಲ್ಲಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಸಂವಿಧಾನದ ಪೀಠಿಕೆಗೆ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪೂಜಿಸಿ ನಾಡಗೀತೆ ರಾಷ್ಟ್ರಗೀತೆ ನುಡಿದು ಮಕ್ಕಳಿಂದ ಮಾನವ ಸರಪಳಿ ಮಾಡಿ ಆಚರಿಸಿ ಮಾತನಾಡಿದ ಅವರು, ಪ್ರಜಾಪ್ರಭುತ್ವವು ಸಮಾನತೆ ಸ್ವಾತಂತ್ರ್ಯ ಮತ್ತು ಭ್ರಾತೃತ್ವ ಸೌಹಾರ್ದದ ಭದ್ರಬುನಾದಿ ಮೇಲೆ ನಿಂತಿದೆ. ಸಮಾನತೆ ಸ್ವಾತಂತ್ರ್ಯ ಭ್ರಾತೃತ್ವ ಆದರ್ಶಗಳು ಭಾರತೀಯ ಸಂವಿಧಾನ ಪೀಠಿಕೆಯ ಭಾಗವಾಗಿದೆ, ಕರ್ನಾಟಕದ ಬೀದರ ಜಿಲ್ಲೆಯಿಂದ ಚಾಮರಾಜನಗರ ದವರೆಗೆ ಮಾನವ ಸರಪಳಿ ರಚಿಸಿ ಸಂವಿಧಾನದ ಪೀಠಿಕೆ ವಾಚನದ ಮೂಲಕ ಸಂವಿಧಾನದ ಬಗ್ಗೆ ಅರಿವು ಮೂಡಿಸಲು ಸರ್ಕಾರ ಆದೇಶ ನೀಡಿರುವುದು ಎಂದರು. ಈ ಸಂದರ್ಭದಲ್ಲಿ

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	07:30 ರಿಂದ 09:00
ಗುಳಿಕ ಕಾಲ	ಮಧ್ಯಾಹ್ನ	01:30 ರಿಂದ 03:00
ಯಮಗಂಡ ಕಾಲ	ಬೆಳಿಗ್ಗೆ	10:30 ರಿಂದ 12:00

ಮೇಷ ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ.

ವೃಷಭ ನಿಮ್ಮನ್ನು ಫಿಟ್ ಆಗಿ ಮತ್ತು ಚೆನ್ನಾಗಿರಿಸಿಕೊಳ್ಳಲು ಹೆಚ್ಚಿನ ಕ್ಯಾಲೊರಿಯ ಆಹಾರವನ್ನು ತಪ್ಪಿಸಿ ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು ಮತ್ತು ನಿಮ್ಮ ಹತ್ತಿರ ಸಾಲ ಕೇಳಬಹುದು.

ಮಿಥುನ ಇಂದು ಮನೆಯ ಸದಸ್ಯರೊಂದಿಗೆ ಮಾತನಾಡುವ ಸಮಯದಲ್ಲಿ ನಿಮ್ಮ ಮುಖದಿಂದ ಮನೆಯ ಸದಸ್ಯರು ಕೋಪಗೊಳ್ಳುವಂತಹ ಯಾವುದೇ ಮಾತು ಬರಬಹುದು.

ಕರ್ಕಾಟಕ ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆಕ್ರಮಿಸಿಕೊಳ್ಳಲು ಬಿಡಬೇಡಿ. ಶಾಂತವಾಗಿ ಮತ್ತು ಒತ್ತಡ ಮುಕ್ತವಾಗಿ ಉಳಿಯಲು ಪ್ರಯತ್ನಿಸಿ ಹಾಗೂ ಅದು ನಿಮ್ಮ ಮಾನಸಿಕ ದೃಢತೆಯನ್ನು ಹೆಚ್ಚಿಸುತ್ತದೆ.

ಸಿಂಹ ನೀವು ಸಾಮಾಜಿಕ ಕಾರ್ಯಗಳು ಮತ್ತು ಸಮಾರಂಭಗಳಲ್ಲಿ ಭಾಗವಹಿಸಿದಲ್ಲಿ ಸ್ನೇಹಿತರು ಮತ್ತು ಹೊಸ ಪರಿಚಯಸ್ಥರನ್ನು ಪಡೆಯುತ್ತೀರಿ. ನಿಮ್ಮ ನಗು ಯಾವುದೇ ಅರ್ಥ ಹೊಂದಿಲ್ಲ ? ನಗುವಿಗೆ ಧ್ವನಿಯಿಲ್ಲ.

ಕನ್ಯಾ ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ.

ತುಲಾ ನಿಮ್ಮ ಸಂಗಾತಿಗೆ ಸಾಕಷ್ಟು ಗಮನ ನೀಡಲಾಗದಿದ್ದಲ್ಲಿ ಅದು ಅವರ ಅಸಮಾಧಾನಕ್ಕೆ ಕಾರಣವಾಗಬಹುದು. ನಿಮ್ಮ ಕೆಲಸದ ಮೇಲೆ ಗಮನ ಹರಿಸಿ ಮತ್ತು ಭಾವನಾತ್ಮಕ ವ್ಯಾಜ್ಯಗಳಿಂದ ದೂರವಿರಿ.

ವೃಶ್ಚಿಕ ನಿಮ್ಮ ಸಂಗಾತಿಯ ಕೆಟ್ಟ ಆರೋಗ್ಯದಿಂದಾಗಿ ಇಂದು ಪ್ರಣಯಕ್ಕೆ ಧಕ್ಕೆಯಾಗುತ್ತದೆ. ಇಂದು ಮನೆಯ ಯಾವುದೇ ವಿಷಯದಿಂದಾಗಿ ಕೆಲಸದ ಸ್ಥಳದಲ್ಲಿ ನಿಮ್ಮ ಉತ್ಸಾಹ ಕಡಿಮೆಯಾಗಿರುತ್ತದೆ.

ಧನಸ್ಸು ಸೃಜನಶೀಲ ಕೆಲಸ ನಿಮ್ಮನ್ನು ಶಾಂತವಾಗಿರಿಸುತ್ತವೆ. ಇಂದು ನಿಮ್ಮ ಹಣವನ್ನು ಅನೇಕ ವಿಷಯಗಳಿಗೆ ಖರ್ಚು ಮಾಡಬಹುದು, ನೀವು ಇಂದು ಉತ್ತಮ ಬಜೆಟ್ ಅನ್ನು ಯೋಜಿಸಬೇಕಾಗಿದೆ.

ಮಕರ ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ನಿಮ್ಮ ಜ್ಞಾನದಾಹ ನಿಮಗೆ ಹೊಸ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ. ಪ್ರೀತಿಯಲ್ಲಿ ನಿರಾಶೆ ನಿಮ್ಮನ್ನು ಕಂಗೆಡಿಸುವುದಿಲ್ಲ.

ಕುಂಭ ಇಂದು ಹೆಚ್ಚಿನ ಸಾಧನೆ ಮತ್ತು ಉನ್ನತ ಪ್ರೊಫೈಲ್‌ಗೆ ಒಂದು ಒಳ್ಳೆಯ ದಿನ. ಇಂದು ಯಾವುದೇ ಅನಗತ್ಯ ಕೆಲಸಕ್ಕಾಗಿ ನಿಮ್ಮ ಉಚಿತ ಸಮಯವನ್ನು ಹಾಳು ಮಾಡಬಹುದು.

ಮೀನ ಮಾದಕವಸ್ತುವಿನ ಅವಲಂಬನೆ ಹೆಚ್ಚುವ ಸಾಧ್ಯತೆಗಳಿರುವುದರಿಂದ ಸ್ವಯಂ ಔಷಧೋಪಚಾರ ಮಾಡಬೇಡಿ. ಇಂದು, ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ.

ಪ್ರಜಾಪ್ರಭುತ್ವ ದಿನ: 92 ಕಿ.ಮೀ ಮಾನವ ಸರಪಳಿ

● ನಗರದ ಆಜಾದ್ ಪಾರ್ಕ್ ವೃತ್ತದಲ್ಲಿ ಜನಪ್ರತಿನಿಧಿಗಳು, ಅಧಿಕಾರಿಗಳು ಮಾನವ ಸರಪಳಿ ನಿರ್ಮಿಸಿ ಚಾಲನೆ

• ಉದಯವಾಹಿನಿ, ಚಿಕ್ಕಮಗಳೂರು

ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಜಿಲ್ಲೆಯಲ್ಲಿ 92 ಕಿಲೋ ಮೀಟರ್ ಮಾನವ ಸರಪಳಿ ನಿರ್ಮಿಸಲಾಯಿತು. ನಗರದ ಆಜಾದ್ ಪಾರ್ಕ್ ವೃತ್ತದಲ್ಲಿ ಜನಪ್ರತಿನಿಧಿಗಳು, ಅಧಿಕಾರಿಗಳು ಮಾನವ ಸರಪಳಿ ನಿರ್ಮಿಸಿ ಚಾಲನೆ ನೀಡಿದರು.

ಮಾನವ ಸರಪಳಿ ನಿರ್ಮಿಸಿ ದಾಖಲೆ

ಡಾ. ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಬಳಿಕ ಎಲ್ಲರೂ ಪರಸ್ಪರ ಕೈ ಹಿಡಿದು ಮೇಲಕ್ಕೆತ್ತಿ ಪ್ರಜಾಪ್ರಭುತ್ವ ದಿನವನ್ನು ಸಂಭ್ರಮಿಸಿದರು. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಯೋಗೀಶ್ ಓದಿದ ಸಂವಿಧಾನ ಪೀಠಿಕೆಯನ್ನು ಎಲ್ಲರೂ ಸಾಮೂಹಿಕವಾಗಿ ಪಠಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಟಿ.ಡಿ.ರಾಜೇಗೌಡ, 'ಸಂವಿಧಾನವನ್ನು ನಮಗೆ ನಾವೇ ಅರ್ಪಿಸಿಕೊಂಡು ವಿಧಿಸಿಕೊಂಡಿದ್ದೇವೆ. ಬೇರೆ ಬೇರೆ ದೇಶಗಳ ಸಂವಿಧಾನದಲ್ಲಿ ಇದ್ದ ಉತ್ತಮ ಅಂಶಗಳನ್ನು ಗಣನೆಗೆ ತೆಗೆದುಕೊಂಡು 2 ವರ್ಷ, 11 ತಿಂಗಳು, 18 ದಿನಗಳ ಕಾಲ ಅಧ್ಯಯನ ನಡೆಸಿ ಸಂವಿಧಾನ ರಚಿಸಲಾಗಿದೆ. ಇದರಲ್ಲಿ 467 ವಿಧಿಗಳು, 72 ಕಾಯ್ದೆಗಳು, 12 ಅನುಚ್ಛೇದಗಳಿವೆ.

ಈ ಸಂವಿಧಾನ ರಚನೆ ಮಾಡಿದ ಕೀರ್ತಿ ಡಾ.ಬಿ.ಆರ್. ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ' ಎಂದರು.

ಭಾರತಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಮಹಾತ್ಮ ಗಾಂಧೀಜಿಯಾದರೆ, ದೇಶದ ನಾಗರಿಕರಿಗೆ ಸಮಾನ ಅವಕಾಶ ಕಲ್ಪಿಸಿದವರು ಡಾ.ಅಂಬೇಡ್ಕರ್. ಸ್ವತಂತ್ರ್ಯ ನಂತರ ಪ್ರಜಾಪ್ರಭುತ್ವಕ್ಕೆ ಕಾರಣರಾದವರು ಜವಾಹರಲಾಲ್ ನೆಹರು. 1972ರಲ್ಲಿ 42ನೇ ತಿದ್ದುಪಡಿ ಮೂಲಕ ಸಮಾಜವಾದಿ, ಜಾತ್ಯಾತೀತ ಪದವನ್ನು ಸಂವಿಧಾನಕ್ಕೆ ಸೇರ್ಪಡೆ ಮಾಡಿದ ಕೀರ್ತಿ ಇಂದಿರಾ ಗಾಂಧಿ ಅವರಿಗೆ ಸಲ್ಲುತ್ತದೆ ಎಂದು ಬಣ್ಣಿಸಿದರು. ಸಮಾನ್ಯ ವ್ಯಕ್ತಿ ಕೂಡ ದೇಶದ ಪ್ರಧಾನಿ, ರಾಷ್ಟ್ರಪತಿಯಾಗಲು ಸಂವಿಧಾನ ಅವಕಾಶ ನೀಡಿದೆ. ಚಹಾ ಮಾರುತ್ತಿದ್ದ ನರೇಂದ್ರ ಮೋದಿ ಅವರು ಪ್ರಧಾನಿಯಾದರು. ಕುರಿ ಕಾಯುತ್ತಿದ್ದ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾದರು. ಸಾಮಾನ್ಯ ರೈತರ ಮಕ್ಕಳಾದ ನಾನು ಮತ್ತು ಸಿ.ಟಿ.ರವಿ ಅವರು ಶಾಸಕರಾಗಿದ್ದೇವೆ. ಇದಕ್ಕೆ ಪ್ರಮುಖ ಕಾರಣ ನಮ್ಮ ದೇಶದ ಸಂವಿಧಾನ' ಎಂದರು. ಇಂತಹ ಸಂವಿಧಾನ ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗೌರವಿಸಲು ಸರ್ಕಾರ ಕಳೆದ ವರ್ಷದಿಂದ ವಿನೂತನ ಕಾರ್ಯಕ್ರಮ ರೂಪಿಸಿದೆ. ಶಾಲಾ-ಕಾಲೇಜುಗಳಲ್ಲಿ ಸಂವಿಧಾನ ಪೀಠಿಕೆ ಓದುವ ಕೆಲಸ ಆರಂಭಿಸಿದೆ. ಸಂವಿಧಾನ ಜಾಗೃತಿ ಜಾಥ ನಡೆಸಿದೆ. ಈ ಬಾರಿ ಬೀದರ್‌ನಿಂದ ಚಾಮರಾಜನಗರದ ತನಕ 2500 ಕಿಲೋ ಮೀಟರ್‌ನಲ್ಲಿ 25 ಲಕ್ಷ ಜನರೊಂದಿಗೆ ಮಾನವ ಸರಪಳಿ ನಿರ್ಮಿಸಿ ದಾಖಲೆ ನಿರ್ಮಿಸಿದೆ' ಎಂದು ಹೇಳಿದರು.ಜಿಲ್ಲೆಯಲ್ಲಿ ಮಾಗಡಿ ಕೈಮರದಿಂದ ತರೀಕೆರೆ ತಾಲ್ಲೂಕಿನ ಎಂ.ಸಿ.ಹಳ್ಳಿ ಗಡಿ ತನಕ 92 ಕಿಲೋ ಮೀಟರ್ ಮಾನವ ಸರಪಳಿ ನಿರ್ಮಿಸಲಾಗಿದೆ. ಇದು ಹೆಮ್ಮೆಯ ವಿಷಯ. ಕಾರ್ಯಕ್ರಮ ರೂಪಿಸಿದ ಅಧಿಕಾರಿಗಳಿಗೆ ಅಭಿನಂದನೆಗಳು' ಎಂದು ಹೇಳಿದರು.

ಜಿಲ್ಲಾಧಿಕಾರಿ ಮೀನಾ ನಾಗರಾಜ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಚ್.ಎಸ್.ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿತೇಂದ್ರ ಕುಮಾರ್ ನಗರಸಭೆ ಅಧ್ಯಕ್ಷೆ ಸುಜಾತಾ ಶಿವಕುಮಾರ್, ಉಪಾಧ್ಯಕ್ಷೆ ಅನು ಮಧುಕರ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಘಟಕದ ಅಧ್ಯಕ್ಷ ಶಿವಾನಂದಸ್ವಾಮಿ ಭಾಗವಹಿಸಿದ್ದರು.

ಉದಯವಾಹಿನಿ ಚಿತ್ರ

ಕಟ್ಟಕಡೆಯ ವ್ಯಕ್ತಿಗೆ ಬಲ ಕೊಡುವುದು ಸಂವಿಧಾನ ಆಶಯ. ಅಭಿಪ್ರಾಯವನ್ನು ಗೌರವಿಸುವುದು ಪ್ರಜಾಪ್ರಭುತ್ವದ ಮೂಲ ತಿರುಳು. ವೈವಿಧ್ಯತೆಯಂದ ಕೂಡಿರುವ ನಮ್ಮ ದೇಶದಲ್ಲಿ ಏಕತೆ ಕಾಪಾಡಿಕೊಳ್ಳುವುದು ನಮ್ಮ ಜವಾಬ್ದಾರಿ
-ಸಿ.ಟಿ.ರವಿ, ವಿಧಾನ ಪರಿಷತ್ ಸದಸ್ಯ

ಭೀಮನ ಭಾರತ ವಿಶ್ವಗುರು ಭಾರತ ವೈವಿಧ್ಯತೆಯನ್ನೇ ಅಸ್ತ್ರವಾಗಿ ರೂಪಿಸಿಕೊಂಡು ದೇಶ ಒಡೆಯುವ ತಂತ್ರಗಳನ್ನು ಕೆಲವರು ಮಾಡುತ್ತಿದ್ದರೆ. ಪ್ರಾದೇಶಿಕತೆ, ಭಾಷಾ ವೈವಿಧ್ಯತೆಯಲ್ಲೇ ಭಿನ್ನತೆ ಹುಟ್ಟು ಹಾಕಲಾಗುತ್ತಿದೆ. ಏಕತೆಯ ಸೂತ್ರದಲ್ಲಿ ಬಂಧಿಸಿರುವುದು ನಮ್ಮ ಹೆಮ್ಮೆಯ ಸಂವಿಧಾನ. ತುರ್ತು ಪರಿಸ್ಥಿತಿ ರೀತಿಯ ಕಹಿ ನೆನನಪು ಮತ್ತೆಂದೂ ಮರುಕಳಿಸದಂತೆ ನಾವೆಲ್ಲರೂ ಎಚ್ಚರ ವಹಿಸಬೇಕಿದೆ. ಅಂಬೇಡ್ಕರ್ ನೈಜ ಚಿಂತನೆಗಳನ್ನು ಬದುಕಿನಲ್ಲಿ ಎಲ್ಲರೂ ಅಳವಡಿಸಿಕೊಂಡರೆ ಭೀಮನ ಭಾರತ ವಿಶ್ವಗುರು ಭಾರತ ಆಗಲಿದೆ' ಎಂದರು.

ಮದ್ಯ ಮಾರಾಟಕ್ಕೆ ಕುಮ್ಮಕ್ಕು ನೀಡುವ ಅಂಗಡಿಗಳ ಲೈಸೆನ್ಸ್ ರದ್ದುಗೊಳಿಸಿ: ರಮೇಶ್ ಪಾಟೀಲ್

• ಉದಯವಾಹಿನಿ, ಸಿಂಧನೂರು

ತಾಲ್ಲೂಕಿನಲ್ಲಿ ಅಕ್ರಮ ಮದ್ಯಪಾನ ಮಾರಾಟ ಪ್ರತಿ ಹಳ್ಳಿಗಳಲ್ಲಿ ಅಕ್ಕಪಕ್ಕದ ಮನೆಗಳಲ್ಲಿ . ಓಣಿಗಳಲ್ಲಿ ನೀಲಿ ಬಣ್ಣದ ಸಾರಾಯಿ ಪೌಚ್ ಹಾಗೂ ಬಾಟಲಿಗಳು ಬಾಕ್ಸಗಳ ಮೂಲಕ ಪ್ರತಿ ನಿತ್ಯ ಬಾರ್‌ಗಳು ಮಾಲೀಕರ ಆಟೋಗಳು ಹಾಗೂ ದ್ವಿಚಕ್ರ ವಾಹನಗಳಿಗೆ ಸಂಚಾರ ಕಲ್ಪಿಸಿ ಹಳ್ಳಿಗಳ ಮನೆಗಳಿಗೆ ಮತ್ತು ಅಂಗಡಿಗಳಿಗೆ ಅಕ್ರಮವಾಗಿ ಮಾರಾಟ ಮಾಡಲು ನೇರವಾಗಿ ಬಾರ್ ಶಾಪ್ ಮಾಲಿಕರು ಮನೆ ಮನೆಗೆ ಬಾಗಿಲಿಗೆ ತಲುಪಿಸುವ ದೇ ಇವರು ಕರ್ತವ್ಯ ವಾಗಿದೆ ಎಂದು ಕರ್ನಾಟಕ ರೈತ ಸಂಘ ಹಾಗೂ ಅಖಿಲ ಭಾರತ ಮಹಿಳಾ ತಾಲ್ಲೂಕು ಸಮಿತಿ ಆಗ್ರಹಿಸಿದರು.

ಇದನ್ನು ಕಂಡು ಕಂಡರಿಯದೆ ಪೋಲಿಸ್ ಇಲಾಖೆ ಸಮ್ಮುಖದಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳು ಮುಂದೆ ಹೋದರು ಸಹ ಯಾವುದೇ ಕಾರ್ಯ ನಿರ್ವಹಿಸಿದೇ ಕೈ ಕಟ್ಟಿ ಕುಳಿತರೆ ನೋಡಿದರೆ ಇವರು ಕರ್ತವ್ಯ ಪಾಲನೆ ಸಾರ್ವಜನಿಕರಿಗೆ ತಿಳಿಯದ ವಿಷಯವಾಗಿದೆ. ತಾಲ್ಲೂಕಿನ ಎಷ್ಟು ಸಲ ಇಲಾಖೆ ಮುಂದೆ ಹೋರಾಟ ಮಾಡಿದರು ಎಚ್ಚೆತ್ತುಕೊಳ್ಳದ ಬೇಜವಾಬ್ದಾರಿ ಅಬಕಾರಿ ಇಲಾಖೆ ಅಧಿಕಾರಿಯ ಸಿಂಧನೂರು ಇಲಾಖೆಯಲ್ಲಿ ಇದ್ದಿದ್ದು ನೋಡಿ ದಿರಂತೂ ಸಾಕು ಇವರು ಸರ್ಕಾರಿ ವಾಹನದಲ್ಲಿ ಅಕ್ರಮ ಅಂಗಡಿಗಳಿಗೆ ಹೋಗಿ ದೊಡ್ಡದಾಗಿ ವಾಹನ ನಿಲ್ಲಿಸಿ ಅಕ್ರಮ ಮದ್ಯ ಮಾರಾಟ ತಡೆಗಟ್ಟುವ ಹಾಗೆ ಪೋಸು ಕೊಡುತ್ತಾ. ಅಂಗಡಿಗಳಲ್ಲಿ ಲಂಚ ತೆಗೆದುಕೊಂಡು ಬರುವಂತ ನೀಚ ಅಧಿಕಾರಿಗಳು ಸಿಂಧನೂರು ನಗರದ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವುದು ಎಂತಹಾ ದುರಂತದ ಸಂಗತಿಯಾಗಿದೆ ಎಂದು ತಪ್ಪಾಗಲಿಕ್ಕಿಲ್ಲ. ಎಂದರು ತಾಲ್ಲೂಕು ಅಧ್ಯಕ್ಷ ರಮೇಶ ಪಾಟೀಲ್ ಬೇರಿಗೆ ಅವರು ಆಕ್ರೋಶವನ್ನು ವ್ಯಕ್ತಪಡಿಸಿದರು.

ಉದಯವಾಹಿನಿ ಚಿತ್ರ

ಅಂಗಡಿಗಳಿಗೆ ಅಕ್ರಮವಾಗಿ ಮಾರಾಟ

ಹಳ್ಳಿಗಳಲ್ಲಿ ಮದ್ಯ ಪಾನ ಮಾರಾಟ ರದ್ದಾಗಿರುವುದಿಲ್ಲ ಗ್ರಾಮೀಣ ಪ್ರದೇಶಗಳಲ್ಲಿ ಮಹಿಳೆಯರು ಕಣ್ಣೀರು ರಕ್ತ ಕಣ್ಣೀರು ಕುಡಿತದ ಅಮಲಿನಲ್ಲಿ ಬಿದ್ದು ಗಂಡಂದಿರ ಸಂಸಾರಗಳು ಕುಟುಂಬಗಳು ಬೀದಿ ಪಾಲಾಗಿವೆ ಮಕ್ಕಳ ವಿದ್ಯಾಭ್ಯಾಸದಿಂದ ದೂರವಾ ಗುತ್ತಿದ್ದು. ಪ್ರತಿ ಹಳ್ಳಿಗಳಲ್ಲಿ ಮದ್ಯಪಾನಕ್ಕೆ ಅತಿ ಚಿಕ್ಕ ವಯಸ್ಸಿನಲ್ಲೇ ಮಕ್ಕಳು ಯುವಕರು ಸಹ ನೀಲಿ ಸಾರಾಯಿಗೆ ಬಲಿಯಾಗುತ್ತಿದ್ದಾರೆ ಎಂದು ಬಾರ್ ಅಂಗಡಿಗಳು ಮಾಲೀಕರು ಮದ್ಯ ಮಾರದಂತೆ ಅವರು ಮೇಲೆ ಕ್ರಮ ಜರುಗಿಸಿ ಮದ್ಯ ಮಾರಾಟಕ್ಕೆ ಅವಕಾಶ ಕಲ್ಪಿಸಿ ಕೊಟ್ಟು ಅಂಗಡಿಗಳು ಲೈಸೆನ್ಸ್ ರದ್ದು ಮಾಡಬೇಕೆಂದು ಒತ್ತಾಯಿಸಿ ತಾಲ್ಲೂಕು ಮಹಿಳಾ ಸಮಿತಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿ ಆಗ್ರಹಿಸಿದರು.

ಈ ಸಂ .ಟಿ.ಯು.ಸಿ.ಐ. ಜಿಲ್ಲಾಧ್ಯಕ್ಷ ಬಿ ಎನ್ ಯರದಿಹಾಳ. ಚಿಟ್ಟಿ ಬಾಬು ಬೂದಿಹಾಳ ಕ್ಯಾಂಪ್. ರೇಣುಕಾಮ್ಮ ಚಿಟ್ಟಿ ಬಾಬು. ಮರಿಯಮ್ಮ. ದಾವಮ್ಮ ಸೇರಿದಂತೆ ಅನೇಕ ಮಹಿಳೆಯರು ಇದ್ದರು.

ಜನತೆ ಅಮೋಘ ಆಸ್ಪತ್ರೆಯ ಸೌಲಭ್ಯ ಪಡೆದುಕೊಳ್ಳಿ

• ಉದಯವಾಹಿನಿ, ಜೇವರ್ಗಿ

ಪಟ್ಟಣದ ಬಿಜಾಪುರ್ ರಸ್ತೆಯ ಪಕ್ಕದಲ್ಲಿರುವ ಚಂದನ್ ಮಹೇಂದ್ರಕರ್ ಅವರ ಬಿಡ್ಲಿಂಗ್‌ನಲ್ಲಿ ಡಾಕ್ಟರ್ ಮಾಳಪ್ಪ ಪೂಜಾರಿ ಅವರ ಮಾಲೀಕತ್ವದಲ್ಲಿ ಅಮೋಘ ಹಾಸ್ಪಿಟಲ್ ಉದ್ಘಾಟನೆ ಸಮಾರಂಭ ಜರಗಿತು.

ಉದ್ಘಾಟನೆಯನ್ನು ಮಾನ್ಯ ಕಲಬುರ್ಗಿಯ ಲೋಕಸಭಾ ಸದಸ್ಯರಾದ ಡಾಕ್ಟರ್ ರಾಧಾ ಕೃಷ್ಣನ್ ಅವರು ಉದ್ಘಾಟನೆ ಮಾಡಿದರು.

ನಂತರ ಮಾತನಾಡಿದ ಅವರು ನಮ್ಮವರೇ ನಮ್ಮ ಕ್ಷೇತ್ರದವರಾಗಿದ್ದ ಮಾಳಪ್ಪನವರು ಕ್ಷೇತ್ರದ ಜನತಾ ಸೇವೆ ಮಾಡಲಿ ಎಂದು ಶುಭ ಹಾರೈಸಿದರು. ನಂತರ ಡಾಕ್ಟರ್ ಮಾಳಪ್ಪ ಪೂಜಾರಿ ಮಾತನಾಡಿ ನಮ್ಮ ಆಸ್ಪತ್ರೆಯಲ್ಲಿ ಎಲ್ಲಾ ಸೌಲಭ್ಯಗಳು ಒಂದೇ ಸೂರಿನ ಅಡಿಯಲ್ಲಿ ಸಿಗುತ್ತವೆ. ನುರಿತ ವೈದ್ಯರು ಹಾಗೂ ಎಕ್ಸ್‌ರೇ ಇಸಿಜಿ ರಕ್ತಪಕ್ಷ ಎಲ್ಲವನ್ನು ಸೌಲಭ್ಯ ಹೊಂದಿರುತ್ತದೆ ಅದಕ್ಕಾಗಿ ಜೇವರ್ಗಿ ತಾಲ್ಲೂಕಿನ ಹಾಲ್ಗಡ ಗ್ರಾಮದವನಾದ ನಾನು ನಮ್ಮ ಊರಿನ ನಮ್ಮ ತಾಲ್ಲೂಕಿನ ಜನರ ಸೇವೆ ಮಾಡುವ ಅವಕಾಶ ಸಿಕ್ಕಿದೆ ಅದಕ್ಕಾಗಿ ಎಲ್ಲರೂ ಸಹಕಾರ ಇರಬೇಕು ಎಂದು ಹೇಳಿದರು.

ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಪರಮಪೂಜ್ಯರಾದ ಲಿಂಗ ಬೀರದೇವರು ಕನಕಪೀಠ ತಿಂಥಣಿ ಬ್ರಿಜ್, ಪರಮಪೂಜ್ಯ ಮುದುಕಪ್ಪ ಮುತ್ಯನವರು ಬಸವಪಟ್ಟಣ, ಕಾಂಗ್ರೇಸ್ ಹಿರಿಯ ಮುಖಂಡರಾದ ಬೈಲಪ್ಪ ನೆಲೋಗಿ, ತಿಪ್ಪಣ್ಣ ಗುಂಡುಗುರ್ತಿ, ಸಿದ್ದಣ್ಣ, ಭೂತಾಳಿ, ಮಷೇಕ್ ಪಟೇಲ್ ಬಳಬಟ್ಟಿ, ಚಂದ್ರಶೇಖರ್ ನೀರಡಗಿ, ಕಾಸಿಂ ಪಟೇಲ್ ಮುದವಾಳ, ಡಾ. ಮಾಳಪ್ಪ ಪೂಜಾರಿ ಗೆಳೆಯರ ಬಳಗ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ದಾಖಲೆಯ ಮಾನವ ಸರಪಳಿ ನಿರ್ಮಾಣ: ಟಿ. ವೆಂಕಟೇಶ್

• ಉದಯವಾಹಿನಿ, ಚಿತ್ರದುರ್ಗ

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಿನ್ನೆಲೆಯಲ್ಲಿ ಭಾನುವಾರ ಜಿಲ್ಲೆಯಲ್ಲಿ ದಾಖಲೆಯ 145 ಕಿ.ಮೀ. ಉದ್ದದ ಮಾನವ ಸರಪಳಿ ಯಶಸ್ವಿಯಾಗಿ ನಿರ್ಮಿಸಿರುವುದಕ್ಕೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹರ್ಷ ವ್ಯಕ್ತಪಡಿಸಿದ್ದಾರೆ.

ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ ವಿದ್ಯಾರ್ಥಿಗಳು, ಶಿಕ್ಷಕರು, ಸ್ವ-ಸಹಾಯ ಸಂಘಗಳ ಸದಸ್ಯರು, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು, ಸರ್ಕಾರಿ ನೌಕರರು, ವಿವಿಧ ಶಾಲಾ ಕಾಲೇಜು ಶಿಕ್ಷಣ ಸಂಸ್ಥೆಗಳು, ಸರ್ಕಾರೇತರ ಸಂಘ ಸಂಸ್ಥೆಗಳು, ವಿವಿಧ ಸಂಘಟನೆಗಳ ಸದಸ್ಯರು ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಿ ಸಂಭ್ರಮದಿಂದ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದಾರೆ. ಈ ಮೂಲಕ ಪ್ರಜಾಪ್ರಭುತ್ವದ ಮಹತ್ವವನ್ನು ಜಗತ್ತಿಗೆ ಸಾರಲಾಗಿದೆ.

ಉದಯವಾಹಿನಿ ಚಿತ್ರ

ಜನಪ್ರತಿನಿಧಿಗಳು ಕಾರ್ಯಕ್ರಮದ ಯಶಸ್ವಿಗೆ ಸಹಕರಿದ್ದಾರೆ. ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯಕ್ರಮ ರೂಪಿಸಿದ್ದಾರೆ. ಪೊಲೀಸ್ ಇಲಾಖೆ ಸೂಕ್ತ ರಕ್ಷಣೆ ಹಾಗೂ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಿದೆ. ಶಿಕ್ಷಣ, ಆರೋಗ್ಯ, ಸಮಾಜ ಕಲ್ಯಾಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಸಾರಿಗೆ ಇಲಾಖೆ ಸೇರಿದಂತೆ, ಕಾರ್ಯಕ್ರಮ ವರದಿಯನ್ನು ಎಲ್ಲಡೆ ವ್ಯಾಪಕವಾಗಿ ಬಿತ್ತರಿಸಿದ ಮಾಧ್ಯಮ ಮಿತ್ರರಿಗೂ ವೈಯಕ್ತಿಕವಾಗಿ ಧನ್ಯವಾದ ತಿಳಿಸುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದ್ದಾರೆ.

ಎಲ್ಲೆಂದರಲ್ಲಿ ವಾಹನ ನಿಲುಗಡೆ: ಪಾದಚಾರಿಗಳ

ಸಿಎಂ ಸ್ಥಾನಕ್ಕೆ ರಾಜೀನಾಮೆ ಘೋಷಿಸಿದ ಅರವಿಂದ್ ಕೇಜ್ರಿವಾಲ್

● ರಾಜೀನಾಮೆ ಘೋಷಿಸಿರುವುದು ಆಪ್ ಕಾರ್ಯಕರ್ತರು ಸೇರಿದಂತೆ ಹಲವರನ್ನು ದಿಗ್ಭ್ರಮೆಗೊಳಿಸಿದೆ

ಹೊಸದಿಲ್ಲಿ: ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸುವುದಾಗಿ ಘೋಷಿಸಿದ್ದಾರೆ. ಇನ್ನೆರಡು ದಿನಗಳಲ್ಲಿ ರಾಜೀನಾಮೆ ಸಲ್ಲಿಸಿ, ಚುನಾವಣೆಗೆ ಹೋಗುವುದಾಗಿ ಅವರು ತಿಳಿಸಿದ್ದಾರೆ. ದೆಹಲಿ ಸರ್ಕಾರದ ಅಬಕಾರಿ ನೀತಿ ಪರಿಷ್ಕರಣೆ ಕೇಸ್‌ನಲ್ಲಿ ಅವರು ಮಾರ್ಚ್ ತಿಂಗಳಲ್ಲಿ ಬಂಧನಕ್ಕೊಳಗಾಗಿದ್ದರು. ಇದೇ ವಾರ ಅವರು ಜಾಮೀನಿನ ಮೇರೆಗೆ ದೆಹಲಿ ಜೈಲಿನಿಂದ ಹೊರಬಂದಿದ್ದರು.

ಜಾಮೀನಿನ ಮೇರೆಗೆ ಹೊರಬಂದ ಕೂಡಲೇ ಅವರು ರಾಜೀನಾಮೆ ಘೋಷಿಸಿರುವುದು ಆಪ್ ಕಾರ್ಯಕರ್ತರು ಸೇರಿದಂತೆ ಹಲವರನ್ನು ದಿಗ್ಭ್ರಮೆಗೊಳಿಸಿದೆ. ಆದರೆ, ಕೇಜ್ರಿವಾಲ್ ಅವರು ತಮ್ಮ ನಿಲುವನ್ನು ಸಮರ್ಥಿಸಿಕೊಂಡಿದ್ದಾರೆ.

ಹನುಮಾನ್ ಮೊರೆ ಹೋಗಿದ್ದ ಕೇಜ್ರಿವಾಲ್: ಅಬಕಾರಿ ಹಗರಣದಲ್ಲಿ ಷರತ್ತು ಬದ್ಧ ಜಾಮೀನು ಪಡೆದು ಜೈಲಿನಿಂದ ಬಿಡುಗಡೆಯಾಗಿರುವ ದಿಲ್ಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಶನಿವಾರ ಹನುಮಾನ್ ಮಂದಿರದಲ್ಲಿ ವಿಶೇಷ ಪೂಜೆ ಸಲ್ಲಿಸಿದ್ದರು. ಪತ್ನಿ ಸುನಿತಾ, ಮಾಜಿ ಡಿಸಿಎಂ ಮನೀಷ್ ಸಿಸೋಡಿಯಾ, ಸಂಸದ ಸಂಜಯ್ ಸಿಂಗ್ ಮೊದಲಾದವರ ಜತೆಗೆ ಹನುಮಾನ್ ಮಂದಿರಕ್ಕೆ ಭೇಟಿ ನೀಡಿದ ಕೇಜ್ರಿವಾಲ್ ಪ್ರಾರ್ಥನೆ ಸಲ್ಲಿಸಿದ್ದರು.

ಈ ವೇಳೆ ಮಾತನಾಡಿದ ಕೇಜ್ರಿವಾಲ್, ''ಜೈಲಿಗೆ ಹಾಕಿದ ಮಾತ್ರಕ್ಕೆ ನನ್ನ ಜನ ಸೇವೆಯ ಸಂಕಲ್ಪಗಳು ಬದಲಾಗಲ್ಲ. ವಿಭಿನ್ನ ಶಕ್ತಿಗಳ ವಿರುದ್ಧದ ಹೋರಾಟ ಮುಂದುವರಿಯಲಿದೆ,'' ಎಂದು ಹೇಳಿದ್ದರು. ಆದರೆ, ಹೋರಾಟ ಮುಂದುವರಿಸುವುದಾಗಿ ಹೇಳಿದ್ದ ಕೇಜ್ರಿವಾಲ್ ಅವರು ಈಗ ಏಕಾಏಕಿ ರಾಜೀನಾಮೆ ಸಲ್ಲಿಸಿದ್ದರ ಹಿಂದಿನ ಕಾರಣ ವೇನು ಎಂಬುದು ಮಾತ್ರ ನಿಗೂಢವಾಗಿದೆ.

- ದೆಹಲಿ ಸಿಎಂ ಸ್ಥಾನಕ್ಕೆ ಅರವಿಂದ್ ಕೇಜ್ರಿವಾಲ್ ರಾಜೀನಾಮೆ ಘೋಷಣೆ.
- ಸರ್ಕಾರವನ್ನು ವಿಸರ್ಜಿಸಿ ಚುನಾವಣೆಗೆ ಹೋಗುವುದಾಗಿ ಹೇಳಿಕೆ.
- ಹಂಗಾಮಿ ಸಿಎಂ ಆಗಿಯೂ ಮುಂದುವರಿಯುವುದಿಲ್ಲ ಎಂದು ಸ್ಪಷ್ಟನೆ.
- ಸಿಎಂ ಸ್ಥಾನಕ್ಕೆ ರಾಜೀನಾಮೆ ಘೋಷಿಸಿದ ಅರವಿಂದ್ ಕೇಜ್ರಿವಾಲ್, ಜೈಲಿನಿಂದ ಬಂದು ಅಗ್ನಿ ಪರೀಕ್ಷೆಗೆ ಸಜ್ಜು!

ಅಗ್ನಿ ಪರೀಕ್ಷೆಗೆ ಸಜ್ಜು

ಹಂಗಾಮಿ ಸಿಎಂ ಆಗಿಯೂ ಮುಂದುವರಿಯಲ್ಲ

ಮುಖ್ಯಮಂತ್ರಿ ಹುದ್ದೆಗೆ ರಾಜೀನಾಮೆ ಸಲ್ಲಿಸಿದ ನಂತರ, ಚುನಾವಣೆ ನಡೆದು ಹೊಸ ಸರ್ಕಾರ ಬಂದು ನೂತನ ಮುಖ್ಯಮಂತ್ರಿ ಪ್ರಮಾಣ ವಚನ ಸ್ವೀಕರಿಸುವವರೆಗೂ ಈಗಿರುವ ಮುಖ್ಯಮಂತ್ರಿಗಳೇ ಹಂಗಾಮಿ ಮುಖ್ಯಮಂತ್ರಿಯಾಗಿ ಮುಂದುವರಿಯಬೇಕಿರುತ್ತದೆ. ಆದರೆ, ತಾವು ಹಂಗಾಮಿಯಾಗಿರೂ ಮುಂದುವರಿಯುವುದಿಲ್ಲ ಎಂದು ಕೇಜ್ರಿವಾಲ್ ಸ್ಪಷ್ಟಪಡಿಸಿದ್ದಾರೆ. ತಮ್ಮ ರಾಜೀನಾಮೆಯ ನಂತರ ಆಮ್ ಆದ್ಮಿ ಪಕ್ಷದ ಯಾರಾದರೂ ಒಬ್ಬ ನಾಯಕನನ್ನು ಸಿಎಂ ಆಗಿ ಮುಂದುವರಿಸಲಾಗುತ್ತದೆ ಎಂದು ಹೇಳಿದ್ದಾರೆ.

ಜನತಾ ನ್ಯಾಯಾಲಯದ ತೀರ್ಪು

ದೆಹಲಿ ಚುನಾವಣೆಗೆ ಇನ್ನು ಕೆಲವೇ ತಿಂಗಳು ಬಾಕಿಯಿವೆ. ಅಷ್ಟರಲ್ಲಾಗಲೇ ನನ್ನ ರಾಜಕೀಯ ಜೀವನವನ್ನು ಹತ್ತಿಕುವ ಕೆಲಸವನ್ನು ಬಿಜೆಪಿ ಮಾಡಿದೆ. ನನಗೆ ಕಾನೂನಿನ ನ್ಯಾಯಾಲಯದಲ್ಲಿ ಈಗಾಗಲೇ ನ್ಯಾಯ ಸಿಕ್ಕಿದೆ. ಅದರ ಜೊತೆಗೆ ನನಗೆ ಜನತಾ ನ್ಯಾಯಾಲಯದಲ್ಲಿ ತೀರ್ಪು ಬೇಕಿದೆ. ಅವರು ನಾನು ನಿರಪರಾಧಿಯೆಂದು ಎನ್ನಿಸಿ, ನಾನು ಪ್ರಾಮಾಣಿಕ ಎಂದು ತೀರ್ಮಾನಿಸಿದರೆ, ಅದಕ್ಕಿಂತ ದೊಡ್ಡ ಸಂತೋಷ ಬೇರೇನೂ ಇಲ್ಲ ಎಂದು ತಿಳಿಸಿದರು. ಜನರು ತಮ್ಮ ಆದೇಶ ಕೊಟ್ಟ ನಂತರವಷ್ಟೇ ನಾನು ಸಿಎಂ ಕುರ್ಚಿಯ ಮೇಲೆ ಕುಳಿತುಕೊಳ್ಳುತ್ತೇನೆ ಎಂದು ಹೇಳಿದ್ದಾರೆ.

3.9 ಮಿಲಿಯನ್ ಡಾಲರ್‌ಗೆ ಮಾರಾಟವಾದ ವಿಜ್ಞಾನಿ ಆಲ್ಬರ್ಟ್ ಐನ್‌ಸ್ಟೈನ್ ಪತ್ರ

ವಾಷಿಂಗ್ಟನ್: ಖ್ಯಾತ ವಿಜ್ಞಾನಿ ಆಲ್ಬರ್ಟ್ ಐನ್‌ಸ್ಟೈನ್ ಅವರು ಪರಮಾಣು ಸಂಶೋಧನೆ ಒತ್ತು ನೀಡುವಂತೆ ಅಮೆರಿಕ ಅಧ್ಯಕ್ಷರಿಗೆ ಬರೆದಿದ್ದ ಪತ್ರ ಇದೀಗ ಬೆಳಕಿಗೆ ಬಂದಿದೆ.1939ರಲ್ಲಿ ಅಂದಿನ ಅಮೆರಿಕ ಅಧ್ಯಕ್ಷ ರೂಸ್‌ವೆಲ್ಟ ಅವರಿಗೆ ಐನ್‌ಸ್ಟೈನ್ ಪತ್ರ ಬರೆದು ಪರಮಾಣು ಸಂಶೋಧನೆಗೆ ಆದ್ಯತೆ ನೀಡುವಂತೆ ಬರೆದಿದ್ದ ಪತ್ರ ಇದೀಗ 3.9 ಮಿಲಿಯನ್ ಡಾಲರ್‌ಗೆ ಮಾರಾಟವಾಗಿದೆ.

ಈಗ ನ್ಯೂಯಾರ್ಕ್‌ನಲ್ಲಿರುವ ಫ್ರಾಂಕ್ಲಿನ್ ಡಿ. ರೂಸ್‌ವೆಲ್ಟ್ ಲೈಬ್ರರಿಯ ಸಂಗ್ರಹದ ಭಾಗವಾಗಿರುವ ಮೂಲ ಪತ್ರವು ಜರ್ಮನಿಯು ಪರಮಾಣು ಶಸ್ತ್ರಾಸ್ತ್ರಗಳನ್ನು ಅಭಿವದ್ಧಿಪಡಿಸುತ್ತಿದೆ ಎಂದು ಅಧ್ಯಕ್ಷ ರೂಸ್‌ವೆಲ್ಟ್‌ಗೆ ಎಚ್ಚರಿಕೆ ನೀಡಲು ಐನ್‌ಸ್ಟೈನ್ ಮಾಡಿದ ಪ್ರಯತ್ನವಾಗಿದೆ.

ಅಡಾಲ್ಫ್ ಹಿಟ್ಲರನ ಉದಯದಿಂದಾಗಿ ಐನ್‌ಸ್ಟೈನ್ ಸಹ ಭೌತವಿಜ್ಞಾನಿ ಲಿಯೋ ಸಿಲಾರ್ಡ್ ಜೊತೆಗೆ ಯುರೋಪ್‌ನಿಂದ ಪಲಾಯನ ಮಾಡಿದ್ದರು. ತುರ್ತು ಪ್ರಜ್ಞೆಯನ್ನು ಅನುಭವಿಸಿದ ಐನ್‌ಸ್ಟೈನ್ ಅವರ ಪತ್ರವು ಪರಮಾಣು ವಿದಳನದ ಬಗ್ಗೆ ತನ್ನ ಸಂಶೋಧನೆಯನ್ನು ತ್ವರಿತಗೊಳಿಸಲು ಅಮೆರಿಕ ಸರ್ಕಾರಕ್ಕೆ ಮನವರಿಕೆ ಮಾಡಲು ಸಹಾಯ ಮಾಡಿತು, ಇದು ವ್ಯಾನ್‌ಹ್ಯಾಟನ್ ಯೋಜನೆಗೆ ಮತ್ತು ಪರಮಾಣು ಬಾಂಬ್‌ಗಳ ಅಂತಿಮವಾಗಿ ಅಭಿವದ್ಧಿಗೆ ಕಾರಣವಾಯಿತು.

ಪೀಟರ್ ಕ್ಲಾರ್ನೆಟ್, ಅಮೇರಿಕಾನಾ, ಪುಸ್ತಕಗಳು ಮತ್ತು ಕ್ರಿಸ್ಟೀಸ್‌ನ ಹಸ್ತಪ್ರತಿಗಳಲ್ಲಿ ಹಿರಿಯ ತಜ್ಞ, ಈ ಪತ್ರವನ್ನು ಇತಿಹಾಸದಲ್ಲಿ ಅತ್ಯಂತ ಪ್ರಭಾವಶಾಲಿ ಪತ್ರಗಳಲ್ಲಿ ಒಂದಾಗಿದೆ ಎಂದು ಅಮೆರಿಕದ ಹಿರಿಯ ತಜ್ಞ ಪೀಟರ್ ಕ್ಲಾರ್ನೆಟ್ ವಿವರಿಸಿದ್ದಾರೆ. 1939 ರ ಬೇಸಿಗೆಯಲ್ಲಿ ಬರೆಯಲ್ಪಟ್ಟ ಇದು ಪರಮಾಣು ಶಸ್ತ್ರಾಸ್ತ್ರಗಳ ಸ್ಪರ್ಧೆಗೆ ವೇದಿಕೆಯನ್ನು ಸ್ಥಾಪಿಸಿತು ಮತ್ತು ಯುದ್ಧ ಮತ್ತು ಮಾನವ ಇತಿಹಾಸದ ಹಾದಿಯನ್ನು ಬದಲಾಯಿಸಿತು.



ಪರಮಾಣು ಬಗ್ಗೆ ಚರ್ಚೆ

ಪತ್ರದಲ್ಲಿ, ಐನ್‌ಸ್ಟೈನ್ ಪರಮಾಣು ಭೌತಶಾಸ್ತ್ರದಲ್ಲಿನ ಇತ್ತೀಚಿನ ಪ್ರಗತಿಗಳನ್ನು ಚರ್ಚಿಸಿದರು, ಯುರೇನಿಯಂ ಶಕ್ತಿಯ ಹೊಸ ಮತ್ತು ಪ್ರಮುಖ ಮೂಲ ಆಗಬಹುದು ಮತ್ತು ಈ ಶಕ್ತಿಯನ್ನು ಅತ್ಯಂತ ಶಕ್ತಿಯುತ ಬಾಂಬ್‌ಗಳನ್ನು ರಚಿಸಲು ಬಳಸಿಕೊಳ್ಳಬಹುದು ಎಂದು ತಿಳಿಸಿದ್ದರು.

ಬಾಂಗ್ಲಾದೇಶದಲ್ಲಿ ಹಿಜಾಬ್ ಧರಿಸಿಲ್ಲ ಎಂದು ಮಹಿಳೆಯರ ಮೇಲೆ ಹಲ್ಲೆ ನಡೆಸಿದ ಪುರುಷರ ಗುಂಪು

ಬಾಂಗ್ಲಾದೇಶ: ಬಾಂಗ್ಲಾದೇಶವು ಕೂಡ ಅಫ್ಘಾನಿಸ್ತಾನದಂತಾಗುತ್ತಿದೆ, ಹಿಜಾಬ್ ಧರಿಸಿಲ್ಲ ಎಂದು ಸಾರ್ವಜನಿಕವಾಗಿ ಮಹಿಳೆಯರ ಮೇಲೆ ಹಲ್ಲೆ ನಡೆಸಿರುವ ಕೆಲವು ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ. ಪ್ರಸಿದ್ಧ ಕಾಕ್ಸ್ ಬಜಾರ್ ನಲ್ಲಿ ರಸ್ತೆಯಲ್ಲಿ ಹೋಗುವ ಮಹಿಳೆಯರ ಮೇಲೆ ಹಲ್ಲೆ ನಡೆಸುತ್ತಿದ್ದಾರೆ. ಇದು ದೇಶಾದ್ಯಂತ ಆಕ್ರೋಶವನ್ನು ಹುಟ್ಟುಹಾಕಿದೆ.

ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್ ಎಕ್ಸ್ ನಲ್ಲಿ ವೈರಲ್ ಆಗಿರುವ ವೀಡಿಯೋಗಳಲ್ಲಿ, ಹಲವಾರು ಮಹಿಳೆಯರನ್ನು ಗುರಿಯಾಗಿಟ್ಟುಕೊಂಡು ಪುರುಷರು ದಾಳಿ ನಡೆಸುತ್ತಿರುವುದನ್ನು ಕಾಣಬಹುದು. ಓರ್ವ ಮಹಿಳೆಯನ್ನು ದೊಣ್ಣೆಯಿಂದ ಥಳಿಸಲಾಗಿದ್ದು, ಮತ್ತೋರ್ವ ಮಹಿಳೆ ಸಿಟ್?-ಅಪ್ ಮಾಡುತ್ತಿರುವ ದೃಶಯವನ್ನು ವಿಡಿಯೋದಲ್ಲಿ ಕಾಣಬಹುದು. ವೀಡಿಯೊಗಳು ಬಾಂಗ್ಲಾದೇಶದಲ್ಲಿ ಬೆಳೆಯುತ್ತಿರುವ ಉಗ್ರಗಾಮಿ ಅಲೆಯ ಭಯವನ್ನು ಹುಟ್ಟುಹಾಕಿದೆ. ಅನೇಕರು ಪರಿಸ್ಥಿತಿಯನ್ನು ತಾಲಿಬಾನ್ ನಿಯಂತ್ರಿತ ಅಫ್ಘಾನಿಸ್ತಾನಕ್ಕೆ ಹೋಲಿಸಿದ್ದಾರೆ. ಬುರ್ಖಾ ಅಥವಾ ಹಿಜಾಬ್‌ಗಳನ್ನು ಧರಿಸದಿದ್ದಕ್ಕಾಗಿ ಕಾಕ್ಸ್ ಬಜಾರ್‌ನಲ್ಲಿ ಹುಡುಗಿಯರನ್ನು ಗುರಿಯಾಗಿಸುವ ತೀವ್ರಗಾಮಿ ಗುಂಪುಗಳ ನಡವಳಿಕೆಯು ಭಯ ಹುಟ್ಟುಹಾಕಿದೆ.

ಬಾಂಗ್ಲಾದೇಶದಲ್ಲಿ ಅಸ್ಥಿರ ರಾಜಕೀಯ ವಾತಾವರಣದ ಮಧ್ಯೆ ಈ ದಾಳಿ ನಡೆದಿದೆ, ಅಲ್ಲಿ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ಉಚ್ಚಾಟನೆ ಸೇರಿದಂತೆ ಇತ್ತೀಚಿನ ರಾಜಕೀಯ ಬದಲಾವಣೆಗಳು ಅಶಾಂತಿ ಮತ್ತು ಅನಿಶ್ಚಿತತೆಗೆ ಕಾರಣವಾಗಿವೆ.

ಚಂಡೀಗಢ ಗ್ರೆನೇಡ್ ಸ್ಫೋಟ : 2ನೇ ಆರೋಪಿ ಬಂಧನ

ಚಂಡೀಗಢ: ನಗರದಲ್ಲಿ ಸಂಭವಿಸಿದ ಗ್ರೆನೇಡ್ ಸ್ಫೋಟ ಘಟನೆಯಲ್ಲಿ ಭಾಗಿಯಾಗಿದ್ದ ಎರಡನೇ ಶಂಕಿತ ಆರೋಪಿಯನ್ನು ಬಂಧಿಸಿರುವುದಾಗಿ ಪಂಜಾಬ್ ಪೊಲೀಸರು ತಿಳಿಸಿದ್ದಾರೆ. ಗುರುದಾಸ್ಪುರದ ಬಟಾಲಾದ ರೈಮಲ್ ಗ್ರಾಮದ ನಿವಾಸಿ ವಿಶಾಲ್ ಮಸಿಹ್ ಅವರನ್ನು ದೆಹಲಿಯಿಂದ ಬಂಧಿಸಲಾಗಿದೆ ಎಂದು ಪೊಲೀಸ್ ಮಹಾನಿರ್ದೇಶಕ ಗೌರವ್ ಯಾದವ್ ತಿಳಿಸಿದ್ದಾರೆ.

ಕಳೆದ ಸೆ.11ರಂದು ಇಲ್ಲಿನ ಚಂಡೀಗಢ ಸೆಕ್ಟರ್ 10ರ ಮನೆಯೊಂದ ಬಳಿ ಆಟೋ ರಿಕ್ಷಾದಲ್ಲಿ ಬಂದು ಇಬ್ಬರು ಶಂಕಿತರು ಗ್ರೆನೇಡ್ ಸ್ಫೋಟ ನಡೆಸಿದ್ದರು ಇದು ಭಾರಿ ಆತಂಕ ಮೂಡಿಸಿತ್ತು. ಸ್ಫೋಟದ ಘಟನೆಯಲ್ಲಿ ಭಾಗಿಯಾಗಿರುವ ಪ್ರಮುಖ ಅಪರಾಧಿ ರೋಹನ್ ಮಸಿಹ್ ನನ್ನು ಪೊಲೀಸರು ಈಗಾಗಲೆ ಬಂಧಿಸಿದ್ದಾರೆ.ಘಟನೆ ನಡೆದ 72 ಗಂಟೆಗಳ ಒಳಗೆ ಕೇಂದ್ರೀಯ ಏಜೆನ್ಸಿಗಳ ಸಮನ್ವಯದೊಂದಿಗೆ ಸ್ಫೋಟದ ಎರಡನೇ ಅಪರಾಧಿಯನ್ನು ಬಂಧಿಸಿದೆ ಎಂದು ಯಾದವ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಸ್ಫೋಟದ ಕುರಿತ್ತು ನಡೆದಿದ್ದ ಪಿತೂರಿಯನ್ನು ಬಹಿರಂಗಪಡಿಸಲು ಹೆಚ್ಚಿನ ತನಿಖೆ ನಡೆಸಲಾಗುತ್ತಿದೆ ಎಂದು ಅವರು ಹೇಳಿದರು.

ಚಂಡೀಗಢ ಗ್ರೆನೇಡ್ ಸ್ಫೋಟದ ಮಾಸ್ಟರ್ ಮೈಂಡ್ ಅನ್ನು ಪಾಕ್ ಮೂಲದ ಭಯೋತ್ಪಾದಕ ಹರ್ವಿಂದರ್ ಸಿಂಗ್ ರಿಂದಾ, ಪಾಕಿಸ್ತಾನದ ಬೇಹುಗಾರಿಕಾ ಸಂಸ್ಥೆ ಐಎಸ್‌ಐ ಮತ್ತು ಯುಎಸ್ ಮೂಲದ ದರೋಡೆಕೋರ ಹರ್ಪ್ರೀತ್ಸಿಂಗ್ ಅಲಿಯಾಸ್ ಹ್ಯಾಪಿ ಪಾಸಿಯಾ ಎಂದು ಪೊಲೀಸರು ಹೇಳಿದ್ದಾರೆ. ತನ್ನ ಸಹಚರರ ಮೂಲಕ ಹ್ಯಾಂಡ್ ಗ್ರೆನೇಡ್ ಮತ್ತು ಶಸ್ತ್ರಾಸ್ತ್ರಗಳನ್ನು ಒದಗಿಸಿದ ಪಾಸಿಯಾ ಅವರ ಆಜ್ಞೆಯ ಮೇರೆಗೆ ರೋಹನ್ ಗ್ರೆನೇಡ್ ಸ್ಫೋಟದಲ್ಲಿ ಭಾಗಿಯಾಗಿದ್ದಾಗಿ ಒಪ್ಪಿಕೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.



ಟ್ಯಾಂಕರ್ ಪಲ್ಟಿ, ಭಾರಿ ಸ್ಫೋಟ, 25 ಮಂದಿ ಸಾವು, 40 ಜನರಿಗೆ ಗಾಯ

ಹೈತಿ: ಪೆಟ್ರೋಲ್ ಸಾಗಿಸುತ್ತಿದ್ದ ಟ್ಯಾಂಕರ್ ಪಲ್ಟಿಯಾದ ಪರಿಣಾಮ ಭಾರಿ ಸ್ಫೋಟ ಸಂಭವಿಸಿ 25 ಮಂದಿ ಸಾವನ್ನಪ್ಪಿರುವ ಘಟನೆ ಹೈತಿಯಲ್ಲಿ ನಡೆದಿದೆ. 40 ಜನರು ಗಂಭೀರವಾಗಿ ಗಾಯಗೊಂಡಿದ್ದಾರೆ. ಗಂಭೀರವಾಗಿ ಸುಟ್ಟ ರೋಗಿಗಳಿಗೆ ಚಿಕಿತ್ಸೆ ನೀಡಲು ಹೈತಿಯ ಆಸ್ಪತ್ರೆಗಳು ಸಾಕಷ್ಟು ಸೌಲಭ್ಯಗಳನ್ನು ಹೊಂದಿಲ್ಲ.

1.2 ಕೋಟಿ ಜನಸಂಖ್ಯೆ ಹೊಂದಿರುವ ಈ ದೇಶವು ಇಂಧನ ಕೊರತೆಯಿಂದ ಸಂಕಷ್ಟದಲ್ಲಿದೆ. ಗುಂಪುಗಳ ನಡುವಿನ ಕಾಳಗದಿಂದಾಗಿ ದೇಶಕ್ಕೆ ಸರಕುಗಳನ್ನು ಆಮದು ಮಾಡಿಕೊಳ್ಳುವುದು ಕಷ್ಟಕರವಾಗಿದೆ.

ಮೂರು ವರ್ಷಗಳ ಹಿಂದೆ ಪ್ರಬಲ ಭೂಕಂಪದಿಂದ ತತ್ತರಿಸಿದ್ದ 60,000 ಜನರು ವಾಸಿಸುವ ಮಿರಾಗೋನೆಯಲ್ಲಿ ಅಪಘಾತ ಸಂಭವಿಸಿದೆ. 2021 ರಲ್ಲಿ, ಹೈಣ ಇಯ ಎರಡನೇ ಅತಿದೊಡ್ಡ ನಗರವಾದ ಕ್ಯಾಪ್-ಹೈಟಿಯನ್‌ನಲ್ಲಿ ಇಂಧನ ತುಂಬಿದ ಟ್ರಕ್ ಉರುಳಿಬಿದ್ದು ಸ್ಫೋಟಗೊಂಡಾಗ 75 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದರು.

ನಗರದ ಪೂರ್ವ ಅಂಚಿನಲ್ಲಿರುವ ಸನ್ಮಾರಿ ಪ್ರದೇಶದಲ್ಲಿ ಮಧ್ಯರಾತ್ರಿ ಪೆಟ್ರೋಲ್ ಸಾಗಿಸುತ್ತಿದ್ದ ಟ್ರಕ್ ಪಲ್ಟಿಯಾದ ನಂತರ ಟ್ಯಾಂಕರ್ ಸ್ಫೋಟಗೊಂಡಿದೆ.

ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಘಟನೆಯಲ್ಲಿ ಸುಮಾರು 20 ಮನೆಗಳೂ ಸುಟ್ಟು ಕರಕಲಾಗಿದ್ದವು. ಟ್ಯಾಂಕರ್ ಪಲ್ಟಿಯಾದ ನಂತರ ಕೆಲವರು ರಸ್ತೆಯಲ್ಲಿ ಸುರಿದ ಪೆಟ್ರೋಲ್ ಸಂಗ್ರಹಿಸಲು ಓಡಿದರು. ಈ ಸಂದರ್ಭದಲ್ಲಿ ಇಂಧನ ಟ್ಯಾಂಕರ್‌ನಲ್ಲಿ ಸ್ಫೋಟ ಸಂಭವಿಸಿದೆ. ಬೆಂಕಿ ವೇಗವಾಗಿ ಹರಡಿತು. ಇದರಿಂದಾಗಿ ಜನರು ಸಜೀವ ದಹನವಾದರು.

ಈ ಅಪಘಾತದ ಬಗ್ಗೆ ಸಂತಾಪ ವ್ಯಕ್ತಪಡಿಸಿರುವ ದೇಶದ ಪ್ರಧಾನಿ ಏರಿಯಲ್ ಹೆನ್ರಿ, ಸುಟ್ಟ ಗಾಯಗಳಿಂದ ಸಾವನ್ನಪ್ಪಿರುವವರ ಗುರುತು ಪತ್ತೆ ಹಚ್ಚುವುದು ಕಷ್ಟದ ವಿಷಯವಾಗಿದೆ ಎಂದು ಹೇಳಿದರು. ಮೇಯರ್ ಪ್ರಕಾರ, ವೇಗವಾಗಿ ಬಂದ ಟ್ಯಾಂಕರ್ ನಿಯಂತ್ರಣ ತಪ್ಪಿ ಪಲ್ಟಿಯಾಗಿದೆ, ನಂತರ ಹತ್ತಿರದಲ್ಲಿದ್ದ ಜನರು ಇಂಧನ ಸಂಗ್ರಹಿಸಲು ಓಡಿದಾಗ ಸ್ಫೋಟ ಸಂಭವಿಸಿದೆ.

ನಾಗಮಂಗಲ ಗಲಭೆ ಹಿಂದೆ ನಿಷೇಧಿತ ಪಿಎಫ್‌ಐ..?

ನವದೆಹಲಿ: ಕರ್ನಾಟಕದ ಮಂಡ್ಯ ಜಿಲ್ಲೆ ನಾಗಮಂಗಲ ಪಟ್ಟಣದಲ್ಲಿ ಗಣೇಶ ವಿಸರ್ಜನೆ ವೇಳೆ ಎರಡು ಸಮುದಾಯಗಳ ನಡುವೆ ನಡೆದ ಕೋಮುಗಲಭೆ ಪ್ರಕರಣವನ್ನು ರಾಷ್ಟ್ರೀಯ ತನಿಖಾ ದಳ(ಎನ್‌ಐಎ) ಕೈಗೆತ್ತಿಕೊಳ್ಳಲು ಮುಂದಾಗಿದೆ. ಏಕೆಂದರೆ ನಾಗಮಂಗಲ ಪೊಲೀಸರ್ ಎಫ್‌ಐಆರ್‌ನಲ್ಲಿ ದಾಖಲಿಸಿರುವ 76 ಆರೋಪಿಗಳ ಪೈಕಿ ಇಬ್ಬರು ಆರೋಪಿಗಳು ನಿಷೇಧಿತ ಪಾಪುಲರ್ ಫ್ರಂಟ್ ಆಫ್ ಇಂಡಿಯ ಸಂಘಟನೆಗೆ ಸೇರಿದವರೆಂಬುದು ಬೆಳಕಿಗೆ ಬಂದಿದೆ.

ಇದೊಂದು ಪೂರ್ವನಿಯೋಜಿತ ಕೃತ್ಯ ಎಂದು ಬಿಜೆಪಿ ಮತ್ತು ಜೆಡಿಎಸ್ನ ಅನೇಕ ನಾಯಕರುಗಳು ಆರೋಪಿಸಿದ್ದರು. ಘಟನೆ ಆಕಸಿಕ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದರಾದರೂ ಮೇಲ್ನೋಟಕ್ಕೆ ವ್ಯವಸ್ಥಿತ ಸಂಚು ಎಂಬ ಅನುಮಾನ ವ್ಯಕ್ತವಾಗಿದೆ.

ನಾಗಮಂಗಲ ಪಟ್ಟಣದ ಮಸೀದಿ ಬಳಿ ಗಲಭೆಗೆ ಬಳಸಿರುವ ಪೆಟ್ರೋಲ್ ಬಾಂಬ್, ತಲವಾರ್, ಗಲಾಟೆ ನಡೆದ ದಿನ ಮೆಡಿಕಲ್ ಶಾಪ್ನಲ್ಲಿ 200 ಮಾಸ್ಕ್ಗಳನ್ನು ಖರೀದಿ ಮಾಡಿರುವುದು ಪೂರ್ವ ನಿಯೋಜಿತ ಕೃತ್ಯಕ್ಕೆ ಸಾಕ್ಷಿಯಾಗಿವೆ. ದುಷ್ಕೃತ್ಯಕ್ಕೆ ಬಳಸಿರುವ ಕೆಲವು ಮಾರಕಾಸ್ತ್ರಗಳು ಕೇರಳದ ಮಲ್ಲಪ್ಪುರಂನಿಂದ ಬಂದಿದ್ದವು ಎಂಬ ಶಂಕೆ ವ್ಯಕ್ತವಾಗಿದೆ. ಈ ಹಿಂದೆ ಶಿವಮೊಗ್ಗದ ರಾಗಿಗುಡ್ಡದ ಬಳಿ ಟಿಪ್ಪು ಜಯಂತಿ ಆಚರಣೆ ವೇಳೆಯು ನಿಷೇಧಿತ ಪಿಎಫ್‌ಐ ಸಂಘಟನೆಯವರೇ ಗಲಭೆ ಎಬ್ಬಿಸಿದ್ದರೆಂಬುದು ತನಿಖೆಯಿಂದ ಗೊತ್ತಾಗಿತ್ತು. ಶಾಂತಿಪ್ರಿಯವಾಗಿದ್ದ ನಾಗಮಂಗಲದಲ್ಲಿ ಏಕಾಏಕಿ ಇಷ್ಟು ದೊಡ್ಡ ಮಟ್ಟದ ಕೋಮುಗಲಭೆ ನಡೆಯಲು ಹಲವು ದಿನಗಳಿಂದ ವ್ಯವಸ್ಥಿತವಾದ ಪಿತೂರಿಯನ್ನು ನಡೆಸಿರುವ ಸಾಧ್ಯತೆಯನ್ನು ತಳ್ಳಿ ಹಾಕುವಂತಿಲ್ಲ ಎಂದು ಎನ್‌ಐಎ ಮೂಲಗಳು ತಿಳಿಸಿವೆ.

ಎಫ್‌ಐಆರ್‌ನಲ್ಲಿ ದಾಖಲಾಗಿರುವ ಯುಸೋಫ್ ಮತ್ತು ನಾಸೀರ್‌ನ್ನು ಶೀಘ್ರದಲ್ಲೇ ಎನ್‌ಐಎ ವಶಕ್ಕೆ ಪಡೆಯಲಿದ್ದು, ಅಧಿಕೃತವಾಗಿ ಪ್ರಕರಣವನ್ನು ಕೈಗೆತ್ತಿಕೊಳ್ಳಲಿದೆ ಎಂದು ತಿಳಿದುಬಂದಿದೆ. ಕಳೆದ ಸೆ.2ರಂದು ನಾಗಮಂಗಲದಲ್ಲಿ ಗಣೇಶ ವಿಸರ್ಜನೆ ವೇಳೆ ಕ್ಷುಲ್ಲಕ ಕಾರಣಕ್ಕಾಗಿ ಎರಡು

ರವಿಕೆ ಧರಿಸದೆ ಸೀರೆಯುಟ್ಟ ಚೈತ್ರಾ ಆಚಾರ್

ಕನ್ನಡದ 'ಟೋಬಿ' ಸಿನಿಮಾ ನಟಿ ಚೈತ್ರಾ ಆಚಾರ್ ಸದಾ ಒಂದಲ್ಲಾ ಒಂದು ಹಾಟ್ ಫೋಟೋಶೂಟ್ ಮೂಲಕ ಸದ್ದು ಮಾಡುತ್ತಲೇ ಇರುತ್ತಾರೆ. ಇದೀಗ ರವಿಕೆ ಧರಿಸದೆ ಸೀರೆಯುಟ್ಟು ಬೋಲ್ಡ್ ಆಗಿ ಪೋಸ್ ನೀಡಿದ್ದಾರೆ.

ಸದ್ಯ ಕನ್ನಡದ ಆಲಿಯಾ ಭಟ್ ಎಂದೇ ಫೇಮಸ್ ಆಗಿರುವ ಈ ಟೋಬಿ ನಟಿ ಮತ್ತೆ ಹೊಸ ಫೋಟೋಶೂಟ್‌ನಿಂದ ಇಂಟರ್‌ನೆಟ್‌ನಲ್ಲಿ ಕಮಾಲ್ ಮಾಡಿದ್ದಾರೆ. ರವಿಕೆ ಧರಿಸದೆ ಬೆನ್ನು ತೋರಿಸಿ ಸೀರೆಯಲ್ಲಿ ಮಿಂಚಿರೋದು ಈಗ ಪಡ್ಡೆಹುಡುಗರ ನಿದ್ದೆ ಕೆಡಿಸಿದೆ.

ಬಿಳಿ ಬಣ್ಣದ ಸೀರೆಯುಟ್ಟು ಕೆಂಪು ಗಾಜಿನ ಬಳೆ ಹಾಕಿಕೊಂಡು ಮುದ್ದಾಗಿ ನಟಿ ಕಾಣಿಸಿಕೊಂಡಿದ್ದಾರೆ. ಬ್ಲೌಸ್ ಧರಿಸದೆ ಸೀರೆ ಉಟ್ಟಿರೋದಕ್ಕೆ ಬಗೆಯ ಕಾಮೆಂಟ್‌ಗಳು ಹರಿದು ಬರುತ್ತಿವೆ. ಕೆಟ್ಟ ಕಾಮೆಂಟ್ಸ್‌ಗೆ ತಲೆ ಕೆಡಿಸಿಕೊಳ್ಳದೆ ರವಿಕೆ ಯಾಕೆ ಬೇಕು, ಮಾನ ಮುಚ್ಚಲು ಸೀರೆ ಸಾಕು ಎಂದು ಚೈತ್ರಾ ಸಖತ್ ಆಗಿಯೇ ಕ್ಯಾಮೆರಾಗೆ ಪೋಸ್ ಕೊಟ್ಟಿದ್ದಾರೆ. ಇನ್ನೂ ಕನ್ನಡತಿ ಚೈತ್ರಾ ತಮಿಳಿನ ಎರಡು ಬಂಪರ್ ಆಫರ್‌ಗಳನ್ನು ಬಾಚಿಕೊಂಡಿದ್ದಾರೆ. ಸ್ಟಾರ್ ನಟ ಸಿದ್ಧಾರ್ಥ್‌ಗೆ ನಾಯಕಿಯಾಗಿ ಚೈತ್ರಾ ನಟಿಸುತ್ತಿದ್ದಾರೆ. ಕನ್ನಡದ ಜೊತೆಗೆ ಪರಭಾಷೆಗಳಿಂದ ನಟಿಗೆ ಅವಕಾಶಗಳು ಅರಸಿ ಬರುತ್ತಿವೆ. ಸಪ್ತಸಾಗರದಾಚೆ ಎಲ್ಲೋ, 'ಟೋಬಿ' ಸಿನಿಮಾದಲ್ಲಿ ನಟಿಸಿದ ಮೇಲೆ ಚೈತ್ರಾ ಆಚಾರ್‌ಗೆ ಬೇಡಿಕೆ ಜಾಸ್ತಿಯಾಗಿದೆ. ರಕ್ಷಿತ್ ಶೆಟ್ಟಿ ಮತ್ತು ರಾಜ್ ಬಿ ಶೆಟ್ಟಿಗೆ ನಾಯಕಿಯಾಗಿ ಅದ್ಭುತವಾಗಿ ನಟಿಸಿದರು. 2019ರಲ್ಲಿ 'ಮಹಿರಾ' ಸಿನಿಮಾದ ಮೂಲಕ ಚೈತ್ರಾ ಆಚಾರ್ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟರು.

ವಿಜಯ್ ಕೊನೆಯ ಸಿನಿಮಾದಲ್ಲಿ ಬಾಬಿ ವಿಲನ್

ತಮಿಳಿನ ಸ್ಟಾರ್ ನಟ ವಿಜಯ್ ದಳಪತಿ ಕೊನೆಯ ಸಿನಿಮಾ ಕುರಿತು ಇದೀಗ ಇಂಟರೆಸ್ಟಿಂಗ್ ಅಪ್‌ಡೇಟ್‌ವೊಂದು ಸಿಕ್ಕಿದೆ. ಕನ್ನಡದ ಕೆವಿಎನ್ ಪ್ರೊಡಕ್ಷನ್ಸ್ ನಿರ್ಮಾಣದ ಸಿನಿಮಾದಲ್ಲಿ ವಿಜಯ್ ಕಡೆಯದಾಗಿ ಕಾಣಿಸಿಕೊಳ್ಳುತ್ತಿದ್ದು, ಈ ಚಿತ್ರದಲ್ಲಿ ಬಾಬಿ ಡಿಯೋಲ್ ವಿಲನ್ ಆಗಿ ಅಬ್ಬರಿಸಲಿದ್ದಾರೆ ಎಂಬ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ವಿಜಯ್ ನಟನೆಯ 69ನೇ ಸಿನಿಮಾದಲ್ಲಿ 'ಅನಿಮಲ್' ಖ್ಯಾತಿಯ ನಟ ಬಾಬಿ ಡಿಯೋಲ್ ಖಳನಾಯಕನಾಗಿ ಕಾಣಿಸಿಕೊಳ್ಳಲಿದ್ದಾರೆ ಎನ್ನಲಾಗಿದೆ. ಸಾಕಷ್ಟು ಸಿನಿಮಾಗಳಲ್ಲಿ ಬ್ಯುಸಿಯಿರುವ ನಟನನ್ನು ಚಿತ್ರತಂಡ ಸಂಪರ್ಕಿಸಿದೆ. ವಿಜಯ್ ಸಿನಿಮಾದಲ್ಲಿ ನಟಿಸುವ ಕುರಿತು ಬಾಬಿ ಡಿಯೋಲ್ ಜೊತೆ ಒಂದು ಹಂತದ ಮಾತುಕತೆಯಾಗಿದ್ದು, ಕಥೆ ಮತ್ತು ಪಾತ್ರದ ಕುರಿತು ಚರ್ಚೆಯಾಗಿದೆ ಎನ್ನಲಾಗಿದೆ. ಅಷ್ಟಕ್ಕೂ ಈ ಸುದ್ದಿ ನಿಜನಾ ಎಂಬುದನ್ನು ಚಿತ್ರತಂಡ ಅಧಿಕೃತವಾಗಿ ತಿಳಿಸುವವರೆಗೂ ಕಾದುನೋಡಬೇಕಿದೆ.

ಅಂದಹಾಗೆ, 'ದಳಪತಿ 69' ಮೇಲೆ ಬಲು ನಿರೀಕ್ಷೆ ಇರೋದ್ರಿಂದ ಭರ್ತಿ 500 ಕೋಟಿಯಲ್ಲಿ ಚಿತ್ರ ತಯಾರಾಗುತ್ತಿದೆ. ತಮಿಳು ಚಿತ್ರಪ್ರೇಮಿಗಳ ಪಾಲಿನ ಮಾಸ್ ಮ್ಯಾನ್ ಇನ್ಮುಂದೆ ಬಣ್ಣ ಹಚ್ಚೋದಿಲ್ಲ ಅನ್ನುವ ಕೊರಗಿನ ಮಧ್ಯೆ ದಳಪತಿ 69 ಮೇಲೆ ನಿರೀಕ್ಷೆಯಂತೂ ದುಪ್ಪಟ್ಟಾಗಿದೆ. ಈ ನಡುವೆ ಇನ್ನೊಂದು ವಿಷಯ ಭಾರೀ ಆಶ್ಚರ್ಯ ಹುಟ್ಟಿಸಿದೆ. ಅದುವೇ ವಿಜಯ್ ಸಂಭಾವನೆ. ಇನ್ನೂ ದಳಪತಿ 69 ಚಿತ್ರಕ್ಕೆ ವಿಜಯ್ ಭರ್ತಿ 275 ಕೋಟಿ ರೂ. ಸಂಭಾವನೆ ಪಡೆಯುತ್ತಿದ್ದಾಂತೆ. ಚಿತ್ರದ ಬಜೆಟ್‌ನ ಅರ್ಧ ಭಾಗದಷ್ಟು ವಿಜಯ್ ಸಂಭಾವನೆ ಇರುತ್ತದೆ ಎಂದು ಸುದ್ದಿಯಾಗಿದೆ. ಹಿಂದಿನ 'ದಿ ಗೋಟ್' ಚಿತ್ರಕ್ಕೆ ವಿಜಯ್ ಬರೋಬ್ಬರಿ 200 ಕೋಟಿ ಸಂಭಾವನೆ ಪಡೆದಿದ್ದರು ಎಂಬ ವದಂತಿ ಇದೆ. ಈ ಬೆನ್ನಲ್ಲೇ ಅದಕ್ಕಿಂತಲೂ ಹೆಚ್ಚು 275 ಕೋಟಿ ಹಣ ಸಂಭಾವನೆ ರೂಪದಲ್ಲಿ ವಿಜಯ್ ಪಡೆಯಲಿದ್ದಾರೆ ಎಂಬುದೇ ಕುತೂಹಲದ ಸಂಗತಿ.

2026ರ ತಮಿಳುನಾಡು ವಿಧಾನಸಭೆ ಚುನಾವಣೆಗೆ ವಿಜಯ್ ಅಣಿಯಾಗುತ್ತಿದ್ದಾರೆ. ಸ್ವಂತ ಪಕ್ಷ ಸ್ಥಾಪಿಸಿ ರಾಜಕೀಯಕ್ಕೆ ಎಂಟ್ರಿಯಾಗಿದ್ದಾರೆ. ಲೋಗೋ ಮತ್ತಿತರ ಕೆಲಸಗಳನ್ನ ಮಾಡಿಕೊಂಡು ಬಂದಿದ್ದಾರೆ.

200 ಕೋಟಿ ಸಂಭಾವನೆ

ಬ್ಯಾಕ್ ಟು ಬ್ಯಾಕ್ ಹಿಟ್

ಮತ್ತೊಂದು ರೊಮ್ಯಾಂಟಿಕ್ ಸಿನಿಮಾ ಒಪ್ಪಿಕೊಂಡ ತೃಪ್ತಿ ದಿಮ್ರಿ

'ಅನಿಮಲ್' ಖ್ಯಾತಿಯ ತೃಪ್ತಿ ದಿಮ್ರಿ ಬ್ಯಾಕ್ ಟು ಬ್ಯಾಕ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಸದ್ಯ ಮತ್ತೊಂದು ರೊಮ್ಯಾಂಟಿಕ್ ಚಿತ್ರವೊಂದನ್ನು ಒಪ್ಪಿಕೊಂಡಿದ್ದಾರೆ. ಕಾರ್ತಿಕ್ ಆರ್ಯನ್ ಜೊತೆ ಡ್ಯುಯೆಟ್ ಹಾಡಲು ನಟಿ ರೆಡಿಯಾಗಿದ್ದಾರೆ. ರಣ್‌ಬೀರ್ ಕಪೂರ್ ಜೊತೆ ಬೋಲ್ಡ್ ಪಾತ್ರದಲ್ಲಿ ನಟಿಸಿದ ಬಳಿಕ ತೃಪ್ತಿಗೆ ಹೆಚ್ಚೆಚ್ಚು ಹಾಟ್ ಬೋಲ್ಡ್ ಪಾತ್ರಗಳಲ್ಲಿ ಕಾಣಿಸಿಕೊಳ್ತಿದ್ದಾರೆ. ವಿಕ್ಕಿ ಕೌಶಲ್ ಜೊತೆ ಗುಡ್ ನ್ಯೂಸ್ ಚಿತ್ರ, ರಾಜ್‌ಕುಮಾರ್ ರಾವ್ ಜೊತೆ 'ವಿಕ್ಕಿ ವಿದ್ಯಾ ಕಾ ವೋ ವಾಲಾ ವಿಡಿಯೋ' ಸಿನಿಮಾಗಳಲ್ಲಿ ನಟಿಸಿದ್ದಾರೆ.

ಈ ಬೆನ್ನಲ್ಲೇ, ಲವರ್ ಬಾಯ್ ಕಾರ್ತಿಕ್ ಆರ್ಯನ್ ಹೊಸ ಚಿತ್ರಕ್ಕೆ ತೃಪ್ತಿ ನಾಯಕಿಯಾಗಿದ್ದು, ಇದೇ ಸೆ.24ರಿಂದ ಚಿತ್ರೀಕರಣ ಶುರುವಾಗಲಿದೆ. ಮುಂಬೈನಲ್ಲಿ ನಡೆಯಲಿರುವ ಈ ಚಿತ್ರದ ಶೂಟಿಂಗ್‌ಗೆ ಕಾರ್ತಿಕ್ ಜೊತೆ ನಟಿ ಭಾಗಿಯಾಗಲಿದ್ದಾರೆ. ಈ ಚಿತ್ರವನ್ನು ಅನುರಾಗ್ ಬಸು ನಿರ್ದೇಶನ ಮಾಡಲಿದ್ದಾರೆ.

ವಿಭಿನ್ನವಾಗಿರುವ ಲವ್ ಸ್ಟೋರಿ ಇದಾಗಿದ್ದು, ಎಂದೂ ಕಾಣಿಸಿಕೊಂಡಿದ ಡಿಫರೆಂಟ್ ರೋಲ್‌ಗೆ ತೃಪ್ತಿ ಜೀವ ತುಂಬಲಿದ್ದಾರೆ. ಇದೇ ಮೊದಲ ಬಾರಿಗೆ ಕಾರ್ತಿಕ್ ಮತ್ತು ತೃಪ್ತಿ ಜೊತೆಯಾಗುತ್ತಿರೋದ್ರಿಂದ ಸಿನಿಮಾ ಕುರಿತು ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ.

ಬಾಲಿವುಡ್ ಆಫರ್ ಬಾಚಿಕೊಂಡ ಮೃಣಾಲ್

'ಸೀತಾ ರಾಮಂ' ನಟಿ ಮೃಣಾಲ್ ಠಾಕೂರ್ ಸೌತ್ ಮತ್ತು ಬಾಲಿವುಡ್ ಚಿತ್ರಗಳಲ್ಲಿ ನಟಿಸಲು ಬಂಪರ್ ಅವಕಾಗಳು ಸಿಗುತ್ತಿವೆ. ಸೌತ್‌ನಲ್ಲಿ ಬ್ಯಾಕ್ ಟು ಬ್ಯಾಕ್ ಹಿಟ್ ಕೊಟ್ಟಿರುವ ಸುಂದರಿಗೆ ಬಾಲಿವುಡ್‌ನಲ್ಲಿ ಸಂಜಯ್ ಲೀಲಾ ಬನ್ಸಾಲಿ ಸಿನಿಮಾದಲ್ಲಿ ನಟಿಸುವ ಚಾನ್ಸ್ ಸಿಕ್ಕಿರುವ ಕುರಿತು ಹರಿದಾಡುತ್ತಿದೆ.

ಸಂಜಯ್ ಲೀಲಾ ಬನ್ಸಾಲಿ ನಿರ್ಮಾಣದ ಸಿನಿಮಾದಲ್ಲಿ ಮೃಣಾಲ್ ಹೀರೋಯಿನ್ ಆಗಿ ನಟಿಸಲು ಬುಲಾವ್ ಬಂದಿದೆ ಎನ್ನಲಾಗಿದೆ. ಯುವ ನಟ ಸಿದ್ಧಾಂತ್ ಚತುರ್ವೇದಿ ಮತ್ತು ಮೃಣಾಲ್‌ರನ್ನು ಜೋಡಿಯಾಗಿ ಹೊಸ ಲವ್ ಸ್ಟೋರಿ ಒಳಗೊಂಡ ಸಿನಿಮಾ ಮಾಡಲು ಚಿತ್ರತಂಡ ಸಜ್ಜಾಗಿದೆ. ಇನ್ನೂ ಈ ಚಿತ್ರಕ್ಕೆ 'ತುಮ್ ಹಿ ಹೋ' ಟೈಟಲ್ ಇಡಲಾಗಿದೆ. ರವಿ ಉದ್ಯಾವರ್ ಅವರು ಈ ಸಿನಿಮಾಗೆ ಆಕ್ಷನ್ ಕಟ್ ಹೇಳಲಿದ್ದಾರೆ. ಮೇ 2023ರಿಂದಲೇ ಸಿನಿಮಾ ಕೆಲಸ ಶುರುವಾಗಿದೆ. ಇನ್ನೂ ಸೆಪ್ಟೆಂಬರ್ ಅಂತ್ಯದಲ್ಲಿ ಮುಂದಿನ ಶೆಡ್ಯೂಲ್ ಶೂಟಿಂಗ್ ಉತ್ತರಾಖಂಡದಲ್ಲಿ ನಡೆಯಲಿದೆ.

ಚಿತ್ರರಂಗದಲ್ಲಿ ಮಹಿಳೆಯರಿಗೆ ಸುರಕ್ಷತೆ ಬೇಕು

ಹೇಮಾ ಸಮಿತಿ ವರದಿ ಹೊರಬಿದ್ದ ಬಳಿಕ ಮಾಲಿವುಡ್ ಇಂಡಸ್ಟ್ರಿಯಲ್ಲಿ ಅಲ್ಲೋಲ ಕಲ್ಲೋಲ ಆಗಿದೆ. ಇದೇ ತರಹ ಸಮಿತಿ ಮಹಿಳೆಯರ ಸುರಕ್ಷತೆಗಾಗಿ ಎಲ್ಲಾ ಭಾಷೆಯ ಚಿತ್ರರಂಗದಲ್ಲೂ ಇರಬೇಕು ಎಂದು ಅನೇಕರು ಪಟ್ಟು ಹಿಡಿದಿದ್ದಾರೆ. ಇದರ ನಡುವೆ ಕಾಸ್ಟಿಂಗ್ ಕೌಚ್ ಬಗ್ಗೆ ಬಾಲಿವುಡ್ ನಟ ಅನನ್ಯಾ ಪಾಂಡೆ ಮಾತನಾಡಿದ್ದಾರೆ. ನಟಿಯರಿಗೆ ಸೆಫ್ಟಿ ಬೇಕು ಎಂದಿದ್ದಾರೆ. ಇಸಾಲು ಸಾಲು ಸಿನಿಮಾಗಳಲ್ಲಿ ಬ್ಯುಸಿಯಿರುವ ನಟಿ ಕಾಸ್ಟಿಂಗ್ ಕೌಚ್ ಕುರಿತು ಸಮಾರಂಭವೊಂದರಲ್ಲಿ ಮಾತನಾಡಿ, ಸಿನಿಮಾರಂಗದಲ್ಲಿ ಕೆಲಸ ಮಾಡುವ ಮಹಿಳೆಯರಿಗಾಗಿಯೇ ಹೇಮಾ ಸಮಿತಿಯಂತಹ ಸಂಸ್ಥೆಗಳು ಬರಬೇಕು ಎಂದಿದ್ದಾರೆ. ಪ್ರತಿ ಉದ್ಯಮದಲ್ಲೂ ಹೇಮಾ ಸಮಿತಿಯಂತಹ ಸಮಿತಿ ಇರುವುದು ಬಹಳ ಮುಖ್ಯ ಎಂದರು. ಅಲ್ಲಿ ಮಹಿಳೆಯರು ಸೇರುತ್ತಾರೆ. ಸುರಕ್ಷತೆಗಾಗಿ ಏನೆಲ್ಲಾ ಅವಶ್ಯಕತೆ ಇದೆ ಎನ್ನುವ ಚರ್ಚೆಗಳು ನಡೆಯುತ್ತವೆ ಎಂದು ನಟಿ ಮಾತನಾಡಿದರು.

ಈ ಸಮಿತಿಯು ಬಂದ ನಂತರ ಅನೇಕ ಬದಲಾವಣೆಗಳಿವೆ ಎಂದು ನಾನು ಅಂದುಕೊಂಡಿದ್ದೇನೆ. ನೀವೇ ನೋಡುತ್ತಿರುವಂತೆ ಧೈರ್ಯವಾಗಿ ಕಿರುಕುಳದ ವಿರುದ್ಧ ಧ್ವನಿ ಎತ್ತಿದ್ದಾರೆ. ತಮ್ಮ ಸಮಸ್ಯೆಗಳ ಬಗ್ಗೆ ಮಾತನಾಡುತ್ತಿದ್ದಾರೆ. ಈ ವಿಷಯವು ಚಿತ್ರರಂಗಕ್ಕೆ ಮಾತ್ರ ಮೀಸಲಾದ ವಿಷಯವಲ್ಲ, ಅನೇಕ ಸಹಾಯವಾಣಿ ಸಂಖ್ಯೆ, ಯೋಜನೆಗಳು ಮಹಿಳೆಯರಿಗಾಗಿ ಶುರುವಾಗಿದೆ. ಕೆಲವು ವಿಭಾಗಗಳು ಮಹಿಳೆಯರ ಸುರಕ್ಷತೆಗಾಗಿ ಮಾಡಿದ್ದಾರೆ. ನಮ್ಮ ಕಾಲ್‌ಶೀಟ್‌ನಲ್ಲಿಯೂ ಸಹಾಯವಾಣಿ ಸಂಖ್ಯೆಗಳಿವೆ. ನೀವು ಅವರಿಗೆ ಕರೆ ಮಾಡಿ ದೂರು ನೀಡಬಹುದು. ನೀವು ಸದ್ಯ ಅವರು 'ಕಾಲ್ ಮಿ ಬೇ' ಸಿನಿಮಾ ಪ್ರಚಾರ ಕಾರ್ಯದಲ್ಲಿ ಬ್ಯುಸಿಯಾಗಿದ್ದಾರೆ. ಇದರ ಜೊತೆಗೆ ಅಕ್ಷಯ್ ಕುಮಾರ್ ಜೊತೆಗಿನ ಹೊಸ ಚಿತ್ರಕ್ಕೆ ನಟಿ ಕಾಣಿಸಿಕೊಳ್ಳಲಿದ್ದಾರೆ.

ಟೀಂ ಇಂಡಿಯಾ ನನ್ನ ನೆಚ್ಚಿನ ಎದುರಾಳಿ ತಂಡವಲ್ಲ

ಟೀಂ ಇಂಡಿಯಾ ಟೆಸ್ಟ್ ಆರಂಭಕ್ಕೆ ವಾರಕ್ಕೂ ಮುಂಚೆಯೇ ಚೆನ್ನೈನಲ್ಲಿ ಬೀಡು ಬಿಟ್ಟಿದ್ದು, ಅಭ್ಯಾಸದಲ್ಲಿ ನಿರತವಾಗಿದೆ. ಅದರಂತೆ ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಬ್ಯಾಟಿಂಗ್ ಪ್ರಾಕ್ಟೀಸ್‌ನಲ್ಲಿ ನಿರತರಾಗಿದ್ದರೆ, ಕುಲ್‌ದೀಪ್ ಯಾದವ್, ಸಿರಾಜ್, ಬೂಮ್ರಾ ಬೌಲಿಂಗ್ ಪ್ರಾಕ್ಟೀಸ್ ನಡೆಸಿದ್ದಾರೆ. ಅದರ ವಿಡಿಯೋವನ್ನು ಇದೀಗ ಬಿಸಿಸಿಐ ಶೇರ್ ಮಾಡಿದೆ.

ಭಾರತ ತಂಡ ಸೆಪ್ಟೆಂಬರ್ 19 ರಿಂದ ಬಾಂಗ್ಲಾದೇಶ ವಿರುದ್ಧ 2 ಟೆಸ್ಟ್ ಪಂದ್ಯಗಳ ಸರಣಿಯನ್ನು ಆಡಲು ಸಿದ್ಧವಾಗಿದೆ. ಮೊದಲ ಪಂದ್ಯ ಚೆನ್ನೈನಲ್ಲಿ ನಡೆಯಲಿದ್ದು, ಎರಡನೇ ಪಂದ್ಯ ಕಾನ್ಪುರದಲ್ಲಿ ಸೆಪ್ಟೆಂಬರ್ 27 ರಿಂದ ನಡೆಯಲಿದೆ. ಹೀಗಾಗಿ ಟೀಂ ಇಂಡಿಯಾ ಟೆಸ್ಟ್ ಆರಂಭಕ್ಕೆ ವಾರಕ್ಕೂ ಮುಂಚೆಯೇ ಚೆನ್ನೈನಲ್ಲಿ ಬೀಡು ಬಿಟ್ಟಿದ್ದು, ಅಭ್ಯಾಸದಲ್ಲಿ ನಿರತವಾಗಿದೆ. ಅದರಂತೆ ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಬ್ಯಾಟಿಂಗ್ ಪ್ರಾಕ್ಟೀಸ್‌ನಲ್ಲಿ ನಿರತರಾಗಿದ್ದರೆ, ಕುಲ್‌ದೀಪ್ ಯಾದವ್, ಸಿರಾಜ್, ಬೂಮ್ರಾ ಬೌಲಿಂಗ್ ಪ್ರಾಕ್ಟೀಸ್ ನಡೆಸಿದ್ದಾರೆ. ಅದರ ವಿಡಿಯೋವನ್ನು ಇದೀಗ ಬಿಸಿಸಿಐ ಶೇರ್ ಮಾಡಿದೆ.

ರೋಹಿತ್ ಪಡೆಯ ಸಮರಾಭ್ಯಾಸ

ಬೆವರು ಹರಿಸಿದ ಟೀಂ ಇಂಡಿಯಾ

ಬಿಸಿಸಿಐ ಹಂಚಿಕೊಂಡಿರುವ ವಿಡಿಯೋದಲ್ಲಿ ಆಟಗಾರರೆಲ್ಲರು ಅಭ್ಯಾಸ ನಡೆಸುತ್ತಿರುವುದನ್ನು ಕಾಣಬಹುದು. ಈ ಸಮಯದಲ್ಲಿ ಮುಖ್ಯ ಕೋಚ್ ಗೌತಮ್ ಗಂಭೀರ್ ಸಹ ಆಟಗಾರರೊಂದಿಗೆ ತಂತ್ರಗಾರಿಕೆಯಲ್ಲಿ ನಿರತರಾಗಿದ್ದಾರೆ. ಕುಲ್ದೀಪ್ ಯಾದವ್ ಮತ್ತು ಆರ್ ಅಶ್ವಿನ್ ನೆಟ್ಸ್‌ನಲ್ಲಿ ಬೌಲಿಂಗ್ ಮಾಡುತ್ತಿದ್ದರೆ, ಹೊಸ ಬೌಲಿಂಗ್ ಕೋಚ್ ಮೋರ್ನೆ ಮೊರ್ಕೆಲ್ ಅವರ ಮೇಲ್ವಿಚಾರಣೆಯಲ್ಲಿ ವೇಗದ ಬೌಲರ್‌ಗಳು ಸಾಕಷ್ಟು ಅಭ್ಯಾಸ ಮಾಡಿದರು. ಈ ವೇಳೆ ಆಫ್ರಿಕನ್ ದಂತಕಥೆ ತಂಡದ ಆಟಗಾರರಿಗೆ ವಿಶೇಷ ಸಲಹೆಯನ್ನೂ ನೀಡಿದರು.



ಆದ್ಯಾವುದೇ ಪಂದ್ಯವಾಗಿರಲಿ ಟೀಂ ಇಂಡಿಯಾ ಎಂದರೆ ಮುರಿದು ಬೀಳುವ ಏಕೈಕ ಬ್ಯಾಟ್ಸ್‌ಮನ್ ಎಂದರೆ ಅದು ಆಸ್ಟ್ರೇಲಿಯಾದ ಆರಂಭಿಕ ಬ್ಯಾಟರ್ ಟ್ರಾವಿಸ್ ಹೆಡ್. ಇದಕ್ಕೆ ನಿದರ್ಶನವಾಗಿ ಎರಡು ಐಸಿಸಿ ಟೂರ್ನಿಗಳ ಫೈನಲ್ ಪಂದ್ಯಗಳೇ ಸಾಕ್ಷಿಯಾಗಿವೆ. ಹೀಗಾಗಿಯೇ ಟ್ರಾವಿಸ್ ಹೆಡ್‌ಗೆ ಟೀಂ ಇಂಡಿಯಾ ಫೇವರೇಟ್ ಎದುರಾಳಿ ತಂಡ ಎಂದು ಎಲ್ಲಾರೂ ಹೇಳುತ್ತಾರೆ.

ಆದರೆ ಆ ಬಗ್ಗೆ ಇದೀಗ ಮಾತನಾಡಿರುವ ಟ್ರಾವಿಸ್ ಹೆಡ್, ಟೀಂ ಇಂಡಿಯಾ ತನ್ನ ನೆಚ್ಚಿನ ಎದುರಾಳಿ ತಂಡವಲ್ಲ ಎಂಬ ಶಾಕಿಂಗ್ ಹೇಳಿಕೆ ನೀಡಿದ್ದಾರೆ. 2023 ರಲ್ಲೇ ನಡೆದಿದ್ದ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ಮತ್ತು ಏಕದಿನ ವಿಶ್ವಕಪ್ ಫೈನಲ್‌ನಲ್ಲಿ ಟೀಂ ಇಂಡಿಯಾದ ಚಾಂಪಿಯನ್ ಕನಸಿಗೆ ತಣ್ಣೀರೆರಚ್ಚಿದ್ದೇ ಈ ಟ್ರಾವಿಸ್ ಹೆಡ್. ಈ ಎರಡೂ ಟೂರ್ನಿಗಳ ಫೈನಲ್‌ನಲ್ಲಿ ಹೆಡ್ ಭಾರತದ ವಿರುದ್ಧ ಶತಕ ಬಾರಿಸಿದ್ದರು. ಇದಲ್ಲದೆ 2024 ರ ಟಿ20 ವಿಶ್ವಕಪ್‌ನಲ್ಲಿಯೂ ಭಾರತದ ವಿರುದ್ಧ ಟ್ರಾವಿಸ್ ಹೆಡ್ 43 ಎಸೆತಗಳಲ್ಲಿ 76 ರನ್‌ಗಳ ಸ್ಫೋಟಕ ಇನ್ನಿಂಗ್ಸ್ ಆಡಿದ್ದರು. ಹೆಡ್ ಕ್ರೀಸ್‌ನಲ್ಲಿ ಇರುವವರೆಗೂ ಟೀಂ ಇಂಡಿಯಾಗೆ ಸೋಲು ಖಚಿತ ಎಂದು ಹೇಳಲಾಗುತ್ತಿತ್ತು. ಆದರೆ 76 ರನ್‌ಗಳಿಗೆ ಹೆಡ್ ಅವರ ಇನ್ನಿಂಗ್ಸ್ ಮುಗಿಯುವುದರೊಂದಿಗೆ ಆಸ್ಟ್ರೇಲಿಯಾದ ಸೋಲು ಕೂಡ ಖಚಿತವಾಗಿತ್ತು.

ಇನ್ನು 2023 ರಲ್ಲಿ ನಡೆದಿದ್ದ ಎರಡನೇ ಆವೃತ್ತಿಯ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನ ಫೈನಲ್‌ನಲ್ಲಿ ಹೆಡ್ ಭಾರತದ ವಿರುದ್ಧ 163 ರನ್‌ಗಳ ಅದ್ಭುತ ಇನ್ನಿಂಗ್ಸ್ ಆಡಿದ್ದರು. ಇದರ ಹೊರತಾಗಿ ಅವರು ಏಕದಿನ ವಿಶ್ವಕಪ್ ಫೈನಲ್‌ನಲ್ಲಿ 137 ರನ್ ಬಾರಿಸಿದ್ದರು.

ಈ ಎರಡೂ ಫೈನಲ್‌ಗಳಲ್ಲಿ ಹೆಡ್‌ಗೆ ಪಂದ್ಯ ಶ್ರೇಷ್ಠ ಪ್ರಶಸ್ತಿ ನೀಡಲಾಗಿತ್ತು. ಮುಂಬರುವ ಬಾರ್ಡರ್ ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿಯ ಬಗ್ಗೆ ಸ್ಟಾರ್ ಸ್ಪೋರ್ಟ್ಸ್ ಜೊತೆಗೆ ಮಾತನಾಡಿದ್ದ ಹೆಡ್, ಟೀಂ ಇಂಡಿಯಾ ನನ್ನ ನೆಚ್ಚಿನ ತಂಡ ಎಂದು ನಾನು ಭಾವಿಸುವುದಿಲ್ಲ. ಆಸ್ಟ್ರೇಲಿಯಾ ತಂಡ ಟೀಂ ಇಂಡಿಯಾ ವಿರುದ್ಧ ಹೆಚ್ಚು ಪಂದ್ಯಗಳನ್ನು ಆಡುತ್ತದೆ. ಇದಲ್ಲದೆ ಕಳೆದ ಕೆಲವು ವರ್ಷಗಳಿಂದ ನಾನು ಉತ್ತಮ ಫಾರ್ಮ್‌ನಲ್ಲಿದ್ದೇನೆ ಎಂದು ನಾನು ಭಾವಿಸುತ್ತೇನೆ ಎಂದಿದ್ದಾರೆ. ಟ್ರಾವಿಸ್ ಹೆಡ್ ಸದ್ಯ ಇಂಗ್ಲೆಂಡ್‌ನಲ್ಲಿ ಸದ್ದು ಮಾಡುತ್ತಿದ್ದಾರೆ. ಸ್ಕಾಟ್ಲೆಂಡ್ ವಿರುದ್ಧ ಟಿ20 ಸರಣಿಯಲ್ಲಿ ಜಯಭೇರಿ ಬಾರಿಸಿರುವ ಆಸ್ಟ್ರೇಲಿಯಾ ತಂಡ ಇಂಗ್ಲೆಂಡ್ ಪ್ರವಾಸದಲ್ಲಿದೆ. ಅದ್ಭುತ ಫಾರ್ಮ್‌ನಲ್ಲಿದ್ದ ಹೆಡ್ ಮೊದಲ ಟಿ20ಯಲ್ಲಿ ಬಿರುಸಿನ ಇನ್ನಿಂಗ್ಸ್ ಆಡಿ ತಂಡವನ್ನು ಗೆಲುವಿನತ್ತ ಮುನ್ನಡೆಸಿದ್ದರು. ಆದರೆ ಎರಡನೇ ಟಿ20ಯಲ್ಲಿ ಹೆಡ್ ಬ್ಯಾಟ್ ಅಬ್ಬರಿಸಲಿಲ್ಲ. ಇದರ ಜೊತೆಗೆ ತಂಡ ಕೂಡ ಸೋಲೊಪ್ಪಿಕೊಂಡಿತು.

ಕೊಹ್ಲಿಯನ್ನು ನೋಡಿ ಕಲಿ

ಪಾಕಿಸ್ತಾನ ಸೀಮಿತ ಓವರ್‌ಗಳ ನಾಯಕ ಬಾಬರ್ ಆಝಂ ಕೆಲವು ದಿನಗಳಿಂದ ಕಳಪೆ ಫಾರ್ಮ್‌ನಿಂದ ಬಳಲುತ್ತಿದ್ದಾರೆ. ಹೀಗಾಗಿಯೇ ಬಾಬರ್ ನಾಯಕತ